ಸಂಪಾದಕರು: ರವಿಕುಮಾರ್ ಸಿ.ಹೆಚ್.

RNI: KARKAN/2021/80805

ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

ಸೂರ್ಯ ಪ್ರಗತಿ

SURYA PRAGATHI Kannada daily

SP NEWS ಡಿಜಿಟಲ್ ನ್ಯೂಸ್ ಕಹಾನಿ

ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume: 05 Issue:128
ಸಂಪುಟ: 05 ಸಂಚಿಕೆ: 128
Date:05-06-2026 Friday
RNI NO : KARKAN/2021/80805
L2/RNP-1285/TMR/2025-27
Page :4
ಪುಟ : 4
Price: 1.00
ಬೆಲೆ: 1.00 ರೂ

ಜನ ಸಮುದಾಯಕ್ಕೆ ಹತ್ತಿರವಾಗಿ ಕೆಲಸ ಮಾಡಿ : ಡಿಸಿಎಂ ಜಿ.ಪರಮೇಶ್ವರ

ಸೂರ್ಯಪ್ರಗತಿನ್ಯೂಸ್.ಕಾಂ



ಬೆಂಗಳೂರು, ಒಳ್ಳೆಯ ಆಡಳಿತ ನೀಡುವುದಾಗಿ ರಾಜ್ಯದ ಜನತೆಗೆ ಭರವಸೆ ನೀಡಿದ್ದೇವೆ. ಸರ್ಕಾರದ ಯೋಜನೆಗಳು ನಿಗದಿತ ಸಮಯದೊಳಗೆ ಜನರಿಗೆ ತಲುಪಲು ಜವಬ್ದಾರಿ ಮತ್ತು ಪಾರದರ್ಶಕವಾಗಿ ಕೆಲಸ ಮಾಡಬೇಕು ಎಂದು ಉಪ ಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ ಅವರು ಹೇಳಿದರು. ವಿಧಾನಸೌಧ ಸಮ್ಮೇಳನ ಸಭಾಂಗಣದಲ್ಲಿ ಹಿರಿಯ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಮುಖ್ಯಮಂತ್ರಿಗಳೊಂದಿಗೆ ಪಾಲ್ಗೊಂಡು, ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದರು.

ಕಳೆದ ಮೂರು ವರ್ಷಗಳಲ್ಲಿ ಎಲ್ಲ ಅಧಿಕಾರಿಗಳು ಬದ್ಧತೆಯಿಂದ ಕೆಲಸ ಮಾಡಿ, ಸರ್ಕಾರಕ್ಕೆ ಒಳ್ಳೆಯ ಹೆಸರು ತಂದಿದ್ದೀರಿ. ಅನೇಕ ಭರವಸೆಗಳನ್ನು ಈಡೇರಿಸಲಾಗಿದೆ. ನೂತನ ಮುಖ್ಯಮಂತ್ರಿಗಳ ನೇತೃತ್ವದ ಸರ್ಕಾರವೂ ಅಪಾರ ನಿರೀಕ್ಷೆ ಇಟ್ಟುಕೊಂಡಿದ್ದಾರೆ. ಜನಸಮುದಾಯಕ್ಕೆ ಹತ್ತಿರವಾಗಿ ಕೆಲಸ ಮಾಡಬೇಕು. ನಿಮ್ಮ ಸೇವೆ ಜನಸಮುದಾಯಕ್ಕೆ ಅನುಕೂಲವಾಗಬೇಕು ಎಂದು ಅವರು ಹೇಳಿದರು.

ಯುವ ಸಮುದಾಯ ಸೂಕ್ಷ್ಮವಾಗಿ ನೋಡುತ್ತಿದೆ. ಯುವಕರ ಆಪೇಕ್ಷೆಯಂತೆ ಆಡಳಿತ ನೀಡಬೇಕು ಎಂಬುದು ಸರ್ಕಾರದ ದೃಷ್ಟಿಕೋನವಾಗಿದೆ. ಬರೀ ಭರವಸೆಗಳನ್ನು ಪೂರ್ಣಗೊಳಿಸುವುದಷ್ಟೆ ಅಲ್ಲ. ರಾಜ್ಯದ ಅಭಿವೃದ್ಧಿಗೆ ದೃಷ್ಟಿಕೋನ ನೀಡಬೇಕಿದೆ. ಕರ್ನಾಟಕ ಪ್ರಗತಿಪರ ರಾಜ್ಯ ಎಲ್ಲರೂ ಕರ್ನಾಟಕದತ್ತ ಗಮನ ಹರಿಸುತ್ತಾರೆ. ಇದನ್ನು ನಾವು ಯಾವ ರೀತಿ ಸಾಕಾರಗೊಳಿಸಬೇಕು ಎಂಬುದು ಸಭೆಯ ಮೂಲ ಉದ್ದೇಶವಾಗಿದೆ ಎಂದರು.

ಅನೇಕ ಸಂದರ್ಭಗಳಲ್ಲಿ ಅಭಿವೃದ್ಧಿಯಲ್ಲಿ ಕರ್ನಾಟಕ ಮುಂಚೂಣಿಯಲ್ಲಿದೆ ಎಂದು ಗುರುತಿಸಲಾಗಿದೆ. ಆ ಅವಕಾಶ ಮತ್ತೆ ಬಂದಿದೆ. ಎಲ್ಲ ಮಾನದಂಡಗಳಲ್ಲಿಯೂ ನಮ್ಮ ರಾಜ್ಯ ಅಗ್ರಸ್ಥಾನದಲ್ಲಿರಬೇಕು.

ಸಾಮಾನ್ಯ ರೈತ ತಹಶೀಲ್ದಾರರ ಕಚೇರಿಗೆ ಹೋಗಿ, ತನ್ನ ಕೆಲಸ ಮುಗಿಸಿಕೊಂಡು ಸಂತೋಷದಿಂದ ಹೊರಬರಬೇಕು. ತನಗಾದ ಅನ್ಯಾಯಕ್ಕಾಗಿ ಪೊಲೀಸ್ ಠಾಣೆಗೆ ದೂರು ಕೊಡುವ ವ್ಯಕ್ತಿಗೆ ನ್ಯಾಯ ಸಿಗುತ್ತದೆ ಎಂಬ ಭರವಸೆಯಿಂದ ಸಮಾಧಾನವಾಗಬೇಕು. ಈ ಕೆಲಸ ಅನೇಕ ಸಂದರ್ಭಗಳಲ್ಲಿ ಅಗುತ್ತಿಲ್ಲ. ಅಧಿಕಾರಿಗಳು ಹೆಚ್ಚು ಗಮನ ಹರಿಸಬೇಕು. ಕಡತ ವಿಲೇವಾರಿ ಆದರೆ ಸಾಕು, ಕೆಲಸ ಮುಗಿಯಿತು ಎಂಬ ಮನಸ್ಥಿತಿ ನಮ್ಮ ಅಧಿಕಾರಿಗಳಿಗೆ ಇದೆ . ಈ ರೀತಿಯ ಯೋಚನೆ ಬದಲಾಗಬೇಕು ಎಂದು ಹೇಳಿದರು.

ಒಟ್ಟು ಎಂಟು ವರ್ಷ ಪೊಲೀಸ್ ಇಲಾಖೆಯ ಜವಾಬ್ದಾರಿಯನನ್ನು ನಿಭಾಯಿಸಿದ್ದೇನೆ. ಪೊಲೀಸ್ ಇಲಾಖೆಯು ಸರ್ಕಾರದ ಮುಖ. ಉತ್ತಮವಾಗಿ ಕೆಲಸ ಮಾಡಬೇಕು. ಕಳೆದ ಮೂರು ವರ್ಷದಲ್ಲಿ ರಾಜ್ಯದಲ್ಲಿ ಯಾವುದೇ ಕೋಮು ಸಂಘರ್ಷ, ಗಲಭೆಗಳು ಆಗದಂತೆ ಕೆಲಸ ಮಾಡಲಾಗಿದೆ. ದಕ್ಷಿಣ ಕನ್ನಡ, ಉಡುಪಿ, ಶಿವಮೊಗ್ಗದಲ್ಲಿ ಸ್ಪೆಷಲ್ ಆಕ್ಷನ್ ಫೋರ್ಸ್ ಸ್ಥಾಪನೆಯಾದ ಬಳಿಕ ಎಲ್ಲ ರೀತಿಯ ಗಲಭೆಗಳು ಸಂಪೂರ್ಣವಾಗಿ ನಿಯಂತ್ರಣಕ್ಕೆ ಬಂದಿದೆ. ಈ ನಿಟ್ಟಿನಲ್ಲಿ ಮತ್ತಷ್ಟು ಮುನ್ನೆಚ್ಚರಿಕೆ ವಹಿಸಿ ಪೊಲೀಸ್ ಇಲಾಖೆ ಕೆಲಸ ಮಾಡಬೇಕಿದೆ ಎಂದರು. ಮಾದಕ ವಸ್ತುಗಳ ವಿರುದ್ಧ ಕಳೆದ ಮೂರು ವರ್ಷಗಳಿಂದ ಸಮರ ಸಾರಲಾಗಿದೆ. ಕೋಟ್ಯಂತರ ರೂ. ಮೌಲ್ಯದ ಡ್ರಗ್ಸ್ ಪತ್ತೆ ಹಚ್ಚಲಾಗಿದೆ. ಯುವಕರನ್ನು ಭವಿಷ್ಯವನ್ನು ಹಾಳು ಮಾಡುತ್ತಿರುವ ಡ್ರಗ್ಸ್ ದಂಧೆಯನ್ನು ಸಂಪೂರ್ಣವಾಗಿ ಮಟ್ಟ ಹಾಕಬೇಕು. ಡ್ರಗ್ಸ್ ಚಟುವಟಿಕೆಗಳ ಮೇಲೆ ಹೆಚ್ಚಿನ ನಿಗಾವಹಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಸಚಿವರಾದ ರಾಮಲಿಂಗರೆಡ್ಡಿ, ಈಶ್ವರ್ ಖಂಡ್ರೆ, ಯು.ಟಿ.ಖಾದರ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್, ರಾಜ್ಯ ಪೊಲೀಸ್ ಮಹಾನಿರ್ದೇಶಕರಾದ ಡಾ. ಎಂ.ಎ.ಸಲೀಂ ಅವರು ಹಾಗೂ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳು ಇದ್ದರು.

ಮುಖ್ಯಮಂತ್ರಿಯಾ ಡಿಕೆ ಶಿವಕುಮಾರ್ ಅವರಿಂದ ಆಡಳಿತ ಯಂತ್ರಕ್ಕೆ ಚುರುಕು

ಸೂರ್ಯಪ್ರಗತಿನ್ಯೂಸ್.ಕಾಂ



ಡಿಕೆ ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕಾರ ಮಾಡುತ್ತಿದ್ದಂತೆಯೇ ಆಡಳಿತ ಯಂತ್ರಕ್ಕೆ ಚುರುಕು ಮುಟ್ಟಿಸಲು ಮುಂದಾಗಿದ್ದಾರೆ. ಇದಕ್ಕೆ ಪೂರಕವೆಂಬಂತೆ ವಿಧಾನಸೌಧದಲ್ಲಿ ರಾಜ್ಯದ ಎಲ್ಲಾ ಇಲಾಖೆಗಳ ಕಾರ್ಯದರ್ಶಿಗಳ ವಿಶೇಷ ಸಭೆ ನಡೆಸಿದ್ದು, ಖಡಕ್ ಸಲಹೆ ಸೂಚನೆಗಳನ್ನು ನೀಡಿದ್ದಾರೆ. ಅಲ್ಲದೇ ರಾಜ್ಯದ ಅಭಿವೃದ್ಧಿ, ಕಾನೂನು ಸುವ್ಯಸ್ಥೆ ಹಾಗೂ ಸಾರ್ವಜನಿಕರ ಸಮಸ್ಯೆಗೆ ಸ್ಪಂದಿಸುವ ಕುರಿತು ಅಧಿಕಾರಿಗಳಿಗೆ ಪಾಠ ಮಾಡಿದ್ದಾರೆ. ಇನ್ನು ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಡಿಕೆ ಶಿವಕುಮಾರ್, ಸಾರ್ವಜನಿಕ ಕುಂದು ಕೊರತೆಗಳ ನಿರ್ವಹಣೆಗೆ ಮತ್ತು ಅನಿವಾಸಿ ಭಾರತೀಯರಿಗೆ ಸಂಬಂಧಪಟ್ಟಂತೆ ಪ್ರತ್ಯೇಕ ಸಚಿವಾಲಯಗಳನ್ನು ರಚಿಸಲು ತೀರ್ಮಾನಿಸಲಾಗಿದೆ ಎಂದು ಘೋಷಿಸಿದರು.

ಸಾರ್ವಜನಿಕ ಕುಂದುಕೊರತೆಗೆ ಪ್ರತ್ಯೇಕ ಸಚಿವಾಲಯ

ಸಭೆ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಡಿಕೆ ಶಿವಕುಮಾರ್, ಸಾರ್ವಜನಿಕ ಕುಂದುಕೊರತೆಗೆ ಪ್ರತ್ಯೇಕ ಸಚಿವಾಲಯ ರಚನೆ ಮಾಡಲಾಗುವುದು. ದಿನಕ್ಕೆ ಎರಡು ಮೂರು ತಂಡ ಪ್ರತಿಭಟನೆ ಮಾಡುತ್ತಿರುತ್ತದೆ. ಅವರಅಹವಾಲುಕೇಳಬೇಕಾಗಿದೆ. ಯಾಕಾಗಿ ಪ್ರತಿಭಟನೆ ಮಾಡುತ್ತಿದ್ದಾರೆ? ಅವರ ಬೇಡಿಕೆಗಳೇನು? ಸಮಸ್ಯೆಗಳೇನು? ಎಂಬ ಬಗ್ಗೆ ತಿಳಿದುಕೊಳ್ಳಬೇಕಾಗಿದೆ. ಬಳಿಕ ಅವರ ಸಮಸ್ಯೆಗೆ ಸ್ಪಂದಿಸಲು, ಪ್ರತ್ಯೇಕ ಸಚಿವಾಲಯ ಮಾಡಲು ತೀರ್ಮಾನ ಮಾಡಲಾಗಿದೆ ಎಂದು ತಿಳಿಸಿದರು.

ಪ್ರತಿನಿತ್ಯ ತಮ್ಮ ಹಕ್ಕುಗಳಿಗಾಗಿ ಅನೇಕ ಹೋರಾಟಗಾರರು, ಸಂಘಟನೆಗಳು ಬೀದಿಗಿಳಿದು ಪ್ರತಿಭಟನೆ ನಡೆಸುತ್ತವೆ.ಅವರ ಸಮಸ್ಯೆಗಳನ್ನು ಆಲಿಸುವುದು ಸರ್ಕಾರದ ಕರ್ತವ್ಯ.ಹೀಗಾಗಿ ಹೋರಾಟಗಾರರ ಆಹವಾಲುಗಳನ್ನು ಆಲಿಸಲು ಪ್ರತ್ಯೇಕ ಮಂತ್ರಿ ಹಾಗೂ ಸಚಿವಾಲಯವನ್ನು ಮಾಡಲಿದ್ದೇವೆ. ವಾರಕ್ಕೊಬ್ಬ ಸಚಿವರು ಭೇಟಿ ಮಾಡಿ ಮಾತನಾಡಲಿದ್ದಾರೆ. ಹೋರಾಟಗಾರರ ನೋವಿಗೆ ಸ್ಪಂದಿಸುವ ಕೆಲಸವನ್ನು ಈ ಸಚಿವಾಲಯ ಮಾಡಲಿದೆ ಎಂದು ವಿವರಿಸಿದರು.

ಮುಸ್ಲಿಂ ಸಮುದಾಯಕ್ಕೆ ಐದು ಸಚಿವ ಸ್ಥಾನ ಕೊಡಿ;ಕಾಂಗ್ರೆಸ್‌ಗೆ ಮೌಲ್ವಿಗಳ ನೇರ ಎಚ್ಚರಿಕೆ



ಕರ್ನಾಟಕದಲ್ಲಿ ಐವರು ಮುಸ್ಲಿಂ ಸದಸ್ಯರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕೆಂದು ಮುಸ್ಲಿಂ ಧಾರ್ಮಿಕ ಮುಖಂಡರು ಮತ್ತು ಮೌಲ್ವಿಗಳು ಒತ್ತಾಯಿಸಿದ್ದಾರೆ. ಇದೇ ವೇಳೆ, ಕಾಂಗ್ರೆಸ್ ಮುಸ್ಲಿಂ ಮತದಾರರ ಬೆಂಬಲದೊಂದಿಗೆ ರಾಜ್ಯದಲ್ಲಿ ಸರ್ಕಾರ ಅಧಿಕಾರಕ್ಕೆ ಬಂದಿದೆ ಎಂದು ಪ್ರತಿಪಾದಿಸಿದ್ದಾರೆ. ತಮ್ಮ ಬೇಡಿಕೆಯನ್ನು ಈಡೇರಿಸದಿದ್ದರೆ ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಪಕ್ಷವು ಗಂಭೀರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಕಾಂಗ್ರೆಸ್ ನಾಯಕತ್ವಕ್ಕೆ ಎಚ್ಚರಿಕೆ ನೀಡಿದ್ದಾರೆ.

ಹುಬ್ಬಳ್ಳಿಯ ಬೆಳ್ಳಿನಗರದ ಹಜರತ್ ಸೈಯದ್ ಫತೇಹ್ ಶಾ ವಾಲಿ ದರ್ಗಾದಲ್ಲಿ ನಡೆದ ಮುಸ್ಲಿಂ ನಾಯಕರು ಮತ್ತು ಧರ್ಮಗುರುಗಳ ಸಭೆಯಲ್ಲಿ ಈ ಬೇಡಿಕೆಯನ್ನು ಇಟ್ಟಿದ್ದಾರೆ. ಅಲ್ಲಿ ವಿಶೇಷ ಪ್ರಾರ್ಥನೆಗಳನ್ನು ಸಹ ಸಲ್ಲಿಸಿದರು. ಜಮೀರ್ ಅಹ್ಮದ್ ಖಾನ್, ಎನ್ ಹ್ಯಾರಿಸ್, ತನ್ವೀರ್ ಸೇಠ್ ಮತ್ತು ಸಲೀಮ್ ಅಹ್ಮದ್ ಸೇರಿದಂತೆ ಹಿರಿಯ ಕಾಂಗ್ರೆಸ್ ನಾಯಕರನ್ನು ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳುವಂತೆಯೂ ಕರೆ ನೀಡಲಾಯಿತು.\

ಐದು ಮುಸ್ಲಿಮರಿಗೆ ಸಚಿವ ಸಂಪುಟದಲ್ಲಿ ಸ್ಥಾನ ನೀಡದಿದ್ದರೆ, ಮುಂದಿನ ದಿನಗಳಲ್ಲಿ ನೀವು ಗಂಭೀರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ. ಆ ಪರಿಸ್ಥಿತಿಗೆ ನೀವೇ ಜವಾಬ್ದಾರರು ಎಂದು ನಾನು ಸ್ಪಷ್ಟಪಡಿಸಲು ಬಯಸುತ್ತೇನೆ ಎಂದು ಧಾರ್ಮಿಕ ಮುಖಂಡರೊಬ್ಬರು ಹೇಳಿದರು. ಕರ್ನಾಟಕದಲ್ಲಿ ಕಾಂಗ್ರೆಸ್ ಅನ್ನು ಅಧಿಕಾರಕ್ಕೆ ತರುವಲ್ಲಿ ಮುಸ್ಲಿಂ ಸಮುದಾಯವು ಪ್ರಮುಖ ಪಾತ್ರವಹಿಸಿದೆ. ಸರ್ಕಾರದಲ್ಲಿ ಹೆಚ್ಚಿನ ಪ್ರಾತಿನಿಧ್ಯಕ್ಕೆ ಅರ್ಹವಾಗಿದೆ ಎಂದು ನಾಯಕರು ಸಮರ್ಥಿಸಿಕೊಂಡರು.

ಮುಸ್ಲಿಮರೆಲ್ಲರೂ ಒಗ್ಗೂಡಿ ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ರಚಿಸಬೇಕು ಎಂಬ ನಂಬಿಕೆಯೊಂದಿಗೆ ಮತ ಚಲಾಯಿಸಿದ್ದೇವೆ. ಈ ಸರ್ಕಾರವನ್ನು ಅಧಿಕಾರಕ್ಕೆ ತರಲು ನಾವು ಸಹಾಯ ಮಾಡಿದ್ದೇವೆ. ನಮ್ಮ ಸಮುದಾಯದ ಉಳಿದ ನಾಲ್ವರು ಹಿರಿಯ ನಾಯಕರಿಗೂ ಸಚಿವ ಸ್ಥಾನಗಳನ್ನು ನೀಡಬೇಕೆಂದು ನಾವು ಕೇಳುತ್ತಿದ್ದೇವೆ. ಇಂದು, ನಾವೆಲ್ಲರೂ ಇಲ್ಲಿ ಒಟ್ಟುಗೂಡಿದ್ದೂ ಸಾಮೂಹಿಕವಾಗಿ ಈ ವಿನಂತಿಯನ್ನು ಮಾಡಿದ್ದೇವೆ. ನಾವು ಒಟ್ಟಾಗಿ ಈ ಬೇಡಿಕೆಯನ್ನು ಮುಂದುವರಿಸುತ್ತೇವೆ ಎಂದು ಮತ್ತೊಬ್ಬ ಧರ್ಮಗುರು ಹೇಳಿದರು. ವಿಧಾನಸಭಾ ಸ್ಪೀಕರ್ ಯು ಟಿ ಖಾದರ್ ಅವರಿಗೆ ಈಗಾಗಲೇ ಪ್ರಮುಖ ಸಾಂವಿಧಾನಿಕ ಸ್ಥಾನದಲ್ಲಿ ಅವಕಾಶ ನೀಡಲಾಗಿದೆ ಎಂದು ಸಭೆಯು ಗಮನಿಸಿತು ಮತ್ತು ಇತರ ನಾಲ್ವರು ಹಿರಿಯ ಮುಸ್ಲಿಂ ಕಾಂಗ್ರೆಸ್ ನಾಯಕರನ್ನು ಸಹ ಸಂಪುಟಕ್ಕೆ ಸೇರಿಸಿಕೊಳ್ಳಬೇಕು ಎಂದು ವಾದಿಸಿದರು.

ಕೇರಳಕ್ಕೆ ನೈಋತ್ಯ ಮಾನ್ಸೂನ್ ಆಗಮನ: ಕರ್ನಾಟಕದಲ್ಲಿ 6 ದಿನ ಭಾರಿ ಮಳೆ

ತೀವ್ರ ಕುತೂಹಲ ಕೆರಳಿಸಿದ್ದ ಮಾನ್ಸೂನ್ ಮಾರುತಗಳು 4 ದಿನಗಳ ತಡವಾಗಿ ಕೊನೆಗೂ ಕೇರಳ ಪ್ರವೇಶ ಮಾಡಿದ್ದು, ಭಾರಿ ಮಳೆ ಸುರಿಸುತ್ತಿದೆ. ಮೇ 26ಕ್ಕೆ ಮುಂಗಾರು ಪ್ರವೇಶ ಮಾಡಲಿದೆ ಎಂದು ಹವಾಮಾನ ಇಲಾಖೆ ಅಂದಾಜಿಸಿತ್ತು. ಆದ್ರೆ, ಒಂದು ವಾರ ತಡವಾಗಿ ಕೇರಳಕ್ಕೆ ಮುಂಗಾರು ಪ್ರವೇಶಿಸಿದೆ. ಇದರ ಬೆನ್ನಲ್ಲೇ ಇತ್ತ ಕರ್ನಾಟಕದಲ್ಲೂ ಮುಂಗಾರು ಮಳೆ ಅಬ್ಬರಿಸಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಕೇರಳಕ್ಕೆ ಮುಂಗಾರು ಪ್ರವೇಶ ಮಾಡಿದ್ದರಿಂದ ಕರ್ನಾಟಕದಲ್ಲೂ ಮಳೆಗಾಲ ಆರಂಭವಾಗಲಿದ್ದು, ಮುಂದಿನ 6 ದಿನಗಳ ಕಾಲ ರಾಜ್ಯದ ಹಲವೆಡೆ ಮಳೆಯಾಗಲಿದೆ.

ಕರ್ನಾಟಕದಲ್ಲಿ ಭಾರಿ ಮಳೆ

ಕರ್ನಾಟಕದ ಮಲೆನಾಡು ಹಾಗೂ ಕರಾವಳಿ ಭಾಗಗಳಲ್ಲಿ ಈಗಾಗಲೇ ಮಳೆಯ ಅಬ್ಬರ ಶುರುವಾಗಿದೆ. ಇನ್ನುಳಿಂದಂತೆ ಇಂದಿನಿಂದ ಮುಂದಿನ 6 ದಿನಗಳ ಕಾಲ ರಾಜ್ಯದ ಹಲವೆಡೆ ಮುಂಗಾರು ಮಳೆ ವ್ಯಾಪಿಸಲಿದೆ ಎನ್ನಲಾಗಿದೆ.

ಉತ್ತರ ಒಳನಾಡು, ದಕ್ಷಿಣ ಒಳನಾಡು ಮತ್ತು ಕರಾವಳಿ ಕರ್ನಾಟಕ ಭಾಗದಲ್ಲಿ ಇಂದಿನಿಂದ ಜೂನ್ 9ರವರೆಗೂ ಮಳೆಯಾಗಲಿದೆ ಎಂದು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ ಮಾಹಿತಿ ನೀಡಿದೆ.

ಕರಾವಳಿಗೆ ಆರೆಂಜ್ ಅಲರ್ಟ್

ಕರಾವಳಿ ಜಿಲ್ಲೆಗಳಾದ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆ ಮತ್ತು ಉತ್ತರ ಒಳನಾಡು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದ್ದು, ರಾಜ್ಯದ ಒಳನಾಡು ಜಿಲ್ಲೆಗಳಲ್ಲಿ ಯೆಲ್ಲೋ ಅಲರ್ಟ್ ನೀಡಲಾಗಿದೆ. ಜೂನ್ 4 ರಂದು ವ್ಯಾಪಕವಾದ ಹಗುರದಿಂದ ಸಾಧಾರಣ ಮಳೆಯಾಗುವ ನಿರೀಕ್ಷೆ ಇದೆ. ಜೂನ್ 5 ರಿಂದ ಜೂ. 10 ರವರೆಗೆ ಮಳೆಯ ತೀವ್ರತೆ ಗಮನಾರ್ಹವಾಗಿ ಹೆಚ್ಚಾಗಲಿದ್ದು, ಕರಾವಳಿ ಭಾಗದಲ್ಲಿ ವ್ಯಾಪಕ ಭಾರಿ ಮಳೆಯಾಗುವ ಸಾಧ್ಯತೆಯಿದೆ.

ಮುನ್ಸೂಚನೆಯ ಸಂಪೂರ್ಣ ಅವಧಿಯಲ್ಲಿ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಅಲ್ಲಲ್ಲಿ ವ್ಯಾಪಕವಾದ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

ತಂತ್ರಜ್ಞಾನದ ಯುಗದಲ್ಲಿ ಮೌಲ್ಯಯುತ ಬುದ್ಧಿವಂತಿಕೆ ಅಗತ್ಯ ಘಟಿಕೋತ್ಸವದಲ್ಲಿ ಪ್ರೊ. ದೇಬಬ್ರತ ದಾಸ್



ತುಮಕೂರು: ಎಐ ತಂತ್ರಜ್ಞಾನದ ಅರಿವಿರುವ ಪರಿಣತರು ಭವಿಷ್ಯದಲ್ಲಿ ತಂತ್ರಜ್ಞಾನ ತಿಳಿಯದವರ ಸ್ಥಾನವನ್ನು ಪಡೆದುಕೊಳ್ಳಲಿದ್ದಾರೆ. ಆದರೆ, ಎಐ ತಂತ್ರಜ್ಞಾನಕ್ಕೆ ಮಾನವ ಸಹಜವಾದ ಸಹಾನುಭೂತಿ, ಸಂದರ್ಭೋಚಿತ ನಿರ್ಧಾರ ಸಾಮರ್ಥ್ಯ, ಆಳವಾದ ಅಂತಃಪ್ರಜ್ಞೆ ಮತ್ತು ಸೃಜನಶೀಲತೆಯನ್ನು ನಕಲು ಮಾಡಲು ಸಾಧ್ಯವಿಲ್ಲ. ಕಲಿಯುವುದು, ಕಲಿತದ್ದನ್ನು ಬಿಡುವುದು ಮತ್ತು ಮರುಕಳಿಸುವುದು ಇಂದಿನ ಅಗತ್ಯವಾಗಿದೆ ಎಂದು ಅಂತರರಾಷ್ಟ್ರೀಯ ಮಾಹಿತಿ ತಂತ್ರಜ್ಞಾನ ಸಂಸ್ಥೆಯ ನಿರ್ದೇಶಕರಾದ ಪ್ರೊ. ದೇಬಬ್ರತ ದಾಸ್ ಅಭಿಪ್ರಾಯಪಟ್ಟರು.

ತುಮಕೂರು ವಿಶ್ವವಿದ್ಯಾನಿಲಯದ 19ನೇ ಘಟಿಕೋತ್ಸವದಲ್ಲಿ ಪದವಿ ಪ್ರದಾನ ಮಾಡಿ ಘಟಿಕೋತ್ಸವ ಭಾಷಣ ಮಾಡಿದರು.

ಭಾರತವು ಇಂದು ಕೇವಲ ತಂತ್ರಜ್ಞಾನ ಬಳಸುವ ದೇಶವಾಗಿ ಉಳಿದಿಲ್ಲ, ಬದಲಿಗೆ ಜಗತ್ತಿಗೇ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ನಿರ್ಮಿಸಿಕೊಡುತ್ತಿದೆ. ಐಐಐಟಿ-ಬೆಂಗಳೂರು ಮುನ್ನಡೆಸುತ್ತಿರುವ ಮಾಡ್ಯುಲರ್ ಓಪನ್ ಸೋರ್ಸ್ ಐಡೆಂಟಿಟಿ ಪ್ಲಾಟ್ ಫಾರ್ಮ್ ಉತ್ಪನ್ನವು ಇಂದು ಜಗತ್ತಿನ 29 ದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿದೆ. ಇದರಿಂದಾಗಿ ತುಮಕೂರಿನಲ್ಲಿ ಕುಳಿತಿರುವ ವಿದ್ಯಾರ್ಥಿಗೂ ಸ್ಯಾನ್ ಫ್ರಾನ್ಸಿಸ್ಕೋ ಅಥವಾ ಟೋಕಿಯೋದಲ್ಲಿರುವ ವ್ಯಕ್ತಿಯಷ್ಟೇ ಸಮಾನ ಜಾಗತಿಕ ಅವಕಾಶಗಳು ಸಿಗುತ್ತಿವೆ ಎಂದರು.

ತುಮಕೂರು ಜಿಲ್ಲೆಯು ಶ್ರೀ ಸಿದ್ದಗಂಗಾ ಮಠದ ಪರಮಪೂಜ್ಯ ಲಿಂಗೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ ಆಶೀರ್ವಾದ ಪಡೆದ ಪುಣ್ಯಭೂಮಿಯಾಗಿದೆ. ಅನ್ನ, ಅಕ್ಷರ ಮತ್ತು ಆಶ್ರಯ ಎಂಬ ತ್ರಿವಿಧ ದಾಸೋಹಗಳ ತಳಹದಿಯ ಮೇಲೆ ನಿರ್ಮಾಣವಾಗಿರುವ ಈ ನಾಡಿನ ವಿದ್ಯಾರ್ಥಿಗಳು, ಇಂದು ಭಾರತದ ಹೈ-ಟೆಕ್ ಮತ್ತು ಕೈಗಾರಿಕಾ ಕ್ಷೇತ್ರದ ಹೊಸ್ತಿಲಲ್ಲಿ ನಿಂತಿದ್ದಾರೆ ಎಂದರು. ಏಷ್ಯಾದಲ್ಲೇ ಅತಿ ದೊಡ್ಡದಾದ ಎಚ್.ಎ.ಎಲ್ ಹೆಲಿಕಾಪ್ಟರ್ ಉತ್ಪಾದನಾ ಘಟಕ ಹಾಗೂ ತಂತ್ರಜ್ಞಾನದ ರಾಜಧಾನಿ ಬೆಂಗಳೂರು ಇಲ್ಲಿಗೆ ಸಮೀಪದಲ್ಲಿದೆ. ಈ ಮೂಲಕ ತುಮಕೂರು ಭಾರತದ ಗ್ರಾಮೀಣ ಆತ್ಮ ಮತ್ತು ನಗರೀಕೃತ ತಾಂತ್ರಿಕ ಭವಿಷ್ಯದ ಪರಿಪೂರ್ಣ ಸಮ್ಮಿಲನವಾಗಿದೆ. ಪದವಿ ಸ್ವೀಕರಿಸುತ್ತಿರುವ ವಿದ್ಯಾರ್ಥಿಗಳ ಸಮೂಹ ಕರ್ನಾಟಕದ ಉಜ್ವಲ ಭವಿಷ್ಯವನ್ನು ಮತ್ತು ಆ ಮೂಲಕ ಮುನ್ನಡೆಯುತ್ತಿರುವ ವಿಕಸಿತ ಭಾರತದ ನಿರ್ಣಾಯಕ ಶಕ್ತಿ ಎಂದರು.

ಭಸ್ಮಾಸುರನಿಗೆ ಅಪಾರ ಬುದ್ಧಿವಂತಿಕೆ ಮತ್ತು ಶಿಸ್ತು ಇತ್ತು. ಆದರೆ ನೈತಿಕತೆ ಮತ್ತು ವಿವೇಕವಿಲ್ಲದ ಕಾರಣ ಆ ಶಕ್ತಿ ಅವನ ವಿನಾಶಕ್ಕೇ ಕಾರಣವಾಯಿತು. ಇಂದಿನ ಕೃತಕ ಬುದ್ಧಿಮತ್ತೆ ಮಾನವಕುಲಕ್ಕೆ ಭಸ್ಮಾಸುರ ವರ ದಂತೆ ಸಿಕ್ಕಿರುವ ಪ್ರಬಲ ಶಕ್ತಿಯಾಗಿದೆ. ನೈತಿಕ ಹೃದಯವಿಲ್ಲದಿದ್ದರೆ ಈ ಶಕ್ತಿ ಸಮಾಜದ ವ್ಯವಸ್ಥೆ ಮತ್ತು ಖಾಸಗಿತನವನ್ನು ನಾಶಪಡಿಸಬಹುದು. ಕೇವಲ ಬುದ್ಧಿವಂತಿಕೆಯು ಅಲ್ಗಾರಿದಮ್ ಅನ್ನು ಹೇಗೆ ನಿರ್ಮಿಸಬೇಕೆಂದು ಹೇಳಿಕೊಟ್ಟರೆ, ಮೌಲ್ಯಗಳು ಅದನ್ನು ಬಳಸಬೇಕೇ ಅಥವಾ ಬೇಡವೇ ಎಂದು ನಿರ್ಧರಿಸುತ್ತವೆ ಎಂದರು.

12ನೇ ಶತಮಾನದ ಶರಣರ ಕಾಯಕವೇ ಕೈಲಾಸ ತತ್ವವನ್ನು ನೆನಪಿಸಿದ ಅವರು, ಪ್ರಾಮಾಣಿಕ ಮತ್ತು ಸಮರ್ಪಿತ ಕೆಲಸವೇ ದೈವತ್ವ ಎಂದು ತಿಳಿಸಿದರು. ವಿದ್ಯಾರ್ಥಿಗಳು ತಮ್ಮ ವಾಣಿಜ್ಯ, ವಿಜ್ಞಾನ ಹಾಗೂ ತಂತ್ರಜ್ಞಾನದ ಜ್ಞಾನವನ್ನು ಸ್ಥಳೀಯ ಕೃಷಿ ವಲಯ, ಗ್ರಾಮೀಣ ಆರೋಗ್ಯ, ನೀರು ಸಂರಕ್ಷಣೆ ಮತ್ತು ಸಣ್ಣ ಕೈಗಾರಿಕೆಗಳ ಸುಧಾರಣೆಗೆ ಬಳಸಿಕೊಳ್ಳಬೇಕು. ತಂತ್ರಜ್ಞಾನವು ಕೇವಲ ಇಂಜಿನ್ ಆಗಿದ್ದರೆ, ನಮ್ಮ ಚಾರಿತ್ರ್ಯ ಮತ್ತು ಮೌಲ್ಯಗಳೇ ಅದರ ಸ್ಟಿಯರಿಂಗ್ ವೀಲ್ ಎಂದರು.

ಮೂವರಿಗೆ ಗೌರವ ಡಾಕ್ಟರೇಟ್:

ಘಟಿಕೋತ್ಸವದಲ್ಲಿ ಸ್ವಾತಂತ್ರ್ಯ ಹೋರಾಟಗಾರಾದ ಟಿ. ಆರ್. ರೇವಣ್ಣ, ಚಾರ್ಟರ್ಡ್ ಅಕೌಂಟೆಂಟ್ ಮತ್ತು ವಕೀಲರಾದ ಕೆ. ಆರ್. ಪ್ರದೀಪ್, ಚಿಂತಕರಾದ ದ್ವಾರನಕುಂಟೆ ಪಾತಣ್ಣ ಅವರಿಗೆ ತುಮಕೂರು ವಿವಿ ಗೌರವ ಡಾಕ್ಟರೇಟ್ ನೀಡಿ ಗೌರವಿಸಿತು.

ಒಬ್ಬ ಅಭ್ಯರ್ಥಿಗೆ ಡಿ.ಲಿಟ್ ಪದವಿ, 59 ಅಭ್ಯರ್ಥಿಗಳು ಪಿಎಚ್.ಡಿ. ಪದವಿ, 2,058 ಅಭ್ಯರ್ಥಿಗಳು ಸ್ನಾತಕೋತ್ತರ ಹಾಗೂ 8,781 ಅಭ್ಯರ್ಥಿಗಳು (ಒಟ್ಟು 10,839 ಅಭ್ಯರ್ಥಿಗಳು) ಸ್ನಾತಕ ಪದವಿ ಪಡೆದರು. ಎಲ್ಲ ಸ್ನಾತಕೋತ್ತರ ಪದವಿಗಳಿಗೆ ತಲಾ ಐದು ರ್ಯಾಂಕುಗಳನ್ನು (ಎಂಎಸ್ಸಿ ವಿದ್ಯುನ್ಮಾನ ಮಾಧ್ಯಮ-2 ರ್ಯಾಂಕ್), ಬಿಎ / ಬಿಎಡಬ್ಲ್ಯೂ / ಬಿಎಸಿ / ಬಿಕಾಂ / ಬಿಬಿಎಂ / ಬಿಇಡಿ (ಸೆಮಿಸ್ಟರ್ ಪದ್ಧತಿ)ಗಳಿಗೆ ತಲಾ ಹತ್ತು ರ್ಯಾಂಕುಗಳನ್ನು (ಬಿಎಸ್ಸಿ ಫ್ಯಾಶನ್ ಅಂಡ್ ಅಪಾರೆಲ್ ಡಿಸೈನಿಂಗ್- 1 ರ್ಯಾಂಕ್, ಬಿ.ವೋಕ್ 3 ರ್ಯಾಂಕ್) ನೀಡಲಾಯಿತು. ಒಟ್ಟು 90 ವಿದ್ಯಾರ್ಥಿಗಳಿಗೆ 117 ಚಿನ್ನದ ಪದಕ ಮೌಲ್ಯದ ನಗದು ಬಹುಮಾನ ಪ್ರದಾನ ಮಾಡಲಾಯಿತು.

ಇದಕ್ಕೂಮುಂಚಿತವಾಗಿ 'ತುಮಕೂರು ಇನ್ನೋವೇಶನ್ ಇಕ್ಯುಬೇಶನ್ ಅಂಡ್ ಆಂತ್ರಪ್ರಿನ್ಯುಶಿಪ್ ಕೌನ್ಸಿಲ್' ಹಾಗೂ 'ಗೋ ಗ್ರೀನ್ ಬೈಸಿಕಲ್ ಇನೀಶಿಯೇಟಿವ್'ಗಳನ್ನು ಅತಿಥಿಗಳು ಉದ್ಘಾಟಿಸಿದರು.

ಶಿರಾಗೇಟ್ 80 ಅಡಿ ರಸ್ತೆ ಕಾಮಗಾರಿಯ ಸ್ಥಳ ಪರಿಶೀಲನೆ ನಡೆಸಿದ ಡಿಸಿಶುಭ ಕಲ್ಯಾಣ್

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ತುಮಕೂರು ಮಹಾನಗರ ಪಾಲಿಕೆ ವ್ಯಾಪ್ತಿಯ ವಾರ್ಡ್ ಸಂಖ್ಯೆ-3ರ ಶಿರಾಗೇಟ್ ಪ್ರದೇಶದಲ್ಲಿ 80 ಅಡಿ ಮುಖ್ಯ ರಸ್ತೆ ಹಾಗೂ ಸರ್ವಿಸ್ ರಸ್ತೆಯ ಸಮಗ್ರ ಅಭಿವೃದ್ಧಿ ಕಾಮಗಾರಿಯನ್ನು 14 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದ್ದು, ಜಿಲ್ಲಾಧಿಕಾರಿಗಳಾದ ಶುಭ ಕಲ್ಯಾಣ್ ಅವರು ಇಂದು ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು.

ಸುಮಾರು 1.1 ಕಿಲೋ ಮೀಟರ್ ಉದ್ದದ ಈ ರಸ್ತೆ ಕಾಮಗಾರಿಯಡಿ ಎಲ್ಲಾ ಸಾರ್ವಜನಿಕ ಉಪಯುಕ್ತತೆಯ ಹಾಗೂ ಗುಣಮಟ್ಟದ ಡಾಂಬರು ರಸ್ತೆಯನ್ನು ನಿರ್ಮಿಸಲಾಗುತ್ತಿದೆ. ಅಲ್ಲದೆ, ರಸ್ತೆ ಬದಿಗಳಲ್ಲಿ ಮುಚ್ಚಳದ ಸ್ಲ್ಯಾಬ್‌ಗಳೊಂದಿಗೆ ಆಧುನಿಕ ಚರಂಡಿಗಳು, ಪಾದಚಾರಿಗಳ ಸುರಕ್ಷಿತ ಸಂಚಾರಕ್ಕಾಗಿ ಪೇವರ್ ಅಳವಡಿಸಿದ ಕಾಲುದಾರಿಗಳನ್ನು ನಿರ್ಮಿಸಲಾಗುತ್ತಿದೆ. ನಗರದ ಪ್ರಮುಖ ಪ್ರವೇಶ ಮಾರ್ಗಗಳಲ್ಲಿ ಒಂದಾದ ಶಿರಾಗೇಟ್ ರಸ್ತೆಯನ್ನು ಸುಗಮ ಹಾಗೂ ಸುಸಜ್ಜಿತ ನಗರ ಮೂಲಸೌಕರ್ಯವಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ ಕಾಮಗಾರಿಗೆ ಈಗಾಗಲೇ ಗುತ್ತಿಗೆದಾರರಿಗೆ ಕಾರ್ಯಾದೇಶ ನೀಡಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ.

ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಹಾಗೂ ಟೆಂಡರ್ ನಿಯಮಾವಳಿಗಳಿಗೆ ಅನುಸಾರವಾಗಿ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಸಂಬಂಧಿಸಿದ ಗುತ್ತಿಗೆದಾರರಿಗೆ ಹಾಗೂ ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ತುಮಕೂರು ವಿಶ್ವವಿದ್ಯಾನಿಲಯದ ಎಡವಟ್ಟು

19ನೇ ಗಟಿಕೋತ್ಸವವನ್ನು ಇಷ್ಟು ತರಾತುರಿಯಲ್ಲಿ ಮಾಡುವ ಅಗತ್ಯ ಏನಿತ್ತು ?

ರಾಜ್ಯಪಾಲರ ಉಪಸ್ಥಿತಿಯು ಇಲ್ಲದ ಹಾಗೆ ಮತ್ತು ತುಮಕೂರು ವಿಶ್ವವಿದ್ಯಾನಿಲಯ ನೀಡುವ ಗೌರವ ಡಾಕ್ಟರೇಟ್ ಗು ರಾಜ್ಯಪಾಲರ ಸಹಿ ಇಲ್ಲದೆ ಎಡವಟ್ಟು ಮಾಡಿದೆ.

ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ನೀಡಬೇಕಾದ ಚಿನ್ನದ ಪದಕ ನೀಡಬೇಕಾದ ವಿದ್ಯಾರ್ಥಿಗಳಿಗೆ ಇವರು ಮಾಡಿದ ಎಡವಟ್ಟಿನಿಂದಾಗಿ ಸಾಮಾನ್ಯವಾಗಿ ಉಳಿದ ವಿದ್ಯಾರ್ಥಿಗಳಿಗೆ ನೀಡುವ ಪದವಿ ಪುರಸ್ಕಾರದಂತೆ ಚಿನ್ನ ದ ಪದಕ ನೀಡಬೇಕಾದ ವಿದ್ಯಾರ್ಥಿಗಳಿಗೂ ಯಾವುದೇ ವ್ಯತ್ಯಾಸವಿಲ್ಲದಂತೆ ಕೇವಲ ನಗದು ರೂಪದಲ್ಲಿ ಪುರಸ್ಕಾರ ನೀಡಿದ್ದು ಎಷ್ಟರ ಮಟ್ಟಿಗೆ ಸರಿ ಎಂಬುದು ಮತ್ತು ಈ ಎಡವಿಟ್ಟಿನಿಂದಾಗಿ ತಮ್ಮ ಪೋಷಕಾರಿಗೆ ಮತ್ತು ಸ್ನೇಹಿತರಿಗೆ ನಮಗೆ ಚಿನ್ನದ ಪದಕ ಬಂದಿದೆ ಎಂದು ಹೆಮ್ಮೆಯಿಂದ ಹೇಳಿಕೊಳ್ಳಬೇಕಾದ ವಿದ್ಯಾರ್ಥಿಗಳು ಇಂದು ಮಾನಸಿಕ ಖಿನ್ನತೆಗೆ ಒಳಗಾಗುವ ಪರಿಸ್ಥಿತಿ ನಿರ್ಮಾಣವಾಗಿದೆ ಉದ್ಯೋಗ ಆಕಾಂಕ್ಷಿಗಳು ಕೂಡ ಚಿನ್ನದ ಪದಕ ದೊರಕಿದೆ ಎಂದು ತಮ್ಮ ರೆಸ್ಯುಂನಲ್ಲೂ ಕೂಡ ಉಲ್ಲೇಖ ಮಾಡಲು ಸಾಧ್ಯವಾಗದೆ ವಿದ್ಯಾರ್ಥಿಗಳು ಎಷ್ಟೇ ಶ್ರಮ ಪಟ್ಟು ಓದಿದರು ಕೂಡ ಯಾವುದೇ ಬೆಲೆ ಇಲ್ಲವೆಂದು ವಿದ್ಯಾರ್ಥಿಗಳ ಪರವಾಗಿ ವಿದ್ಯಾರ್ಥಿ ಪರಿಷತ್ತಿನ ಪ್ರಶ್ನೆಯಾಗಿದೆ.

* ಪ್ರತಿಬಾರಿಯೂಶೇಕಡಹತ್ತರಷ್ಟುನೇಮಕಾತಿ ಶುಲ್ಕ ಹೆಚ್ಚಿಸಲು ಅವಕಾಶವಿದೆ ಆದರೆ ಹೆಚ್ಚಿಸಬೇಕೆಂದು ಕಡ್ಡಾಯವಿಲ್ಲ ತುಮಕೂರು ವಿಶ್ವವಿದ್ಯಾನಿಲಯದಲ್ಲಿ ಬಡ ಮತ್ತು ಮಧ್ಯಮ ವರ್ಗದ ಪ್ರತಿಭಾನ್ವಿತ ವಿದ್ಯಾರ್ಥಿಗಳೇ ಹೆಚ್ಚು ವ್ಯಾಸಂಗ ಮಾಡುತ್ತಿದ್ದು ಈ ವಿಷಯವನ್ನು ಪರಿಗಣಿಸದೆ ಪ್ರತಿ ಬಾರಿಯೂ ಶುಲ್ಕವನ್ನು ಹೆಚ್ಚು ಮಾಡುತ್ತಾಇದ್ದಾರೆ ಇದು ವಿದ್ಯಾರ್ಥಿ ಸಮುದಾಯಕ್ಕೆ ಮಾಡುತ್ತಿರುವ ಭಾರಿ ಅನ್ಯಾಯ ಎಷ್ಟೋ ಬಡ ಮತ್ತು ಪ್ರತಿಭಾನ್ವಿತ ವಿದ್ಯಾರ್ಥಿಗಳು ಖಾಸಗಿ ವಿಶ್ವವಿದ್ಯಾಲಯಗಳ ರೀತಿ ಪ್ರತಿ ಬಾರಿಯೂ ಶುಲ್ಕ ಹೆಚ್ಚಿಸುತ್ತಿರುವ ಧೋರಣೆಯಿಂದಾಗಿ ತಮ್ಮ ಉನ್ನತ ವ್ಯಾಸಂಗದ ಕನಸನ್ನು ಕೈಬಿಡುವ ವಾತಾವರಣ ತುಮಕೂರು ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ನಿರ್ಮಾಣವಾಗಿದೆ.

HR ಗುರುಪ್ರಸಾದ್

ವಕೀಲರು ಮತ್ತು ನ್ಯಾಯಾಧೀಶರು ರಥದ ಎರಡು ಗಾಲಿಗಳಿದ್ದಂತೆ-ನ್ಯಾ.ಬಿ.ಜಯಂತ ಕುಮಾರ್

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು:ವಕೀಲರ ಸಹಕಾರವಿದ್ದರೆಕಕ್ಷಿದಾರರಕೇಸುಗಳನ್ನು ಬೇಗ ಬೇಗ ಇತ್ಯರ್ಥಪಡಿಸಬಹುದು,ವಕೀಲರು ಮತ್ತು ನ್ಯಾಯಾಧೀಶರು ರಥದ ಎರಡು ಗಾಲಿಗಳಿದ್ದಂತೆ,ತುಮಕೂರು ಜಿಲ್ಲೆಯಲ್ಲಿಇಂದುಸಾವಿರಾರುಕೇಸುಗಳುಬಾಕಿಇವೆ,ಅವುಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸಲು ನ್ಯಾಯಾಧೀಶರೊಂದಿಗೆ ವಕೀಲರು ಸಹಕಾರ ನೀಡಿದರೆ ಬೇಗ ಇತ್ಯರ್ಥಪಡಿಸಬಹುದು, ಜಿಲ್ಲಾ ನ್ಯಾಯಾಲಯಕ್ಕೆ ಜಾಗದ ಸಮಸ್ಯೆ ಇದೆ,ಸರ್ಕಾರ ಈಗಾಗಲೇ 10 ಎಕರೆ ಜಾಗವನ್ನು ನೀಡಿದೆ, ಇನ್ನೂ 5ರಿಂದ 10 ಎಕರೆ ಜಾಗ ನೀಡಿದರೆ ಉತ್ತಮವಾದ ನ್ಯಾಯಾಂಗ ಸಂಕೀರ್ಣ ಕಟ್ಟಬಹುದು,ದಿನದಿಂದ ದಿನಕ್ಕೆ ಇಲ್ಲಿ ಕಕ್ಷಿದಾರರು ಮತ್ತು ವಾಹನಗಳ ದಟ್ಟಣೆ ಹೆಚ್ಚಾಗುತ್ತಿದೆ,ಅವುಗಳನ್ನು ಗಮನದಲ್ಲಿಟ್ಟುಕೊಂಡು ಮುಂದಿನ ದಿನಗಳಲ್ಲಿ ಇದು ಇನ್ನೂ ಹೆಚ್ಚಾಗಲಿದೆ, ಇವೆಲ್ಲ ಗಮನದಲ್ಲಿಟ್ಟುಕೊಂಡು ನೂತನ ನ್ಯಾಯಾಂಗ ಸಂಕೀರ್ಣ ಮಾಡಲು ಹೆಜ್ಜೆ ಇಡುತ್ತಿದ್ದೇವೆ ಈ ನಿಟ್ಟಿನಲ್ಲಿ ವಕೀಲರು ನಮಗೆ ಹೆಚ್ಚಿನ ಸಹಕಾರ ನೀಡಬೇಕೆಂದು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಜಯಂತಕುಮಾರ್ ರವರು ಮನವಿ ಮಾಡಿದರು.

ಅವರು ಇಂದು ಜಿಲ್ಲಾ ವಕೀಲರ ಸಂಘದಲ್ಲಿ ತುಮಕೂರಿಗೆ ನೂತನವಾಗಿ ವರ್ಗಾವಣೆ ಆಗಿ ಬಂದಿರುವ ನ್ಯಾಯಾಧೀಶರುಗಳಿಗೆ ಸ್ವಾಗತ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಹೆಚ್.ಕೆಂಪರಾಜಯ್ಯನವರು ಜಿಲ್ಲೆಯ ವಕೀಲರು ಒಳ್ಳೆಯವರು,ಸಾಧು ಸ್ವಭಾವದರು,ವಕೀಲರ ಸಹಕಾರ ಎಲ್ಲಾ ನ್ಯಾಯಾಧೀಶರಿಗೆ ಇದ್ದೇ ಇರುತ್ತದೆ,ನ್ಯಾಯಾಧೀಶರುಗಳು ಕಿರಿಯ ವಕೀಲರುಗಳಿಗೆ ಸಹಕಾರ ನೀಡಬೇಕು ಮತ್ತು ಸೂಕ್ತ ಮಾರ್ಗದರ್ಶನ ನೀಡಬೇಕು,ಕೇಸುಗಳನ್ನು ನಡೆಸುವ ರೀತಿ,ವಾದಪತ್ರಗಳ ಸಿದ್ಧಪಡಿಸುವಿಕೆ ಇತ್ಯಾದಿ ಅರ್ಜಿಗಳನ್ನು ಬರೆಯುವುದು,ನ್ಯಾಯಾಲಯಕ್ಕೆ ಹಾಕುವ ರೀತಿಯನ್ನು ಹಿರಿಯ ವಕೀಲರು ಕಿರಿಯ ವಕೀಲರಿಗೆ ತಿಳಿಸಿರುತ್ತಾರೆ ಅದರಂತೆ ನ್ಯಾಯಾಧೀಶರುಗಳು ಸಹ ಕಿರಿಯ ವಕೀಲರಿಗೆ ಸರಿಯಾದ ಸಮಯದಲ್ಲಿ ಸೂಕ್ತ ಮಾರ್ಗದರ್ಶನ ನೀಡಬೇಕು,ಭಯಭೀತಿ ಬೀಳದೆ ಕಿರಿಯ ವಕೀಲರು ಯಾವುದೇ ನ್ಯಾಯಾಲಯಗಳಿಗೆ ಹೋಗಿ ವಾದ ಮಾಡುವ ಶಕ್ತಿಯನ್ನು ಬೆಳೆಸಿಕೊಳ್ಳಲು ನ್ಯಾಯಾಧೀಶರ ಮಾರ್ಗದರ್ಶನ ಸಹ ಮುಖ್ಯ, ಕಕ್ಷಿದಾರರಿಗೆ ನ್ಯಾಯ ಒದಗಿಸುವಲ್ಲಿ ವಕೀಲರ ಶ್ರಮ ಅತ್ಯಂತ ದೊಡ್ಡದು ನಾವೆಲ್ಲರೂ ನ್ಯಾಯಾಂಗವನ್ನು ಬಲಪಡಿಸೋಣ, ಕಕ್ಷಿದಾರರ ಹಿತ ಕಾಯೋಣ ಎಂದು ಮನವಿ ಮಾಡುತ್ತಾ ನೂತನವಾಗಿ ಜಿಲ್ಲೆಗೆ ಆಗಮಿಸಿರುವ ನ್ಯಾಯಾಧೀಶರುಗಳಿಗೆ ಸ್ವಾಗತ ಕೋರಿದರು.

ವೇದಿಕೆಯಲ್ಲಿ ನೂತನವಾಗಿ ಆಗಮಿಸಿರುವ ನ್ಯಾಯಾಧೀಶರುಗಳಾದ ಮೊಹಮ್ಮದ್ ಅಶ್ರಫ್ ಹ್ಯಾರಿಸ್, ಎಸ್.ಜಿ.ಸುನಿತಾ, ಸಯ್ಯದ್ ಅರಾಫತ್ ಇಬ್ರಾಹಿಂ.ಎಂ, ಸ್ಮಿತಾಮಾಲಾಗೋನ್ವೆ,ಸುಮಲತಾ.ಎಲ್, ಸಂಜಯ್. ಎಂ.ಮಲ್ಲಿಕಾರ್ಜುನಯ್ಯ,ಅರ್ಪಿತ.ಕೆ.ವಿ.ಉಪಸ್ಥಿತರಿದ್ದರು.

ಸೈಕಲ್ ಪರಿಸರ ಮತ್ತು ಆರ್ಥಿಕತೆಗೆ ಬಹಳ ಉಪಯುಕ್ತ

ಸೂರ್ಯಪ್ರಗತಿನ್ಯೂಸ್.ಕಾಂ



ಕೊರಟಗೆರೆ: ಪಟ್ಟಣದ ರವೀಂದ್ರ ಭಾರತಿ ಕಾಲೇಜಿನಲ್ಲಿ ಕೇಂದ್ರ ಯುವ ವ್ಯವಹಾರ ಹಾಗೂ ಕ್ರೀಡಾ ಸಚಿವಾಲಯದ ಮೈ ಭಾರತ್-ಮೇರಾ ಯುವ ಭಾರತ್ ಹಾಗೂ ಕಾತ್ಯಾಯಿನಿ ಯುವತಿ ಮಂಡಳಿಯಿಂದ ವಿಶ್ವ ಸೈಕಲ್ ದಿನಾಚರಣೆಯನ್ನು ಆಚರಿಸಲಾಯಿತು. ಕಾರ್ಯಕ್ರಮಕ್ಕೆ ಕಾಶ್ಮೀರದಲ್ಲಿ ಸೇವೆ ಸಲ್ಲಿಸುತ್ತಿರುವ ಯೋಧ ಕೃಷ್ಣನಾಯ್ಕ್ ಚಾಲನೆ ನೀಡಿ ಮಾತನಾಡಿ, ಪ್ರತಿ ವರ್ಷ ಜೂನ್ 3 ರಂದು ವಿಶ್ವ ಬೈಸಿಕಲ್ ದಿನವನ್ನು ಆಚರಿಸಲಾಗುತ್ತದೆ. ಸೈಕಲ್ ಕೇವಲ ವಾಹನ ಸಾಧನವಲ್ಲ, ಆರೋಗ್ಯ, ಪರಿಸರ ಮತ್ತು ಆರ್ಥಿಕತೆಗೆ ಬಹಳ ಉಪಯುಕ್ತವಾಗಿದೆ ಎಂದರು.

ಪ್ರಪಂಚದಾದ್ಯಂತ ಜನರಲ್ಲಿ ಸೈಕ್ಲಿಂಗ್ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಆರೋಗ್ಯಕರ ಜೀವನಶೈಲಿಯನ್ನು ಉತ್ತೇಜಿಸಲು ಈ ದಿನವನ್ನು ಆಚರಿಸಲಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಹೆಚ್ಚುತ್ತಿರುವ ಮಾಲಿನ್ಯ, ಸಂಚಾರ ಸಮಸ್ಯೆಗಳು ಮತ್ತು ಜೀವನಶೈಲಿ ರೋಗಗಳ ನಡುವೆ ಸೈಕಲ್‌ಗಳ ಬಳಕೆ ಹೆಚ್ಚು ಅಗತ್ಯವಾಗಿದೆ ಎಂದು ಹೇಳಿದರು.

ಇದು ವಿಶೇಷವಾಗಿ ಹೃದಯದ ಆರೋಗ್ಯ, ರಕ್ತ ಪರಿಚಲನೆ ಮತ್ತು ಹೃದಯ ಸ್ನಾಯುಗಳನ್ನು ಬಲಪಡಿಸುತ್ತದೆ. ದೇಹದಲ್ಲಿನ ಹೆಚ್ಚುವರಿ ಕೊಬ್ಬನ್ನು ಕರಗಿಸುವ ಮೂಲಕ ತೂಕವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಕಾಲುಗಳು, ತೊಡೆಗಳು ಮತ್ತು ಸೊಂಟದಲ್ಲಿನ ಸ್ನಾಯುಗಳು ಬಲಗೊಳ್ಳುತ್ತವೆ ಮತ್ತು ದೈಹಿಕ ಶಕ್ತಿ ಹೆಚ್ಚಾಗುತ್ತದೆ ಮತ್ತು ಆಮ್ಲಜನಕವು ಶ್ವಾಸಕೋಶವನ್ನು ತಲುಪುತ್ತದೆ ಎಂದು ತಿಳಿಸಿದರು.

ರವೀಂದ್ರ ಭಾರತೀ ಕಾಲೇಜು ಕಾರ್ಯದರ್ಶಿ ಶೋಭಾ ಮಾತನಾಡಿ, ಸೈಕಲ್‌ಗಳು ಆರ್ಥಿಕವಾಗಿಯೂ ಬಹಳ ಲಾಭದಾಯಕವಾಗಿವೆ. ಪೆಟ್ರೋಲ್ ಮತ್ತು ಡೀಸೆಲ್ ವೆಚ್ಚವಿಲ್ಲ. ನಿರ್ವಹಣಾ ವೆಚ್ಚಗಳು ಸಹ ತುಂಬಾ ಕಡಿಮೆ. ವಿದ್ಯಾರ್ಥಿಗಳು, ಉದ್ಯೋಗಿಗಳು ಮತ್ತು ಸಾರ್ವಜನಿಕರು ಕಡಿಮೆ ವೆಚ್ಚದಲ್ಲಿ ತಮ್ಮ ಪ್ರಯಾಣವನ್ನು ಪೂರ್ಣಗೊಳಿಸಬಹುದು. ಇಂಧನ ಬೆಲೆಗಳು ಏರುತ್ತಿರುವ ಯುಗದಲ್ಲಿ ಸೈಕಲ್‌ಗಳು ಉತ್ತಮ ಪರ್ಯಾಯವಾಗಿ ಮಾರ್ಪಟ್ಟಿವೆ ಎಂದು ಹೇಳಿದರು.

ಜಿ .ವಿ.ವೀರೇಂದ್ರ ಪ್ರಸಾದ್ ಮಾತನಾಡಿ, ಪ್ರತಿನಿತ್ಯ ಸೈಕಲ್ ತುಳಿಯುವುದರಿಂದ ನಾವು ಹಲವಾರು ಮಾರಕ ಕಾಯಿಲೆಗಳಿಂದ ದೂರ ಉಳಿಯಬಹುದಲ್ಲದೆ ಶಾರೀರಿಕವಾಗಿಯೂ ಸದೃಢರಾಗಿರಬಹುದು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಶ್ಮೀರದಲ್ಲಿ ಬಿಎಸ್‌ಎಫ್‌ನಲ್ಲಿ ಸೈನಿಕರಾಗಿ ಸೇವೆ ಸಲ್ಲಿಸಿದ ಓಂ ಶಂಕರ್ ನಿಲಂಗಿ ವಹಿಸಿದ್ದರು. ಪರಿವರ್ತನೆ ಸಂಸ್ಥಾಪಕ ಶಿವಕುಮಾರ್ ಮಾತನಾಡಿದರು. ಯೋಧ ಕೃಷ್ಣನಾಯ್ಕ್ ಅವರನ್ನು ಇದೇ ವೇಳೆ ಸನ್ಮಾನಿಸಲಾಯಿತು.ಕಾರ್ಯಕ್ರಮವನ್ನು ಇಂದ್ರ ಅಗ್ನಿವಂಶಿ ಹಾಗೂ ಕಾರ್ತಿಕ್ ಆಯೋಜಿಸಿದ್ದರು. 150ಜನ ವಿದ್ಯಾರ್ಥಿಗಳು ಹಾಗೂ ಗಣ್ಯರು ಸೈಕಲ್ ಜಾಥಾದಲ್ಲಿ ಭಾಗವಹಿಸಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

ಸುಗಮ ಸಂಗೀತದ ಉದ್ದೇಶ ಮನರಂಜನೆಯಲ್ಲ. ಕವಿಯ ಆಶಯವನ್ನು ಜನರಿಗೆ ತಲುಪಿಸುವುದಾಗಿದೆ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಸುಗಮ ಸಂಗೀತದ ಉದ್ದೇಶ ಮನರಂಜನೆಯಲ್ಲ. ಕವಿಯ ಆಶಯವನ್ನು ಜನರಿಗೆ ತಲುಪಿಸುವುದಾಗಿದೆ ಎಂದು ಅಖಿಲ ಕರ್ನಾಟಕ ಸುಗಮ ಸಂಗೀತ ಸಂಸ್ಥೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಡಾ.ಕಾ.ವೆಂ.ಶ್ರೀನಿವಾಸಮೂರ್ತಿ ತಿಳಿಸಿದ್ದಾರೆ.

ನಗರದ ಎಸ್.ಎಸ್.ಪುರಂನಲ್ಲಿರುವ ವಾಸವಿ ದೇವಾಲಯದ ಸುಜ್ಞಾನ ಮಂದಿರ ಸಭಾಂಗಣದಲ್ಲಿ ಅಖಿಲ ಕರ್ನಾಟಕ ಸುಗಮ ಸಂಗೀತ ಸಂಸ್ಥೆಗಳ ಒಕ್ಕೂಟ(ರಿ), ಬೆಂಗಳೂರು, ಸ್ವರ ಸಿಂಚನ ಸುಗಮ ಸಂಗೀತ ಮತ್ತು ಜಾನಪದ ಕಲಾ ಸಂಸ್ಥೆ(ರಿ), ತುಮಕೂರು ಇವರು ಜ್ಞಾನಬುತ್ತಿ ಸತ್ಸಂಗ ಕೇಂದ್ರ ತುಮಕೂರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಸಹಯೋಗದಲ್ಲಿ ಆಯೋಜಿಸಿದ್ದ ಭಾವಾಭಿಯಾನ ಕಾರ್ಯಕ್ರಮಕ್ಕೆ ದೀಪ ಬೆಳಗಿಸುವ ಮೂಲಕ ಚಾಲನೆ ನೀಡಿ ಮಾತನಾಡುತಿದ್ದ ಅವರು,ಸುಗಮ ಸಂಗೀತಕ್ಕೆ ಸಾಂಸ್ಕೃತಿಕ,ಶೈಕ್ಷಣಿಕ ಮಾನ್ಯತೆ ದೊರಕಿಸುವುದು ಹಾಗೂ ಸ್ಥಳೀಯ ಕವಿಗಳ ಗೀತೆಗಳಿಗೆ ಸಂಗೀತದ ಮೂಲಕ ಇಡೀ ರಾಜ್ಯಕ್ಕೆ ಪರಿಚಯಿಸುವ ನಿಟ್ಟಿನಲ್ಲಿ ಅಖಿಲ ಕರ್ನಾಟಕ ಸುಗಮ ಸಂಗೀತ ಸಂಸ್ಥೆಗಳ ಒಕ್ಕೂಟ(ರಿ),ಈ ಭಾವಾಭಿಯಾನ ಕಾರ್ಯಕ್ರಮವನ್ನು ರಾಜ್ಯದಾದ್ಯಂತ ಹಮ್ಮಿಕೊಳ್ಳಲು ತೀರ್ಮಾನಿಸಿದೆ ಎಂದರು.

ಭಾವಾಭಿಯಾನ ಹಳೆಯ ಸುಗಮ ಸಂಗೀತ ಕಲಾವಿದರ ಜೊತೆಗೆ, ಹೊಸ ಕಲಾವಿದರನ್ನು ಒಟ್ಟು ಗೂಡಿಸಿ, ಪ್ರಸಿದ್ದ ಕವಿಗಳ ಗೀತೆಗಳ ಜೊತೆಗೆ,ಸ್ಥಳೀಯ ಕವಿಗಳ ಗೀತೆಗಳಿಗೂ ಸಂಗೀತದ ಸಾಂಗತ್ಯ ನೀಡಿ,ಎಲ್ಲಾ ಸುಗಮ ಸಂಗೀತ ಸಂಸ್ಥೆಗಳನ್ನು ಒಂದು ವೇದಿಕೆ ತರುವ ಮೂಲಕ ಈ ಕ್ಷೇತ್ರವನ್ನು ಮತ್ತಷ್ಟು ಔನತ್ಯಕ್ಕೆ ತೆಗೆದುಕೊಂಡು ಹೋಗುವ ಪ್ರಕ್ರಿಯೆ ಇದಾಗಿದೆ.ಒಂದು ಕವಿತೆ ಜನ ಮಾನಸದಲ್ಲಿ ಉಳಿಯಬೇಕಾದರೆ, ಅದು ಗಾಯಕನ ಕಂಠಸಿರಿ ಸೇರಬೇಕು.ಸಾಹಿತ್ಯ ಮತ್ತು ಸಂಗೀತಕ್ಕೆ ಮೊದಲಿನಿಂದಲೂ ಒಂದು ಅವಿನಾಭಾವ ಸಂಬಂಧವಿದೆ. ಕವಿತೆಯ ಚಿಂತನೆಗಳು,ಆಶಯಗಳನ್ನು ಜನರ ಮನಸ್ಸಿಗೆ ತಲುಪಿಸುವ ಕೆಲಸವನ್ನು ಸುಗಮ ಸಂಗೀತ ನಿರಂತರವಾಗಿ ಮಾಡಿಕೊಂಡು ಬರುತ್ತಿದೆ ಎಂದರು.

ತುಮಕೂರು ಜಿಲ್ಲೆಯಲ್ಲಿ ಸುಗಮ ಸಂಗೀತ ಕಲಿಸುತ್ತಿರುವ ಸ್ವರಸಿಂಚನ ಸೇರಿದಂತೆ ಸುಗಮ ಸಂಗೀತ ಕಲಿಕಾ ಕೇಂದ್ರಗಳು ಮೈಸೂರಿನ ಶ್ರೀಮತಿ ಗಂಗೂಬಾಯಿ ಅನಗಲ್ ಲಲಿತ ಕಲೆಗಳ ವಿವಿಯಲ್ಲಿ ತಮ್ಮ ಹೆಸರು ನೊಂದಾಯಿಸಿ, ಸರ್ಟಿಫಿಕೇಟ್ ಕೋರ್ಸು ಮತ್ತು ಡಿಪ್ಲಮೋ ಕೋರ್ಸುಗಳನ್ನು ಆರಂಭಿಸಿ, ನಿಮ್ಮಲ್ಲಿ ಕಲಿಯುತ್ತಿರುವ ಮಕ್ಕಳಿಗೆ ಶೈಕ್ಷಣಿಕ ಮಾನ್ಯತೆ ದೊರಕಿಸುವ ಮೂಲಕ ಅವರ ಭವಿಷ್ಯವನ್ನು ರೂಪಿಸಿಕೊಳ್ಳಲು ನೆರವಾಗುವಂತೆ ಡಾ.ಕಾ.ವೆಂ.ಶ್ರೀನಿವಾಸಮೂರ್ತಿ ತಿಳಿಸಿದರು.

ಸಂಸ್ಕೃತಿ ಚಿಂತಕರಾದ ಡಾ.ಆರ್.ಎಲ್.ರಮೇಶ್‌ಬಾಬು ಮಾತನಾಡಿ,ಇಂದಿನ ಪ್ರಕ್ಷುಬ್ದ ಪರಿಸ್ಥಿತಿಯಲ್ಲಿ ಎಲ್ಲರೂ ನೆಮ್ಮದಿಯನ್ನು ಬಯಸುತಿದ್ದಾರೆ. ಅಂತಹ ನೆಮ್ಮದಿ, ಶಾಂತಿಯ ಜೀವನ ಬೇಕೆಂದರೆ ನಾವುಗಳು ನಮ್ಮ ಋಷಿ ಮುನಿಗಳ ಆಶಯದಂತೆ ಸರ್ವೆ ಜನಃ ಸುಖಿನೋಭವಂತು ಎಂಬ ರೀತಿ ಬದುಕುಬೇಕಾಗಿದೆ.ಇದು ಇಂತಹ ಕಾರ್ಯಕ್ರಮಗಳಿಂದ ಸಾಧ್ಯ ಎಂದರು.

ಕಸಾಪ ಅಧ್ಯಕ್ಷರಾದ ಕೆ.ಎಸ್.ಸಿದ್ದಲಿಂಗಪ್ಪ ಮಾತನಾಡಿ,ಸಂಗೀತಕ್ಕೆ ವಿಶೇಷವಾದ ಶಕ್ತಿ ಇದೆ.ಸಂಗೀತವನ್ನು ಚಿಕಿತ್ಸಾ ವಿಧಾನವಾಗಿ ಬಳಸಲಾಗುತ್ತಿದೆ. ಕವಿಗೆ, ಗಾಯಕನಿಗೆ ಸಾವಿದೆ.ಆದರೆ ಕವಿತೆ,ಗಾಯನಕ್ಕೆ ಸಾವಿಲ್ಲ.ಕೆಂಕೆರೆ ಮಲ್ಲಿಕಾರ್ಜುನ್ ಅವರ ಸಲಹೆಯಂತೆ ಮುಂದಿನ ಕನ್ನಡ ಸಮ್ಮೇಳನದಿಂದಲೇ ಕವಿಗೋಷ್ಠಿಯಲ್ಲಿ ಓದುವ ಕವಿತೆಗಳಿಗೆ ಸಂಗೀತ ಸಂಯೋಜಿಸಿ, ಅದೇ ವೇದಿಕೆಯಲ್ಲಿ ಹಾಡುವ ಪ್ರಕ್ರಿಯೆಗೆ ಚಾಲನೆ ನೀಡಲಾಗುವುದು ಎಂದು ಭರವಸೆ ನೀಡಿದರು.

ಆಶಯ ನುಡಿಗಳನ್ನಾಡಿದ ಅಖಿಲ ಕರ್ನಾಟಕ ಸುಗಮ ಸಂಗೀತ ಸಂಸ್ಥೆಗಳ ಒಕ್ಕೂಟದ ಗೌರವಾಧ್ಯಕ್ಷ ಆನಂದ ಮಾದಲಗೆರೆ, ಸುಗಮ ಸಂಗೀತದ ಮೂಲ ಉದ್ದೇಶ ಮನರಂಜನೆಯಲ್ಲ.ಮನೋವಿಕಾಸ.ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ ಒಕ್ಕೂಟದವತಿ ಯಿಂದ ಇಂತಹ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದರು.

ಪ್ರಾಸ್ತಾವಿಕ ನುಡಿಗಳನ್ನಾಡಿದ ಅಖಿಲ ಕರ್ನಾಟಕ ಸುಗಮ ಸಂಗೀತ ಸಂಸ್ಥೆಗಳ ಒಕ್ಕೂಟ(ರಿ)ದ ಉಪಾಧ್ಯಕ್ಷ, ಜಾನಪದ ಅಕಾಡೆಮಿ ಸದಸ್ಯ ಮಲ್ಲಿಕಾರ್ಜುನ ಕೆಂಕೆರೆ,ಇದುವರೆಗೂ ಬೆಂಗಳೂರಿಗೆ ಸಿಮಿತವಾಗಿದ್ದ ಒಕ್ಕೂಟದ ಕಾರ್ಯಕ್ರಮಗಳು ಇದೇ ಮೊದಲ ಬಾರಿಗೆ ಎರಡನೇ ಹಂತದ ನಗರಗಳಿಗೆ ವಿಸ್ತರಿಸಿದೆ.ಸ್ಥಳೀಯ ಕವಿಗಳ ಕವಿತೆಗಳಿಗೆ ಸಂಗೀತದ ಸ್ಪರ್ಷ ನೀಡುವುದರ ಜೊತೆಗೆ, ಸ್ಥಳೀಯವಾಗಿಯೂ ಗಾಯಕರನ್ನು ಉತ್ತೇಜಿಸಲು ಇಂತಹ ಕಾರ್ಯಕ್ರಮಗಳನ್ನು ಗ್ರಾಮೀಣ ಮಟ್ಟಕ್ಕೂ ಡಾ.ಆರ್.ಎಲ್.ರಮೇಶ್ ಬಾಬು ಅವರ ಸಹಕಾರದೊಂದಿಗೆ ತೆಗೆದು ಕೊಂಡು ಹೋಗಲು ಮುಂದಾಗಿದ್ದ,ಇದು ಕವಿಗಳ ಭಾವನೆಗಳ ಅಭಿಯಾನವಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜ್ಞಾನಬುತ್ತಿ ಸತ್ಸಂಗ ಕೇಂದ್ರದ ಅಧ್ಯಕ್ಷರಾದ ಮುರುಳಿಕೃಷ್ಣಪ್ಪ,ಜ್ಞಾನಬುತ್ತಿಯ 730ನೇ ಕಾರ್ಯಕ್ರಮ,ಸಂಸ್ಕೃತಿ ಮತ್ತು ಸಾಹಿತ್ಯ ಪರಾಮರ್ಶೆಯನ್ನು ನಿರಂತರವಾಗಿ ಮಾಡಿಕೊಂಡು ಬರಲಾಗುತ್ತಿದೆ.ಕವಿಗಳು, ಸಾಹಿತಿಗಳಿಗೆ ವೇದಿಕೆಯಾಗಿ ಈ ಕಾರ್ಯಕ್ರಮ ನಡೆಯುತ್ತಿದೆ.ಸಂಗೀತದ ಮೂಲಕ ನಮನ್ನು ನಾದ ಲೋಕಕ್ಕೆ ಕರೆದೊಯ್ದದ ಎಲ್ಲಾ ಗಾಯಕರಿಗೆ ಹೃಪೂರ್ವ ಅಭಿನಂದನೆಗಳನ್ನು ಸಲ್ಲಿಸುವುದಾಗಿ ತಿಳಿಸಿದರು.

ವೇದಿಕೆಯಲ್ಲಿ ಕುಣಿಗಲ್ ಕಸಾಪ ಮಾಜಿ ಅಧ್ಯಕ್ಷ ದಿನೇಶಕುಮಾರ್, ಕವಿಗಳಾದ ಷಡಕ್ಷರಿ, ಡಾ.ಜಯಪ್ಪ ಹೊನ್ನಾಳಿ, ಸೌಭಾಗ್ಯ ಡಿ.ಆರ್., ಕೃಷ್ಣಮೂರ್ತಿ ಹೆಚ್., ರಾಜೇಶ್ ರಂಗನಾಥ್, ನೇತ್ರ ತಜ್ಞ ಡಾ.ದಿನೇಶ್ ಮತ್ತಿತರರು ಉಪಸ್ಥಿತರಿದ್ದರು.

ಗಾಯಕರಾದ ಆನಂದ ಮಾದಲಗೆರೆ, ಕೆಂಕೆರೆ ಮಲ್ಲಿಕಾರ್ಜುನ್, ಇಂಚರ ಪ್ರವೀಣಕುಮಾರ್, ರಾಜಶೇಖರ ನುಲಿ, ಎರ್ರಿಸ್ವಾಮಿ. ಹೆಚ್, ಆರ್.ಹೆಚ್. ರಂಗಸ್ವಾಮಿ, ಮಂಜುನಾಥ್ ನಾಗಪ್ಪ, ದಿಶಾ ಸುಚಿನ್, ವನಿತಾ ಹಿರೇಮಠ್, ಸುಗಂಧಮ್ಮ, ಜಯಪ್ಪ ಅವರುಗಳು ಪ್ರಸಿದ್ದ ಕವಿಗಳ ಗೀತೆಗಳ ಜೊತೆಗೆ, ಸ್ಥಳೀಯ ಕವಿಗಳ ರಚನೆಗಳಿಗೆ ದ್ವನಿಯಾದರು. ಸಮೂಹ ಗಾಯನವನ್ನು ಶ್ರೀಶಾರದ ಸ್ಕೂಲ್ ಅಫ್ ಫೈನ್ ಆರ್ಟ್ಸ್‌ನ ಮಕ್ಕಳು ನಡೆಸಿಕೊಟ್ಟರು.ವಾದ್ಯ ಸಹಕಾರದಲ್ಲಿ ಕ್ರಿಬೋರ್ಡ್ ಪ್ರವೋದ್ ಕುಮಾರ್, ತಬಲ ಲೋಕೇಶ್‌ಬಾಬು, ಕೃಷ್ಣಮೂರ್ತಿ.ಹೆಚ್, ಮ್ಯಾಂಡೋಲಿನ ವಿರೇಂದ್ರ.ಟಿ.ಎನ್., ರಿದಂ ಪ್ಯಾಡ್ ನಿರಂಜನ್ ಸಹಕಾರ ನೀಡಿದರು.

ನೂತನ ಸರಕಾರ ಶಿಕ್ಷಕರ ಬೇಡಿಕೆಗಳನ್ನು ಈಡೇರಿಸಲಿ : ಕೆ.ಎಂ. ಗಂಗಾಧರಯ್ಯ ಒತ್ತಾಯ

ಸೂರ್ಯಪ್ರಗತಿನ್ಯೂಸ್.ಕಾಂ



ಚಿಕ್ಕನಾಯಕನಹಳ್ಳಿ : ಶಿಕ್ಷಣ ಕ್ಷೇತ್ರದ ಅಭಿವೃದ್ಧಿ ಹಾಗೂ ಶಿಕ್ಷಕರ ಹಿತದೃಷ್ಟಿಯಿಂದ ಕೆಲವು ಪ್ರಮುಖ ಬೇಡಿಕೆಗಳನ್ನು ಸರಕಾರ ತ್ವರಿತವಾಗಿ ಈಡೇರಿಸಬೇಕೆಂದು ಚಿಕ್ಕನಾಯಕನಹಳ್ಳಿ ತಾಲೂಕು ಮುಖ್ಯಶಿಕ್ಷಕರ ಸಂಘದ ಅಧ್ಯಕ್ಷ ಕೆ.ಎಂ. ಗಂಗಾಧರಯ್ಯ ರಾಜ್ಯದ ನೂತನ ಸರಕಾರಕ್ಕೆ ಶುಭಾಶಯಗಳನ್ನು ಕೋರಿ ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಶಿಕ್ಷಕರ ಬಹುದಿನಗಳ ಪ್ರಮುಖ ಬೇಡಿಕೆಯಾದ ಹಳೆಯ ಪಿಂಚಣಿ ಯೋಜನೆ (ಒಪಿಎಸ್)ಯನ್ನು ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು. ಸರಕಾರಿ ಶಾಲೆಗಳಂತೆ ಅನುದಾನಿತ ಶಾಲೆಗಳಿಗೂ ಅತಿಥಿ ಶಿಕ್ಷಕರನ್ನು ನೇಮಿಸಬೇಕು ಹಾಗೂ ಸರಕಾರಿ ಶಾಲೆಗೆ ಮಕ್ಕಳನ್ನು ಸೇರಿಸಿ ಎಂಬ ಧ್ಯೇಯ ವಾಕ್ಯವನ್ನು ಸರಕಾರಿ ಮತ್ತು ಅನುದಾನಿತ ಶಾಲೆಗಳಿಗೆ ಮಕ್ಕಳನ್ನು ಸೇರಿಸಿ ಎಂದು ವಿಸ್ತರಿಸಬೇಕು ಎಂದು ಹೇಳಿದರು.

ಅನುದಾನಿತ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಕಾಯಂ ಶಿಕ್ಷಕರ ನೇಮಕಾತಿ ನಡೆಸಬೇಕು. ಸರಕಾರದ ಎಲ್ಲಾ ಶಿಕ್ಷಣ ಸಂಬಂಧಿತ ಯೋಜನೆಗಳನ್ನು ಅನುದಾನಿತ ಶಾಲೆಗಳಿಗೂ ವಿಸ್ತರಿಸಬೇಕು.

ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಸಮವಸ್ತ್ರ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಅನುದಾನಿತ ಶಾಲೆಗಳ ವಿದ್ಯಾರ್ಥಿಗಳಿಗೂ ದೊರಕುವಂತೆ ಕ್ರಮವಹಿಸಬೇಕು ಎಂದು ಒತ್ತಾಯಿಸಿದ್ದಾರೆ.

ಅಲ್ಲದೆ, ಅನುದಾನಿತ ಶಾಲೆಗಳಲ್ಲಿ ಆಂಗ್ಲ ಮಾಧ್ಯಮ ವಿಭಾಗಗಳನ್ನು ಅನುದಾನ ಸಹಿತವಾಗಿ ಆರಂಭಿಸಲು ಅನುಮತಿ ನೀಡಬೇಕು. ವಿದ್ಯಾರ್ಥಿ – ಶಿಕ್ಷಕರ ಅನುಪಾತವನ್ನು ಕಡಿಮೆ ಮಾಡುವ ಮೂಲಕ ಗುಣಮಟ್ಟದ ಶಿಕ್ಷಣಕ್ಕೆ ಒತ್ತು ನೀಡಬೇಕು. ಸರಕಾರಿ ಶಾಲಾ ಶಿಕ್ಷಕರಿಗೆ ನೀಡುವ ಎಲ್ಲ ತರಬೇತಿಗಳನ್ನು ಅನುದಾನಿತ ಶಾಲಾ ಶಿಕ್ಷಕರಿಗೂ ವಿಸ್ತರಿಸಬೇಕು ಎಂದು ಮನವಿ ಮಾಡಿದರು.

ಈ ಎಲ್ಲ ಬೇಡಿಕೆಗಳನ್ನು ನೂತನ ಸರಕಾರ ಪರಿಗಣಿಸಿ ಜಾರಿಗೊಳಿಸಿದರೆ ಶಿಕ್ಷಣದ ಗುಣಮಟ್ಟ ಹೆಚ್ಚುವುದರ ಜೊತೆಗೆ ಅನುದಾನಿತ ಶಾಲೆಗಳ ಅಭಿವೃದ್ಧಿಗೂ ಸಹಕಾರಿಯಾಗಲಿದೆ ಎಂದು ಕೆ.ಎಂ. ಗಂಗಾಧರಯ್ಯ ಅಭಿಪ್ರಾಯಪಟ್ಟಿದ್ದಾರೆ.

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

ಕನ್ನಡಿಗರ ಹೃದಯ ಸಮ್ರಾಜ್ಯದ ನಾಡ ದೊರೆಯಾಗಿದ್ದರು ನಾಲ್ವಡಿ ಕೃಷ್ಣರಾಜ ಒಡೆಯರ್

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು : ಅಖಿಲ ಭಾರತ ದಲಿತ ಕ್ರಿಯಾ ಸಮಿತಿ ಹಾಗೂ ಅಖಿಲ ಭಾರತ ಡಾ. ಅಂಬೇಡ್ಕರ್ ಪ್ರಚಾರ ಸಮಿತಿಯ ವತಿಯಿಂದ ಇಂದು ತುಮಕೂರು ನಗರದ ಅಮಾನಿಕೆರೆ ಗಾಜಿನಮನೆಯ ಆವರಣದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ರವರ ಜನ್ಮದಿನಾಚರಣೆಯನ್ನು ಇಂದು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವುದರ ಮೂಲಕ ಆಚರಣೆಯನ್ನು ಮಾಡಲಾಯಿತು.

ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದ ನಂತರ ಅಖಿಲ ಭಾರತ ದಲಿತ ಕ್ರಿಯಾ ಸಮಿತಿ ಹಾಗೂ ಅಖಿಲ ಭಾರತ ಡಾ. ಅಂಬೇಡ್ಕರ್ ಪ್ರಚಾರ ಸಮಿತಿಯ ಜಿಲ್ಲಾಧ್ಯಕ್ಷರಾದ ಎನ್.ಕೆ.ನಿಧಿಕುಮಾರ್ ಕನ್ನಡಿಗರ ಹೃದಯ ಸಮ್ರಾಜ್ಯದ ನಾಡದೊರೆಯಾಗಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ಕುರಿತಾಗಿ ಮಾತನಾಡುತ್ತಾ ನಾಲ್ವಡಿ ಕೃಷ್ಣರಾಜ ಒಡೆಯರ್ ರವರು ಮೈಸೂರು ಸಂಸ್ಥಾನದ ಒಡೆಯರ್ ರಾಜಸಂತತಿಯ 24ನೇ ರಾಜರಾಗಿದ್ದವರು, ಇವರ ಆಳ್ವಿಕೆ 1902 ರಿಂದ 1940 ರವರೆಗೆ ರಾಜ್ಯಭಾರ ಮಾಡಿದಂತಹ ಮಹಾನ್ ನಾಯಕರು. ಶ್ರೀಯುತರು ಕೇವಲ 10 ವರ್ಷದ ಬಾಲಕರಾಗಿದ್ದುದರಿಂದ ಅವರ ತಾಯಿಯವರಾದ, ಮಾತೃಶ್ರೀ ಮಹಾರಾಣಿ ವಾಣಿ ವಿಲಾಸ ಸನ್ನಿಧಾನ ದವರು ರೀಜೆಂಟರಾಗಿ ಆಡಳಿತ ನಿರ್ವಹಣೆ ಮಾಡಿದರು. ರಾಜಕುಮಾರನಿಗೆ ಸೂಕ್ತ ವಿದ್ಯಾಭ್ಯಾಸ, ಆಡಳಿತ ತರಬೇತಿ ಇವುಗಳನ್ನು ಮಹಾರಾಣಿಯವರು ತೀವ್ರ ನಿಗಾ ವಹಿಸಿ ನಡೆಸಿದ ಪರಿಣಾಮವಾಗಿ, ಮೈಸೂರು ರಾಜ್ಯಕ್ಕೆ ಒಬ್ಬ ಸಮರ್ಥ ಆಡಳಿತಗಾರರಾಗಿ ನಾಲ್ವಡಿ ಕೃಷ್ಣರಾಜ ಒಡೆಯರು ದೊರಕಿದ್ದು ಇದೀಗ ಇತಿಹಾಸವೆಂದು ತಿಳಿಸಿದರು.

ನಾಲ್ವಡಿ ಕೃಷ್ಣರಾಜ ಒಡೆಯರ್ ರವರ ಕೊಡುಗೆಯು ನಮ್ಮ ರಾಜ್ಯಕ್ಕೆ ಅಪಾರವಾದದ್ದು ಅವರು ಕಾಲದಲ್ಲಿ ನಿರ್ಮಿತವಾದ ಹಲವಾರು ಸ್ಮಾರಕಗಳು, ಜೊತೆಗೆ ಈಗಿನ ಕೆ.ಆರ್. ಎಸ್ ಅಣೆಕಟ್ಟು ಸೇರಿದಂತೆ ವಿವಿಧ ಕೆರೆ ಕಟ್ಟೆಗಳ ಅಭಿವೃದ್ಧಿ, ಕೈಗಾರಿಕೆಗಳ ಸ್ಥಾಪನೆ, ಕರಕುಶಲ ವಸ್ತುಗಳ ತಯಾರಿಕಾ ಘಟಕಗಳ ಸ್ಥಾಪನೆ ಸೇರಿದಂತೆ ಆಗಿನ ಮೈಸೂರು ಸಂಸ್ಥಾನ (ಆಧುನಿಕ ಕರ್ನಾಟಕ ರಾಜ್ಯದ) ಸರ್ವತೋಮುಖದ ಅಭಿವೃದ್ಧಿಗೆ ಒಡೆಯರ್ ರವರ ಕೊಡುಗೆ ಅಪರಾವಾಗಿದ್ದು, ಅವರ ಕಾಲಘಟ್ಟದಲ್ಲಿಯೇ ಬುಡಕಟ್ಟು, ಪರಿಶಿಷ್ಠ ಜಾತಿ ಸೇರಿದಂತೆ ಅತ್ಯಂತ ತಳ ಸಮುದಾಯದವರೂ ಸಹ ಸಮಾಜದಲ್ಲಿ ಗೌರವಯುತವಾಗಿ ಜೀವಿಸಲು ಅವಕಾಶ ಮಾಡಿಕೊಟ್ಟಂತಹವರಾಗಿದ್ದರು ಎಂದರು.

ಆಗಿನ ಮೈಸೂರು ಸಂಸ್ಥಾನದಲ್ಲಿನ ಪ್ರಾಥಮಿಕ ಮತ್ತು ಮಾಧ್ಯಮಿಕ ವಿದ್ಯಾಭ್ಯಾಸವನ್ನು, ಉಚಿತವಾಗಿ ಮತ್ತು ಕಡ್ಡಾಯವಾಗಿ ಆರಂಭಿಸಲಾಯಿತು. ನಾಲ್ವಡಿ ಕೃಷ್ಣರಾಜರ ಮಹತ್ತರ ಸಾಧನೆಯೆಂದರೆ ಮೈಸೂರು ವಿಶ್ವವಿದ್ಯಾನಿಲಯವನ್ನು ಸ್ಥಾಪಿಸಿದ ಇದು ದೇಶದಲ್ಲೇ ಮೊಟ್ಟಮೊದಲ ವಿಶ್ವವಿದ್ಯಾನಿಲಯವು ನಮ್ಮ ಮೈಸೂರಿನಲ್ಲಿ ತೆರೆದು ದಾಖಲೆ ನಿರ್ಮಿಸಿದ ಕೀರ್ತಿ ನಾಲ್ವಡಿಯವರಿಗೆ ಸಲ್ಲುತ್ತದೆ. ಅವರ ಕಾಲದಲ್ಲಿ ರಾಜ್ಯದ ನಾನಾ ಭಾಗಗಳಲ್ಲಿ 270 ಉಚಿತ ಆಸ್ಪತ್ರೆಗಳು ಕಾರ್ಯಾರಂಭ ಮಾಡಿದ ನಾಲ್ವಡಿ ಕೃಷ್ಣರಾಜ ಒಡೆಯರ್ ಸರ್ವತೋಮುಖ ಅಭಿವೃದ್ಧಿಯ ಹರಿಕಾರವೆಂದು ಅಖಿಲ ಭಾರತ ದಲಿತ ಕ್ರಿಯಾ ಸಮಿತಿಯ ಕಾರ್ಯಾಧ್ಯಕ್ಷರಾದ ತ್ಯಾಗರಾಜು ತಿಳಿಸಿದರು.

ಅಖಿಲ ಭಾರತ ದಲಿತ ಕ್ರಿಯಾ ಸಮಿತಿಯ ಜಿಲ್ಲಾಉಪಾಧ್ಯಕ್ಷರಾದ ಎಸ್.ಲಕ್ಷ್ಮೀನಾರಾಯಣ ಮಾತನಾಡುತ್ತಾ ಈಗಿನ ಬೆಂಗಳೂರಿನ ಮಿಂಟೊ ಕಣ್ಣಾಸ್ಪತ್ರೆ ಜಾಗತಿಕ ಮಟ್ಟದಲ್ಲಿ ಹೆಸರು ಮಾಡಿದೆಯೆಂದರೆ ಅದಕ್ಕೆ ಮೂಲ ಕಾರಣ ಒಡೆಯರ್ ರವರು ಜೊತೆಗೆ ಅವರು ವಾಣಿಜ್ಯೋದ್ಯಮದ ಉದ್ದೇಶಕ್ಕಾಗಿ ನಮ್ಮ ರಾಜ್ಯದೇ ಒಂದು ಹಣಕಾಸು ಸಂಸ್ಥೆಯಿರಬೇಕೆಂದು ಮೈಸೂರು ಬ್ಯಾಂಕ್ ಖಾಸಗೀ ಸಹಭಾಗಿತ್ವದೊಡನೆ ಕಾರ್ಯಾರಂಭ ಮಾಡಿಸಿದ ಪ್ರಪ್ರಥಮ ವ್ಯಕ್ತಿ, ಜೊತೆಗೆ 1906ರಲ್ಲಿಯೇ ಸಹಕಾರ ಸಂಘಗಳನ್ನು ಸ್ಥಾಪಿಸಲಾಯಿತು. ರೈತರಿಗಾಗಿ ಜಮೀನು ಅಡಮಾನ ಬ್ಯಾಂಕುಗಳನ್ನು ಸಹ ಇವರ ಆದ್ವರ್ಯದಲ್ಲಿಯೇ ಪ್ರಾರಂಭಿಸಲಾಯಿತು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಅಖಿಲ ಭಾರತ ಡಾ. ಅಂಬೇಡ್ಕರ್ ಪ್ರಚಾರ ಸಮಿತಿ ಹಾಗೂ ಅಖಿಲ ಭಾರತ ದಲಿತ ಕ್ರಿಯಾ ಸಮಿತಿ ಜಿಲ್ಲಾ ಅಧ್ಯಕ್ಷರು ಎನ್.ಕೆ ನಿಧಿ ಕುಮಾರ್, ಅಖಿಲ ಭಾರತ ದಲಿತ ಕ್ರಿಯಾ ಸಮಿತಿಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಸಮಿತಿ ಸದಸ್ಯರಾದ ರವಿಕುಮಾರ್ ಎನ್, ಜಿಲ್ಲಾ ಉಪಾಧ್ಯಕ್ಷರಾದ ಲಕ್ಷ್ಮೀನಾರಾಯಣ ಎಸ್, ಕಾರ್ಮಿಕ ಘಟಕದ ಜಿಲ್ಲಾಧ್ಯಕ್ಷರಾದ ಟೈಲರ್ ಜಗದೀಶ್, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಹರೀಶ್ ಕುಮಾರ್ ಡಿ, ಜಿಲ್ಲಾ ಕಾರ್ಯದರ್ಶಿ ತ್ಯಾಗರಾಜ್ ಕೆ, ಕಾರ್ಮಿಕ ಘಟಕದ ತಾಲೂಕು ಅಧ್ಯಕ್ಷರಾದ ಹನುಮನರಸಯ್ಯ, ತಾಲೂಕು ಗೌರವಾಧ್ಯಕ್ಷರಾದ ಗಂಗಾಧರ್ ಜಿ.ಆರ್, ತುಮಕೂರು ನಗರ ಅಧ್ಯಕ್ಷರಾದ ದಿಬ್ಬೂರು ಶ್ರೀನಿವಾಸ್, ಪದಾಧಿಕಾರಿಗಳಾದ ಮಾರ್ಕೆಟ್ ಮಣ್ಣಪ್ಪ, ನಿರ್ವಹಣೆ ಲೇವೇಟ್ ವಿಜಿ, ಯತ್ವಿಕ್ ಜೆ ನಾಯಕ್ ಸೇರಿದಂತೆ ಇನ್ನು ಮುಂತಾದವರು ಉಪಸ್ಥಿತರಿದ್ದರು.

ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ 142ನೇ ಜನ್ಮದಿನಾಚರಣೆ: ಸುವರ್ಣಯುಗದ ಆಡಳಿತವನ್ನು ಸ್ಮರಿಸಿದ ಗಣ್ಯರು



ಸೂರ್ಯಪ್ರಗತಿನ್ಯೂಸ್.ಕಾಂ

ಚಿಕ್ಕನಾಯಕನಹಳ್ಳಿ: ಮೈಸೂರು ರಾಜ್ಯದ ಆಧುನಿಕ ನಿರ್ಮಾತೃ, ದೂರದೃಷ್ಟಿಯ ಆಡಳಿತಗಾರ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ 142ನೇ ಜನ್ಮದಿನಾಚರಣೆಯನ್ನು ತಾಲ್ಲೂಕು ಆಡಳಿತ ಹಾಗೂ ತಾಲ್ಲೂಕು ಅರಸು ಕ್ಷತ್ರಿಯ ಸಮಾಜದ ಸಂಯುಕ್ತ ಆಶ್ರಯದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಿರಸ್ತೆದಾರರಾದ ಶ್ರೀಮತಿ ವನಜಾಕ್ಷಿ ಅವರು ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಕರ್ನಾಟಕ ಸರ್ಕಾರದ ಪಂಚ ಗ್ಯಾರಂಟಿ ಯೋಜನಾ ಅನುಷ್ಠಾನ ತಾಲ್ಲೂಕು ಸಮಿತಿ ಅಧ್ಯಕ್ಷರಾದ ಸಿ. ಡಿ. ಚಂದ್ರಶೇಖರ್ ಅವರು ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ಸುವರ್ಣಯುಗದ ಆಡಳಿತ:

"ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ 38 ವರ್ಷಗಳ ಆಳ್ವಿಕೆಯು ಮೈಸೂರು ಸಂಸ್ಥಾನದ ಇತಿಹಾಸದಲ್ಲಿ 'ಸುವರ್ಣಯುಗ' ಎಂದು ಕರೆಯಲ್ಪಡುತ್ತದೆ. ಶಿಕ್ಷಣ, ಆರೋಗ್ಯ, ಉದ್ಯೋಗ, ನೀರಾವರಿ, ಸ್ತ್ರೀ ಸಮಾನತೆ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಅವರು ಜಾರಿಗೆ ತಂದ ಯೋಜನೆಗಳು ಇಂದಿಗೂ ಮಾದರಿಯಾಗಿವೆ" ಎಂದು ಬಣ್ಣಿಸಿದರು.

ದೂರದೃಷ್ಟಿಯ ಯೋಜನೆಗಳು:

ಅವರ ಸಾಧನೆಗಳನ್ನು ಸ್ಮರಿಸಿದ ಚಂದ್ರಶೇಖರ್ ಅವರು, "ಏಷ್ಯಾ ಖಂಡದಲ್ಲೇ ಪ್ರಥಮವಾಗಿ ಶಿವನಸಮುದ್ರದಲ್ಲಿ ವಿದ್ಯುತ್ ಘಟಕ ಸ್ಥಾಪಿಸಿ ರಾಜ್ಯಕ್ಕೆ ಬೆಳಕು ನೀಡಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಆಡಳಿತ ವಿಕೇಂದ್ರೀಕರಣದ ಮಹತ್ವವನ್ನು ಅರಿತಿದ್ದ ಅವರು, ಸ್ಥಳೀಯ ಸಂಸ್ಥೆಗಳನ್ನು ಬಲಪಡಿಸುವ ಮೂಲಕ ಜನಪರ ಆಡಳಿತ ನೀಡಿದ್ದರು. ಅವರ ದೂರದೃಷ್ಟಿಯಿಂದಲೇ ಮೈಸೂರು ರಾಜ್ಯ ಅಭಿವೃದ್ಧಿ ಪಥದಲ್ಲಿ ಮುನ್ನಡೆಯಲು ಸಾಧ್ಯವಾಯಿತು. ಮಹಾತ್ಮಾ ಗಾಂಧೀಜಿಯವರೇ ಅವರನ್ನು 'ರಾಜರ್ಷಿ' ಎಂದು ಗೌರವಿಸಿದ್ದರು" ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಅರಸು ಕ್ಷತ್ರಿಯ ಸಮಾಜದ ಅಧ್ಯಕ್ಷರಾದ ಗೋಪಾಲರಾಜ ಅರಸು, ಮಂಜುನಾಥ್ ಅರಸು, ನಟರಾಜ್, ಮಹೇಶ್ ಕುಮಾರ್ ಸೇರಿದಂತೆ ಸಮಾಜದ ಅನೇಕ ಮುಖಂಡರು, ಗಣ್ಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಕರ್ತವ್ಯ : ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಕೆ.ರಾಜು

ಸೂರ್ಯಪ್ರಗತಿನ್ಯೂಸ್.ಕಾಂ



ರಾಮನಗರ : ಮುಂದಿನ ಪೀಳಿಗೆಗೆ ಒಳ್ಳೆಯ ಬದುಕು ನೀಡುವ ನಿಟ್ಟಿನಲ್ಲಿ ಉತ್ತಮ ಪರಿಸರವನ್ನು ನೀಡುವ ಗುರುತರ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಹೀಗಾಗಿ ಪರಿಸರ ಸಂರಕ್ಷಣೆಯು ಕೇವಲ ಒಂದು ದಿನಕ್ಕೆ ಸೀಮಿತವಾಗದೆ ಪ್ರತಿಯೊಬ್ಬರ ಕರ್ತವ್ಯವಾಗಬೇಕು ಎಂದು ಮಾಜಿ ಶಾಸಕ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಕೆ.ರಾಜು ಅಭಿಪ್ರಾಯಪಟ್ಟರು.

ನಗರದ ಸಾರಿಗೆ ಸಂಸ್ಥೆಯ ವಿಭಾಗೀಯ ಕಚೇರಿಯಲ್ಲಿ ಗುರುವಾರ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆಯಲ್ಲಿ ಸಾರಿಗೆ ಸಂಸ್ಥೆಯ ಸಿಬ್ಬಂದಿಗೆ ಗಿಡಗಳನ್ನು ವಿತರಿಸಿ ಮಾತನಾಡಿದ ಅವರು, ಪ್ರಕೃತಿಯಿಂದ ಎಲ್ಲವನ್ನು ಪಡೆದುಕೊಳ್ಳುವ ನಾವು ಅದಕ್ಕೆ ಕೃತಜ್ಞರಾಗಿರಬೇಕು. ಆದರೆ ಮನುಷ್ಯನ ದುರಾಸೆಯಿಂದ ನಿರಂತರ ವಾಯುಮಾಲಿನ್ಯ, ಜಲಮಾಲಿನ್ಯ, ಭೂಮಾಲಿನ್ಯವನ್ನು ಪರಿಸರ ಎದುರಿಸುತ್ತಿದೆ. ಈ ಸಮಸ್ಯೆಗಳು ತಾರಕಕ್ಕೇರಿ ಮನುಕುಲಕ್ಕೆ ಕುತ್ತು ಬರುವುದಕ್ಕೆ ಮುಂಚೆಯೇ ನಾವು ಪರಿಹಾರೋಪಾಯ ಕಂಡುಕೊಳ್ಳಬೇಕು ಎಂದರು.

ಪರಿಸರ ದಿನಾಚರಣೆಯ ದಿನ ಕೇವಲ ಭಾಷಣಕ್ಕೆ ಸೀಮಿತವಾಗಿದೆ, ಪರಿಸರ ಸಂರಕ್ಷಣೆಯ ಪ್ರಜ್ಞೆ ನಮ್ಮೆಲ್ಲರಲ್ಲೂ ಮೂಡಬೇಕಿದೆ. ಮನುಷ್ಯ ತನ್ನ ಸ್ವಾರ್ಥಕ್ಕಾಗಿ ಮರಗಿಡಗಳನ್ನು ಕಡಿಯುವ ಮೂಲಕ ಉತ್ತಮ ಪರಿಸರ ಹಾಳು ಮಾಡುತ್ತಿದ್ದು, ಎಚ್ಚೆತ್ತುಕೊಳ್ಳದಿದ್ದರೆ ಈಗಾಗಲೇ ಅಲ್ಲಲ್ಲಿ ಸಂಭವಿಸುತ್ತಿರುವ ಪ್ರಕೃತಿಯ ವಿಕೋಪದ ಜತೆಗೆ ಮತ್ತಷ್ಟು ಘೋರ ವಿಕೋಪಗಳನ್ನು ಎದುರಿಸಬೇಕಾಗುತ್ತದೆ. ನಮ್ಮ ಜಿಲ್ಲೆಯವರೇ ಆದ ಸಾಲುಮರದ ತಿಮ್ಮಕ್ಕ ಮರಗಳನ್ನು ತಮ್ಮ ಮಕ್ಕಳಂತೆ ಬೆಳೆಸಿದ್ದಾರೆ. ಅವರಷ್ಟು ಸಾಧ್ಯವಾಗದಿದ್ದರೂ ಪ್ರತಿಯೊಬ್ಬರು ವರ್ಷಕ್ಕೆ ಒಂದು ಗಿಡ ನೆಟ್ಟು ಪರಿಸರ ಉಳಿಸಲು ಮುಂದಾಗಬೇಕು ಎಂದರು.

ಬೆಂಗಳೂರು ದಕ್ಷಿಣ ಜಿಲ್ಲೆಯ ವಿಭಾಗೀಯ ನಿಯಂತ್ರಣಾಧಿಕಾರಿ ಪುರುಷೋತ್ತಮ ಮಾತನಾಡಿ, ಹೆಚ್ಚು ಹೆಚ್ಚು ಮರಗಿಡಗಳನ್ನು ನೆಡುವ ಮೂಲಕ ಶುದ್ಧಗಾಳಿ ದೊರೆಯುತ್ತದೆ. ನಗರೀಕರಣ ಹೆಚ್ಚಾಗುತ್ತಿರುವ ಕಾರಣದಿಂದ ಪರಿಸರ ಅಸಮತೋಲನವಾಗಿ ಶುದ್ಧ ಗಾಳಿ ಸಿಗುವುದು ಕಡಿಮೆಯಾಗಿದೆ. ಪ್ರತಿಯೊಬ್ಬರು ಗಿಡ ನೆಡುವ ಮೂಲಕ ಪರಿಸರ ರಕ್ಷಣೆಗೆ ಮುಂದಾಗಬೇಕು ಎಂದು ಕರೆ ನೀಡಿದರು.

ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ವಿ.ಎಚ್.ರಾಜು ಮಾತನಾಡಿದರು. ಕಾರ್ಮಿಕ ಕಲ್ಯಾಣಾಧಿಕಾರಿ ಸೋಮಶೇಖರ್ ಪರಿಸರ ಸಂರಕ್ಷಣೆಯ ಜಾಗೃತಿ ಕುರಿತು ಉಪನ್ಯಾಸ ನೀಡಿದರು. ಇದೇ ಸಂದರ್ಭದಲ್ಲಿ ಪರಿಸರ ಮಾಲಿನ್ಯ ತಡೆಯುವ ನಿಟ್ಟಿನಲ್ಲಿ ಸಾರಿಗೆ ಸಂಸ್ಥೆಯ ಬಸ್‌ಗಳ ವಾಯುಮಾಲಿನ್ಯ ತಪಾಸಣೆಗೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಕೆ. ರಾಜು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ವಿಭಾಗೀಯ ಸಂಚಲನಾಧಿಕಾರಿ ಶ್ರೀನಿವಾಸ್, ವಿಭಾಗೀಯ ತಾಂತ್ರಿಕ ಶಿಲ್ಪಿ ಮುತ್ತುರಾಜ್, ವಿಭಾಗೀಯ ಆಡಳಿತಾಧಿಕಾರಿ ಎ.ಇ. ಜಯರಾಮ್, ಸೇರಿದಂತೆ ಸಾರಿಗೆ ಸಂಸ್ಥೆಯ ಸಿಬ್ಬಂದಿ ವರ್ಗದವರು ಹಾಜರಿದ್ದರು.

ಸಿಎಂ ಡಿಕೆಶಿ ಪ್ರತಿಯೊಬ್ಬರಿಗೂ ಪ್ರೇರಣೆ : ಕೆ.ರಾಜು

ರಾಮನಗರ : ಈ ಜಿಲ್ಲೆಯ ಮಣ್ಣಿನ ಮಗ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿರುವುದು ನಮ್ಮೆಲ್ಲರ ಪ್ರಾರ್ಥನೆಗೆ ಫಲ ದೊರೆತಿದೆ. ಅವರ ರಾಜಕೀಯ ಹಾಗೂ ಹೋರಾಟದ ಹಾದಿ ಪ್ರತಿಯೊಬ್ಬರಿಗೂ ಪ್ರೇರಣೆಯಾಗಿದೆ ಎಂದು ಮಾಜಿ ಶಾಸಕ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಕೆ.ರಾಜು ತಿಳಿಸಿದರು.

ನಗರದ ಸಾರಿಗೆ ಸಂಸ್ಥೆಯ ವಿಭಾಗೀಯ ಕಚೇರಿಯಲ್ಲಿ ಆಯೋಜಿಸಿದ್ದ ಪರಿಸರ ದಿನಾಚರಣೆಯಲ್ಲಿ ಪಾಲ್ಗೊಂಡು ಬಳಿಕ ಸುದ್ದಿಗಾರರ ಜೊತೆ ಮಾತನಾಡಿದ ಅವರು ರಾಜ್ಯದಲ್ಲಿ ಡಿಕೆಶಿ ಪರ್ವ ಆರಂಭವಾಗಿದ್ದು ಅವರ ಅವಧಿಯಲ್ಲಿ ನಮ್ಮ ಜಿಲ್ಲೆ ಸೇರಿದಂತೆ ಇಡೀ ರಾಜ್ಯದಲ್ಲಿ ಅಭಿವೃದ್ಧಿಗೆ ವೇಗ ಸಿಗಲಿದೆ ಎಂದರು.

ಜಿಲ್ಲೆಯ 2ನೇ ಸಿಎಂ : ನಾವು ಜಿಲ್ಲೆಯಿಂದ ಅನೇಕ ಮುಖ್ಯಮಂತ್ರಿಗಳನ್ನು ನೋಡಿದ್ದೀವಿ. ಆದರೆ ಈ ಜಿಲ್ಲೆಯ ಮಣ್ಣಿನ ಮಗ ಡಿ.ಕೆ.ಶಿವಕುಮಾರ್ ಎರಡನೆಯವರು. ಮೊದಲು ಕೆಂಗಲ್ ಹನುಮಂತಯ್ಯ ಆಗಿದ್ದರು. ದೇವೇಗೌಡರು, ರಾಮಕೃಷ್ಣ ಹೆಗಡೆ, ಹೆಚ್.ಡಿ.ಕುಮಾರಸ್ವಾಮಿಯವರು ಮುಖ್ಯಮಂತ್ರಿಗಳಾಗಿದ್ದರೂ ಸಹ ಸ್ಥಳೀಯವಾಗಿ ಡಿ.ಕೆ.ಶಿವಕುಮಾರ್ ಅವರು ಎರಡನೆಯವರು ಹೀಗಾಗಿ ಜಿಲ್ಲೆಯ ಜನರಿಗೆ ಅವರ ಮೇಲೆ ಅಭಿಮಾನ ಇದೆ ಎಂದರು.

ಓಟರ್ ಐಡಿ ಪರಿಸ್ಕರಣೆ ಸಂಬಂಧ ಎಸಿ ದಿನೇಶ್ ಮೀನಾ ಮಾಹಿತಿ

ಸೂರ್ಯಪ್ರಗತಿನ್ಯೂಸ್.ಕಾಂ



ಚುನಾವಣೆ ಪಟ್ಟಿ ಗುರುತಿನ ಚೀಟಿ ಪರಿಸ್ಕರಣೆ ಕುರಿತು ಕೊಳ್ಳೇಗಾಲ ಉಪವಿಭಾಗ ಅಧಿಕಾರಿ ದಿನೇಶ್ ಮೀನಾ ರವರು ಪತ್ರಿಕಾಗೋಷ್ಠಿಯನ್ನು ನಡೆಸಿದರು ಉಪ ವಿಭಾಗ ಅಧಿಕಾರಿಗಳ ಕಚೇರಿಯಲ್ಲಿ ನಡೆದ ಪತ್ರಿಕಾ ಗೋಷ್ಠಿ ಯಲ್ಲಿ ಉಪ ವಿಭಾಗ ಅಧಿಕಾರಿ ದಿನೇಶ್ ಕುಮಾರ್ ಮೀನಾ ಮಾತನಾಡಿ

ಚುನಾವಣೆ ಗುರುತಿನ ಚೀಟಿ ಸಮಗ್ರ ಪರಿಸ್ಕರಣೆ ಭಾರತೀಯ ಚುನಾವಣೆ ಆಯೋಗದಿಂದ ಕರ್ನಾಟಕದಲ್ಲಿ ಆದೇಶ ಆಗಿದೆ ಚುನಾವಣೆ ಆಯೋಗದ ನಿಯಮ ಪಾಲನೆಯಲ್ಲಿ ಕರ್ನಾಟಕ ನಂಬರ್ ಒನ್ ಸ್ಟೇಟ್ ಆಗಿದೆ ಬೇರೆ ಬೇರೆ ಕಡೆ ಚುನಾವಣೆ ಪಟ್ಟಿಯಲ್ಲಿ ಲೋಪಗಳು ಕಂಡು ಬಂದಿದೆ ಆದ್ದರಿಂದ ರಾಜ್ಯ ಚುನಾವಣೆ ಆಯೋಗದ ಚುನಾವಣೆ ಪಟ್ಟಿ ಹಾಗೂ ಚುನಾವಣೆ ಗುರುತಿನ ಚೀಟಿ ಪರಿಸ್ಕರಣೆ ಕಾರ್ಯವನ್ನು ಪ್ರಾರಂಭ ಮಾಡಲಾಗುತ್ತಿದೆ, ಇದರಿಂದ ಯಾರ್ಯಾರಿಗೆ ಪಟ್ಟಿಯಲ್ಲಿ ಹೆಸರು ಕೈ ಬಿಟ್ಟೋಗಿದೆ ಅಂತವರನ್ನು ಪಟ್ಟಿಗೆ ಸೇರಿಸಲು ಅನುಕೂಲವಾಗುತ್ತದೆ, ಹಾಗೂ ಹೆಸರು ಬೇರೆ ಇದ್ದು ಭಾವಚಿತ್ರ ಬೇರೆ ಇರುತ್ತದೆ ಅಂತವರಿಗೆ ತಿದ್ದುಪಡಿ ಮಾಡಲು ಹಾಗೂ ಎರಡು ಕಡೆ ಚುನಾವಣೆ ಪಟ್ಟಿಯಲ್ಲಿ ಸೇರಿರುವಂತವರನ್ನು ಕೈ ಬಿಡಲಾಗುತ್ತದೆ ನಮ್ಮ ಬಿ ಎಲ್ ಒ ಗಳು ಮನೆ ಮನೆಗೆ ತೆರಳಿ ಪರಿಶೀಲನೆ ನಡೆಸುತ್ತಾರೆ

ಪರಿಸ್ಕರಣೆ ಅರ್ಜಿ ಕಾಪಿಯನ್ನು ಕೊಟ್ಟು ಕುಲಂಕುಷವಾಗಿ ಪರಿಶೀಲನೆ ನಡೆಸಲಾಗುವುದು, ಇಲಾಖೆ ಬಿ ಎಲ್ ಒ ಗಳು ಮೂರು ಮನೆಗಳಿಗೆ ಭೇಟಿ ಬಿಡಿದಾಗ ವ್ಯಕ್ತಿಗಳು ಮನೆಯಲ್ಲಿ ಇರಬೇಕು ಇಲ್ಲದಿದ್ದರೆ ಅಥವಾ ಮೂರು ಬಾರಿ ಭೇಟಿ ಕೊಟ್ಟಾಗಲು ಮನೆ ಬೇಗ ಹಾಕಿದ್ದರೆ ಅಂತವರನ್ನು ಪಟ್ಟಿಯಿಂದ ಕೈ ಬಿಡಲಾಗುವುದು ಆದ್ದರಿಂದ ಸಾರ್ವಜನಿಕರು ಚುನಾವಣೆ ಅಯೋಗದ ಆದೇಶಕ್ಕೆ ಸಹಕರಿಸಬೇಕು ಎಂದರು

ವಿಶ್ವಕರ್ಮ ಸಮಾಜದಿಂದ ಜೂ.28ರಂದು ಪ್ರತಿಭಾ ಪುರಸ್ಕಾರ

ಸೂರ್ಯಪ್ರಗತಿನ್ಯೂಸ್.ಕಾಂ



ರಾಮನಗರ : ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾದ ಅಧ್ಯಕ್ಷರಾದ ಕೆ.ಪಿ.ನಂಜುಂಡಿ ಅವರ ಅಧ್ಯಕ್ಷತೆಯಲ್ಲಿ ಸಮುದಾಯದ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ಸಲುವಾಗಿ ಜೂ.28ರಂದು ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ನಡೆಸಲು ತೀರ್ಮಾನಿಸಲಾಗಿದೆ ಎಂದು ಬೆಂಗಳೂರು ದಕ್ಷಿಣ ಜಿಲ್ಲೆಯ ಯುವ ಕಾಂಗ್ರೆಸ್ ಘಟಕದ ಉಪಾಧ್ಯಕ್ಷ ಜನಾರ್ಧನ್ ಆಚಾರ್ ತಿಳಿಸಿದರು.

ನಗರದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2026ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ತೇರ್ಗಡೆಯಾದ ವಿದ್ಯಾರ್ಥಿಗಳು ಜಾತಿ ಪ್ರಮಾಣ ಪತ್ರ ಹಾಗೂ ಅಂಕಪಟ್ಟಿ ನಕಲು ಪ್ರತಿಯೊಂದಿಗೆ ಸುಂದರ್-9886423935 ಹಾಗೂ ಸಂತೋಷ್-9945008888 ಮೊಬೈಲ್ ಸಂಖ್ಯೆಗಳಿಗೆ ತಮ್ಮ ಅರ್ಜಿಗಳನ್ನು ಜೂ.20ರೊಳಗೆ ತಲುಪಿಸುವಂತೆ ಕೋರಿದ ಅವರು ಉತ್ತೀರ್ಣರಾದ ಎಲ್ಲರೂ ಅರ್ಜಿ ಸಲ್ಲಿಕೆಗೆ ಅರ್ಹರು ಎಂದರು.

ಇತ್ತೀಚೆಗೆ ಬೆಂಗಳೂರಿನಲ್ಲಿ ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾದಿಂದ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಸಮುದಾಯದ ಮಠಾಧೀಶರಿಂದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗಿತ್ತು. ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ, ಪ್ರೋತ್ಸಾಹಧನ ನೀಡಿ ಅಭಿನಂದಿಸಲಾಗಿತ್ತು. ಆ ಕಾರ್ಯಕ್ರಮದ ಯಶಸ್ಸಿನಿಂದ ಪ್ರೇರೇಪಿತಗೊಂಡು ಜಿಲ್ಲಾ ಮಟ್ಟದಲ್ಲೂ ಕಾರ್ಯಕ್ರಮ ನಡೆಸಲಾಗುತ್ತಿದೆ ಎಂದು ಹೇಳಿದರು.

ಜಿಲ್ಲಾ ಮಟ್ಟದ ಕಾರ್ಯಕ್ರಮ ಇದಾಗಿದ್ದು, ಪ್ರಸಕ್ತ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ, ಪಿಯುಸಿ ಪಾಸಾಗಿರುವ ಎಲ್ಲಾ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬೇಕು. ಸಲ್ಲಿಕೆಯಾಗುವ ಅರ್ಜಿಗಳ ಆಧಾರದ ಮೇಲೆ ಕಾರ್ಯಕ್ರಮದ ರೂಪುರೇಷೆಗಳನ್ನು ಸಿದ್ಧಪಡಿಸಲಾಗುವುದು. ಈ ಹಿನ್ನೆಲೆಯಲ್ಲಿ ಜೂ.20ರೊಳಗೆ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬೇಕು. ಪೋಷಕರು ತಮ್ಮ ಮಕ್ಕಳಿಗೆ ಅರ್ಜಿ ಸಲ್ಲಿಸಲು ಪ್ರೇರೇಪಿಸಬೇಕು ಎಂದು ತಿಳಿಸಿದರು.

ಮಹಾಸಭಾದ ಅಧ್ಯಕ್ಷರಾದ ಕೆ.ಪಿ.ನಂಜುಂಡಿ ಅವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ನಡೆಯಲಿದ್ದು, ಸಮುದಾಯದ ಮಠಾಧೀಶರು, ಗಣ್ಯರು ಭಾಗವಹಿಸುವರು. ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ಪ್ರಮಾಣ ಪತ್ರ, ಸ್ಮರಣಿಕೆ ಜತೆಗೆ ಪೋಷಕರನ್ನೂ ಸನ್ಮಾನಿಸಲಾಗುವುದು. ಶಿಕ್ಷಣದಿಂದ ಮಾತ್ರ ಅಭಿವೃದ್ಧಿ ಸಾಧ್ಯ ಎಂಬುದಾಗಿ ಅರಿವು ಮೂಡಿಸಲು ಹಾಗೂ ಸಮುದಾಯದ ಎಲ್ಲಾ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಪ್ರೋತ್ಸಾಹಿಸಲು ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ವಿನಯ್ ಮಾತನಾಡಿ, ಸಮುದಾಯದ ಜನರಲ್ಲಿ ಶಿಕ್ಷಣದ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು ನಮ್ಮ ಅಧ್ಯಕ್ಷರಾದ ಕೆ.ಪಿ.ನಂಜುಂಡಿ ಅವರು ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ. ಹೆಚ್ಚೆಚ್ಚು ಜನರು ಭಾಗವಹಿಸುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ಗೋಷ್ಠಿಯಲ್ಲಿ ಕನಕಪುರ ನಗರಸಭೆ ಸದಸ್ಯ ಕೆ.ವಿ. ರಾಘವೇಂದ್ರಚಾರ್, ಆರ್‌ಬಿಎಲ್ ಫಿಟ್ನೆಸ್ ಮಾಲೀಕ ಲೋಕೇಶ್, ಯೋಗೇಶ್, ಕುಮಾರ್, ಜನಾರ್ಧನ್, ಸಿದ್ದರಾಜು, ಲೋಕೇಶ್, ಸಂತೋಷ್, ಕೆಂಪಾಚಾರ್, ಪ್ರಸನ್ನ, ಕುಮಾರ್, ಬಿಡದಿ ಸಂತೋಷ್ ಮತ್ತಿತರರು ಹಾಜರಿದ್ದರು.

'ಸಂಪನ್ಮೂಲ ಮರುಬಳಕೆಯ ಮೂಲಕ ಹವಾಮಾನ ಸಕಾರಾತ್ಮಕ ಕಂಪನಿಯಾಗುವತ್ತ' ಕಿರ್ಲೋಸ್ಕರ್

ಸೂರ್ಯಪ್ರಗತಿನ್ಯೂಸ್.ಕಾಂ



ಈ ವರ್ಷದ ಆವೃತ್ತಿಯು ಸಂಪನ್ಮೂಲ ಮರುಬಳಕೆ, ತ್ಯಾಜ್ಯ ಕಡಿತ ಮತ್ತು ಹವಾಮಾನ-ಸಕಾರಾತ್ಮಕ ಪದ್ಧತಿಗಳ ಮೇಲೆ ಗಮನ ಕೇಂದ್ರೀಕರಿಸುತ್ತದೆ

ರಾಮನಗರ: ಬಿಡದಿಯ ಟೊಯೊಟಾ ಕಿರ್ಲೋಸ್ಕರ್ ಮೋಟಾರ್ ತನ್ನ ಕಾರ್ಯಾಚರಣೆಗಳು ಮತ್ತು ಮಧ್ಯಸ್ಥಗಾರರ ಪರಿಸರ ವ್ಯವಸ್ಥೆಯಾದ್ಯಂತ ಸುಸ್ಥಿರ ಪದ್ಧತಿಗಳಿಗೆ ತನ್ನ ಬದ್ಧತೆಯನ್ನು ಮತ್ತೊಮ್ಮೆ ಒತ್ತಿ ಹೇಳುವ ಮೂಲಕ "ಸಂಪನ್ಮೂಲ ಮರುಬಳಕೆಯ ಮೂಲಕ ಹವಾಮಾನ ಸಕಾರಾತ್ಮಕ ಕಂಪನಿಯಾಗುವತ್ತ " ಎಂಬ ಧ್ಯೇಯವಾಕ್ಯದಡಿಯಲ್ಲಿ ಪರಿಸರ ಮಾಸ 2026 ಅನ್ನು ಪ್ರಾರಂಭಿಸಿದೆ. ಟೊಯೊಟಾ ಎನ್ವಿರಾನ್ಮೆಂಟಲ್ ಚಾಲೆಂಜ್ 2050 ಮತ್ತು ಇತರ ಸುಸ್ಥಿರತೆಯ ಗುರಿಗಳ ಮಾರ್ಗದರ್ಶನದಲ್ಲಿ ಈ ಉಪಕ್ರಮವು ಪೂರೈಕೆದಾರರು, ವಿತರಕರು, ಲಾಜಿಸ್ಟಿಕ್ಸ್ ಪಾಲುದಾರರು, ಉದ್ಯೋಗಿಗಳು ಮತ್ತು ಸಮುದಾಯಗಳನ್ನು ಒಟ್ಟುಗೂಡಿಸುತ್ತದೆ, ಸಂಪನ್ಮೂಲ ಮರುಬಳಕೆ, ತ್ಯಾಜ್ಯ ಕಡಿತ ಮತ್ತು ಹವಾಮಾನ-ಸಕಾರಾತ್ಮಕವಾದ ಕ್ರಮದತ್ತ ಹೆಜ್ಜೆ ಹಾಕುತ್ತದೆ.

ಟಿಕೆಎಂ ಸಂಪನ್ಮೂಲ ಬಳಕೆಯನ್ನು ಕಡಿಮೆ ಮಾಡಲು ಮತ್ತು ತನ್ನ ಕಾರ್ಯಾಚರಣೆಗಳಲ್ಲಿ ತ್ಯಾಜ್ಯವನ್ನು ಕಡಿತಗೊಳಿಸಲು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದೆ. ಕಂಪನಿಯು ಮುಂದಿನ ಐದು ವರ್ಷಗಳಲ್ಲಿ ಪ್ಯಾಕೇಜಿಂಗ್ ಬಳಕೆಯಲ್ಲಿ 12.5% ಕಡಿತವನ್ನು ವಿಭಿನ್ನ ಕ್ಷೇತ್ರಗಳಲ್ಲಿನ ಸುಧಾರಣಾ ಚಟುವಟಿಕೆಗಳ ಮೂಲಕ ಮತ್ತು ವಾರ್ಷಿಕ ಮೈಲಿಗಲ್ಲುಗಳ ಮೂಲಕ 2030 ರ ವೇಳೆಗೆ ಪ್ರಕ್ರಿಯೆ-ಉತ್ಪತ್ತಿಯಾಗುವ ತ್ಯಾಜ್ಯವನ್ನು 15% ಕಡಿಮೆ ಮಾಡುವ ಗುರಿಯನ್ನು ಹೊಂದಿದೆ. ಈ ಪ್ರಯತ್ನಗಳು ಬಲವಾದ ತ್ಯಾಜ್ಯ ಮರುಬಳಕೆಯ ಕ್ರಮಗಳು ಮತ್ತು ಶೂನ್ಯ ತ್ಯಾಜ್ಯದಿಂದ ಭೂಭರ್ತಿಗಾಗಿ ನಿರಂತರ ಪ್ರಯತ್ನದಿಂದ ಬೆಂಬಲಿತವಾಗಿವೆ. ಟಿಕೆಎಂ ತನ್ನ ಉತ್ಪಾದನಾ ಸೌಲಭ್ಯಗಳನ್ನು ಸಂಪೂರ್ಣವಾಗಿ ನವೀಕರಿಸಬಹುದಾದ ವಿದ್ಯುಚ್ಛಕ್ತಿಯ ಮೇಲೆ ನಡೆಸಲು ಬದ್ಧವಾಗಿದೆ. ಪೂರೈಕೆದಾರರಲ್ಲಿ ಸಂಪನ್ಮೂಲ ದಕ್ಷತೆ ಮತ್ತು ಜವಾಬ್ದಾರಿಯುತ ವಸ್ತು ಬಳಕೆಯನ್ನು ಉತ್ತೇಜಿಸಲು, ಪೂರೈಕೆದಾರರ ಕಾರ್ಯಾಚರಣೆಗಳಲ್ಲಿ ತ್ಯಾಜ್ಯ ಕಡಿತವನ್ನು ಪ್ರೋತ್ಸಾಹಿಸಲು ಮತ್ತು ಮರುಬಳಕೆಯ ವಸ್ತುಗಳ ಹೆಚ್ಚಿನ ಬಳಕೆಯನ್ನು ಉತ್ತೇಜಿಸಲು ಟಿಕೆಎಂ ಪೂರೈಕೆದಾರ ಪಾಲುದಾರರೊಂದಿಗೆ ನಿಕಟವಾಗಿ ಕೆಲಸ ಮಾಡುತ್ತಿದೆ. ಕಂಪನಿಯು ಈಜ2028-29 ರ ವೇಳೆಗೆ ಪೂರೈಕೆದಾರರ ಪ್ಯಾಕೇಜಿಂಗ್‌ನಲ್ಲಿ 60% ಮರುಬಳಕೆಯನ್ನು ಗುರಿಯಾಗಿಸಿಕೊಂಡಿದ್ದು ಪಾಲುದಾರರಿಗೆ ವಿಕಸನಗೊಳ್ಳುತ್ತಿರುವ ಪರಿಸರೀಯ ಅವಶ್ಯಕತೆಗಳನ್ನು ಸಂಧಿಸಲು ಸಹಾಯ ಮಾಡುತ್ತದೆ.

ಡೀಲರ್‌ಶಿಪ್ ಮಟ್ಟದಲ್ಲಿ, ಟಿಕೆಎಂ ಮರುಬಳಕೆಯ ಉಪಕ್ರಮಗಳನ್ನು ಹಂತ ಹಂತವಾಗಿ ಪ್ರಾರಂಭಿಸಲಿದೆ ಇದು ಸೆಪ್ಟೆಂಬರ್ 2026 ರಲ್ಲಿ ಬೆಂಗಳೂರಿನಲ್ಲಿ ಪ್ರಾರಂಭವಾಗುತ್ತಿದ್ದು, ಡಿಸೆಂಬರ್ 2026 ರ ವೇಳೆಗೆ ಕರ್ನಾಟಕದಾದ್ಯಂತ ವಿಸ್ತರಿಸುತ್ತದೆ ಮತ್ತು ಮಾರ್ಚ್ 2027 ರ ವೇಳೆಗೆ ರಾಷ್ಟ್ರವ್ಯಾಪಿಯಾಗುತ್ತದೆ. ಈ ಉಪಕ್ರಮವು ಡೀಲರ್‌ಶಿಪ್ ಕಾರ್ಯಾಚರಣೆಗಳಲ್ಲಿ ಮರುಬಳಕೆಯ ಅಭ್ಯಾಸಗಳನ್ನು ಉತ್ತೇಜಿಸುತ್ತದೆ ಮತ್ತು ಜವಾಬ್ದಾರಿಯುತ ಸಂಪನ್ಮೂಲ ನಿರ್ವಹಣೆಯ ಬಗ್ಗೆ ಹೆಚ್ಚಿನ ಗ್ರಾಹಕರ ಜಾಗೃತಿಯನ್ನು ನಿರ್ಮಿಸುತ್ತದೆ.

ಹೆಚ್ಚಿನ ರೈಲು ಬಳಕೆ, ಹೆಚ್ಚಿನ ಸಿಎನ್‌ಜಿ ಅಳವಡಿಕೆ ಮತ್ತು ಉತ್ತಮ ಕಾರ್ಯಾಚರಣೆಯ ದಕ್ಷತೆಯ ಮೂಲಕ ಕಡಿಮೆ ಪ್ಯಾಕೇಜಿಂಗ್ ತ್ಯಾಜ್ಯವನ್ನು ಕೇಂದ್ರೀಕರಿಸಿ ಸಾರಿಗೆ ಮತ್ತು ವಿತರಣೆಯಲ್ಲಿ ಪರಿಸರ ಕಾರ್ಯಕ್ಷಮತೆಯನ್ನು ಸುಧಾರಿಸಲು ಕಂಪನಿಯು ಲಾಜಿಸ್ಟಿಕ್ಸ್ ಪಾಲುದಾರರು ಮತ್ತು ಪ್ರಾದೇಶಿಕ ಸೌಲಭ್ಯಗಳೊಂದಿಗೆ ಕೆಲಸ ಮಾಡುತ್ತಿದೆ.

ವ್ಯವಹಾರದಾಚೆಗೆ, ಟಿಕೆಎಂ ಪರಿಸರ ಶಿಕ್ಷಣ ಮತ್ತು ಜೀವವೈವಿಧ್ಯ ಸಂರಕ್ಷಣೆಯ ಮೂಲಕ ತನ್ನ ಸಮುದಾಯ ತೊಡಗಿಸಿಕೊಳ್ಳುವಿಕೆಯನ್ನು ಮುಂದುವರಿಸಿದೆ. ಟೊಯೊಟಾ ಗ್ರೀನ್ ವೇವ್ ಪ್ರಾಜೆಕ್ಟ್ 650 ಕ್ಕೂ ಹೆಚ್ಚು ಸಸ್ಯ ಪ್ರಭೇದಗಳು ಮತ್ತು 400 ಕ್ಕೂ ಹೆಚ್ಚು ಪ್ರಾಣಿ ಪ್ರಭೇದಗಳನ್ನು ಪೋಷಿಸಲು ಕೊಡುಗೆ ನೀಡಿದೆ. ಏತನ್ಮಧ್ಯೆ, ಪರಿಸರ ಸಂರಕ್ಷಣೆ ಮತ್ತು ಸುಸ್ಥಿರ ಜೀವನದ ವಿಷಯಗಳ ಬಗೆಗಿನ ಇಕೋ-ಝೋನ್ ಕಾರ್ಯಕ್ರಮವು 62,000 ಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ತಲುಪಿದೆ.

ಟೊಯೊಟಾ ಕಿರ್ಲೋಸ್ಕರ್ ಮೋಟಾರ್‌ನ ಕಾರ್ಯನಿರ್ವಾಹಕ ಉಪಾಧ್ಯಕ್ಷರು ಮತ್ತು ಉತ್ಪಾದನಾ ನಿರ್ದೇಶಕರಾದ ಶ್ರೀ ಬಿ. ಪದ್ಮನಾಭ ಮಾತನಾಡಿ, "ಹವಾಮಾನ-ಸಕಾರಾತ್ಮಕ ಕಂಪನಿಯಾಗುವತ್ತ ನಮ್ಮ ಪ್ರಯಾಣವು ಪ್ರತಿ ಹಂತದಲ್ಲೂ ನಿರಂತರ ಸುಧಾರಣೆ, ಸಹಯೋಗ ಮತ್ತು ಜವಾಬ್ದಾರಿಯುತ ಕ್ರಮದ ಅಗತ್ಯವಿದೆ. ಪರಿಸರ ತಿಂಗಳು 2026 ರ ಮೂಲಕ, ನಮ್ಮ ಮೌಲ್ಯ ಸರಪಳಿಯಾದ್ಯಂತ ಸುಸ್ಥಿರ ಅಭ್ಯಾಸಗಳನ್ನು ಉತ್ತೇಜಿಸುವಾಗ ಸಂಪನ್ಮೂಲ ಮರುಬಳಕೆ ಮತ್ತು ತ್ಯಾಜ್ಯ ಕಡಿತದ ಮೇಲೆ ನಮ್ಮ ಗಮನವನ್ನು ನಾವು ಬಲಪಡಿಸುತ್ತಿದ್ದೇವೆ. ಪ್ರತಿಯೊಂದು ವೈಯಕ್ತಿಕ ಕೊಡುಗೆ, ಅದು ಎಷ್ಟೇ ಸಣ್ಣದಾಗಿ ಕಾಣಿಸಿದರೂ, ಅರ್ಥಪೂರ್ಣ ಬದಲಾವಣೆಯನ್ನು ಸೃಷ್ಟಿಸುವ ಶಕ್ತಿಯನ್ನು ಹೊಂದಿದೆ ಎಂದು ನಾವು ದೃಢವಾಗಿ ನಂಬುತ್ತೇವೆ. ಒಟ್ಟಾಗಿ, ಈ ಸಾಮೂಹಿಕ ಪ್ರಯತ್ನಗಳು ಪರಿಸರದ ಪರಿಣಾಮವನ್ನು ಕಡಿಮೆ ಮಾಡಲು ಮತ್ತು ನಮ್ಮ ದೀರ್ಘಕಾಲೀನ ಸುಸ್ಥಿರತೆಯ ಗುರಿಗಳನ್ನು ಮುನ್ನಡೆಸಲು ನಮಗೆ ಸಹಾಯ ಮಾಡುತ್ತದೆ.

ಪರಿಸರ ಮಾಸ 2026 ನಂತಹ ಉಪಕ್ರಮಗಳ ಮೂಲಕ, ಟೊಯೊಟಾ ಕಿರ್ಲೋಸ್ಕರ್ ಮೋಟಾರ್ ಪರಿಸರ ಜಾಗೃತಿಯನ್ನು ಬಲಪಡಿಸುವುದು, ಸುಸ್ಥಿರತೆಯಲ್ಲಿ ವ್ಯಾಪಕ ಭಾಗವಹಿಸುವಿಕೆಯನ್ನು ಉತ್ತೇಜಿಸುವುದು ಮತ್ತು ಜವಾಬ್ದಾರಿಯುತ ಬೆಳವಣಿಗೆಯ ಮೂಲಕ ಸಮಾಜಕ್ಕೆ ದೀರ್ಘಕಾಲೀನ ಮೌಲ್ಯವನ್ನು ಸೃಷ್ಟಿಸುವ ಬದ್ಧತೆಯನ್ನು ಬಲಪಡಿಸುವ ಗುರಿಯನ್ನು ಹೊಂದಿದೆ.

ಒಂಟಿಯಾಗಿ ನಡೆದುಕೊಂಡು ಹೋಗುತ್ತಿದ್ದ ವೃದ್ಧೆಯ ಸರ ಕಸಿದು ಪರಾರಿ; ಇಬ್ಬರು ಆರೋಪಿಗಳ ಬಂಧನ

ಸೂರ್ಯಪ್ರಗತಿನ್ಯೂಸ್.ಕಾಂ



ಬೆಂಗಳೂರು: ಒಂಟಿಯಾಗಿ ನಡೆದುಕೊಂಡು ಹೋಗುತ್ತಿದ್ದ ವೃದ್ಧೆಯೊಬ್ಬರ ಚಿನ್ನದ ಸರ ಕಸಿದು ಪರಾರಿಯಾಗಿದ್ದ ಇಬ್ಬರು ಸರಗಳ್ಳರನ್ನು ಜ್ಞಾನಭಾರತಿ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಬಂಧಿತ ಆರೋಪಿಗಳನ್ನು ಪ್ರಮೋದ್ ಬಸಪ್ಪ ಹಾಗೂ ಮನೋಹರ್ ಎಂದು ಗುರುತಿಸಲಾಗಿದೆ. ಆರೋಪಿಗಳು ಕಳೆದ 18ರಂದು ಸಂಜೆ ವೇಳೆ ಕುಕ್ಕರ್ ರಿಪೇರಿಗೆ ನೀಡಿ ಮನೆಗೆ ಹಿಂದಿರುಗುತ್ತಿದ್ದ ವೃದ್ಧೆಯನ್ನು ಗುರಿಯಾಗಿಸಿಕೊಂಡು ಬೈಕ್‌ನಲ್ಲಿ ಬಂದು ಅವರ ಕುತ್ತಿಗೆಯಲ್ಲಿದ್ದ ಚಿನ್ನದ ಸರವನ್ನು ಕಸಿದು ಪರಾರಿಯಾಗಿದ್ದರು.

ಪ್ರಕರಣ ದಾಖಲಿಸಿಕೊಂಡ ಜ್ಞಾನಭಾರತಿ ಪೊಲೀಸರು ಸಿಸಿಟಿವಿ ದೃಶ್ಯಾವಳಿ ಹಾಗೂ ತಾಂತ್ರಿಕ ಮಾಹಿತಿ ಆಧರಿಸಿ ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸಿದ್ದಾರೆ.

ವಿಚಾರಣೆ ವೇಳೆ ಆರೋಪಿಗಳು ಕಳವು ಮಾಡಿದ ಚಿನ್ನದ ಸರವನ್ನು ಗದಗ್‌ನಲ್ಲಿ ಅಡವಿಟ್ಟು ಬಂದ ಹಣದಿಂದ ಐಶಾರಾಮಿ ಜೀವನ ನಡೆಸಿರುವುದು ಬೆಳಕಿಗೆ ಬಂದಿದೆ.

ಬಂಧಿತರಿಂದ ಸುಮಾರು 45 ಗ್ರಾಂ ತೂಕದ, ಐದು ಲಕ್ಷ ರೂಪಾಯಿ ಮೌಲ್ಯದ ಚಿನ್ನಾಭರಣವನ್ನು ವಶಪಡಿಸಿಕೊಳ್ಳಲಾಗಿದೆ. ಆರೋಪಿಗಳ ವಿರುದ್ಧ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗಿದ್ದು, ಹೆಚ್ಚಿನ ತನಿಖೆ ಮುಂದುವರಿದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮುಖ್ಯರಸ್ತೆಗಳಲ್ಲಿ ಸೃಷ್ಟಿಯಾಗಿರುವ ಗುಂಡಿಗಳನ್ನು ಮುಚ್ಚಿ ಎಂದು ಬಿಜೆಪಿ ಕಾರ್ಯಕರ್ತರಿಂದ ಪ್ರತಿಭಟನೆ

ಸೂರ್ಯಪ್ರಗತಿನ್ಯೂಸ್.ಕಾಂ




ಆನೇಕಲ್: ತಾಲ್ಲೂಕು ಕೇಂದ್ರವಾದ ಆನೇಕಲ್‌ನಲ್ಲಿ ಎಲ್ಲಾ ಮುಖ್ಯರಸ್ತೆಗಳು ಗುಂಡಿಗಳಿಂದ ಕೂಡಿದ್ದು ಅಪಘಾತಗಳು ಹೆಚ್ಚಾಗಿವೆ. ಕೂಡಲೇ, ಗುಂಡಿಗಳನ್ನು ಮುಚ್ಚಬೇಕು ಎಂದು ಒತ್ತಾಯಿಸಿ ಬಿಜೆಪಿ ಮುಖಂಡರು ರಸ್ತೆ ಗುಂಡಿಗಳ ಮುಂದೆ ಕುಳಿತು ಪ್ರತಿಭಟನೆ ನಡೆಸಿದರು.

ಈ ವೇಳೆ ಮಾತನಾಡಿ ಬಿಜೆಪಿ ಮುಖಂಡರು ತಾಲ್ಲೂಕು ಕೇಂದ್ರದ ಎಲ್ಲಾ ರಸ್ತೆಗಳು ಸಂಪೂರ್ಣ ಹಾಳಾಗಿದ್ದು ಗುಂಡಿಗಳ ಮಧ್ಯೆ ಜನರು ಸಂಚಾರ ಮಾಡಬೇಕಾದ ಪರಿಸ್ಥಿತಿಯಿದೆ. ದ್ವಿ-ಚಕ್ರವಾಹನಗಳ ಹಲವಾರು ಮಂದಿ ಅಪಘಾತಕ್ಕೀಡಾಗಿದ್ದಾರೆ. ಪ್ರಾಣವನ್ನು ಕೈಯಲ್ಲಿ ಹಿಡಿದುಕೊಂಡು ಓಡಾಡಬೇಕಾದ ಪರಿಸ್ಥಿತಿಯಿದೆ ಎಂದು ದೂರಿದರು. ಸಂಬಂಧಪಟ್ಟವರು ರಸ್ತೆ ಗುಂಡಿ ಮುಚ್ಚಿ ಸಾರ್ವಜನಿಕರ ಓಡಾಟಕ್ಕೆ ಅನುವು ಮಾಡಿಕೊಡಬೇಕು ಎಂದು ಮನವಿ ಮಾಡಿದ್ದರು

ಪಟ್ಟಣದ ಅನೇಕಲ್-ಚಂದಾಪುರ ರಸ್ತೆಯು ಹಲವೆಡೆ ಗುಂಡಿಗಳಿಂದ ತುಂಬಿದೆ. ಆನೇಕಲ್-ಹೊಸೂರು ರಸ್ತೆ, ಅನೇಕಲ್-ಬನ್ನೇರುಘಟ್ಟ ರಸ್ತೆ ಸೇರಿದಂತೆ ಪಟ್ಟಣದ ಬಹುತೇಕ ಮುಖ್ಯ-ರಸ್ತೆಗಳು ಗುಂಡಿಗಳಿಂದ ತುಂಬಿವೆ. ರಸ್ತೆ ಗುಂಡಿಗಳನ್ನು ಮುಚ್ಚಲಾಗುತ್ತ-ದೆ. ಆದರೆ, ಕೆಲವೇ ದಿನಗಳಲ್ಲಿ ಮತ್ತೆ ಗುಂಡಿಗಳು ಬೀಳುತ್ತಿವೆ. ಹಾಗಾಗಿ, ರಸ್ತೆಗಳನ್ನು ಸಮಗ್ರವಾಗಿ ಅಭಿವೃದ್ಧಿಪಡಿ-ಸಬೇಕು ಎಂದು ಮನವಿ ಮಾಡಿದ್ದರು .

ನಗರಸಭೆ ದುರಾಡಳಿತ ಖಂಡಿಸಿ ಕರವೇ ಪ್ರತಿಭಟನೆ

ಸೂರ್ಯಪ್ರಗತಿನ್ಯೂಸ್.ಕಾಂ



ಕೊಳ್ಳೇಗಾಲ ನಗರಸಭೆಯ ದುರಾಡಳಿತ, ಭ್ರಷ್ಟಾಚಾರ ಮತ್ತು ವಿಳಂಬ ನೀತಿ ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆ(ನಾರಾಯಣ್ ಗೌಡ ಬಣ) ವತಿಯಿಂದ ಪ್ರತಿಭಟನೆ ನಡೆಸಿದರು.

ಪಟ್ಟಣದ ಬಸ್ ನಿಲ್ದಾಣದಿಂದ ಕರವೇ ತಾಲ್ಲೂಕು ಅಧ್ಯಕ್ಷ ಮೆಹಬೂಬ್ ಪಾಷ ನೇತೃತ್ವದಲ್ಲಿ ನಗರಸಭೆ ಆಡಳಿತ ವಿರುದ್ಧ ಘೋಷಣೆ ಕೂಗುವ ಮೂಲಕ ಡಾ.ರಾಜಕುಮಾರ್, ಡಾ.ಅಂಬೇಡ್ಕರ್ ರಸ್ತೆ ಮೂಲಕ ಪ್ರತಿಭಟಿಸಿ ಪೌರಾಯುಕ್ತರಿಗೆ ಮನವಿ ಸಲ್ಲಿಸಿದರು.

ಪ್ರತಿಭಟನೆ ನಿರತ ಕರವೇ ನಾರಾಯಣ ಗೌಡ ಬಣದ ಅಧ್ಯಕ್ಷ ಮೆಹಬೂಬ್ ಫಾಷ ಮಾತನಾಡಿ ಸ್ಥಳೀಯ ನಗರಸಭೆಯ ವ್ಯಾಪ್ತಿಯಲ್ಲಿ ದಿನೇ ದಿನೇ ಹೆಚ್ಚಾಗುತ್ತಿರುವ ಭ್ರಷ್ಟಾಚಾರ, ಅಧಿಕಾರಿಗಳ ಲಂಚಾವತಾರ ಮತ್ತು ಸಾರ್ವಜನಿಕ ಕೆಲಸಗಳಲ್ಲಿನ ತೀವ್ರ ನಿರ್ಲಕ್ಷ್ಯವನ್ನು ಖಂಡಿಸಿ, ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಪ್ರತಿಭಟನೆ ಮಾಡುತ್ತಿದ್ದು ಇದಕ್ಕೆ ಪ್ರಮುಖ ಕಾರಣವೇನೆಂದರೆ ಸಾರ್ವಜನಿಕರು ಖಾತೆ ಬದಲಾವಣೆ, ಕಟ್ಟಡ ನಕ್ಷೆ ಮಂಜೂರಾತಿ, ಜನನ-ಮರಣ ಪ್ರಮಾಣಪತ್ರ ಸೇರಿದಂತೆ ವಿವಿಧ ಅಗತ್ಯ ಸೇವೆಗಳಿಗಾಗಿ ಅರ್ಜಿ ಸಲ್ಲಿಸಿ ಸಾರ್ವಜನಿಕರು ಅಲೆದಾಡುತ್ತಿದ್ದಾರೆ. ಕಚೇರಿಯಲ್ಲಿ ಮಧ್ಯವರ್ತಿಗಳ ಹಾವಳಿ ಹೆಚ್ಚಾಗಿದ್ದು, ಪ್ರತಿಯೊಂದು ಸಣ್ಣ ಕೆಲಸಕ್ಕೂ ಸಾರ್ವಜನಿಕರಿಂದ ನೇರವಾಗಿ ಅಥವಾ ಪರೋಕ್ಷವಾಗಿ ಲಂಚಕ್ಕೆ ಬೇಡಿಕೆ ಇಡಲಾಗುತ್ತಿದೆ. ಪ್ರಾಮಾಣಿಕವಾಗಿ ಕೆಲಸ ಮಾಡಿಸಿಕೊಳ್ಳಲು ಬರುವ ನಾಗರೀಕರಿಗೆ ಅನಗತ್ಯವಾಗಿ ಅಲೆದಾಡಿಸಿ ಕಿರುಕುಳ ನೀಡಲಾಗುತ್ತಿದೆ. ಪಟ್ಟಣದ ರಸ್ತೆಗಳ ದುರಸ್ತಿ, ಕುಡಿಯುವ ನೀರಿನ ಪೂರೈಕೆ, ಕಸ ವಿಲೇವಾರಿ ಮತ್ತು ಒಳಚರಂಡಿ ವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದ್ದರೂ ನಗರಸಭೆ ಕಣ್ಣು ಮುಚ್ಚಿ ಕುಳಿತಿದೆ. ಅಭಿವೃದ್ಧಿ ಕಾಮಗಾರಿಗಳ ಹೆಸರಿನಲ್ಲಿ ಸಾರ್ವಜನಿಕ ಹಣ ಪೋಲಾಗುತ್ತಿದೆ. ನಾಗರಿಕರು ಕಟ್ಟುವ ತೆರಿಗೆ ಹಣದಿಂದ ಸಂಬಳ ಪಡೆಯುವ ಅಧಿಕಾರಿಗಳು ಸಾರ್ವಜನಿಕರನ್ನು ಗುಲಾಮರಂತೆ ಕಾಣುತ್ತಿದ್ದಾರೆ. ನಿಯಮಿತ ಅವಧಿಯಲ್ಲಿ ಕೆಲಸ ಮಾಡಿಕೊಡದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಬೇಕು. ಈ ಮೂಲಕ ನಗರಸಭೆಯ ಆಡಳಿತ ಯಂತ್ರಕ್ಕೆ ಚುರುಕು ಮುಟ್ಟಿಸಲು ಮತ್ತು ಭ್ರಷ್ಟ ಅಧಿಕಾರಿಗಳಿಗೆ ನಮ್ಮ ಕರವೇ ವತಿಯಿಂದ ಎಚ್ಚರಿಕೆ ಕೊಡುತ್ತಿದ್ದೇವೆ.

ಮುಂದಿನ ದಿನಗಳಲ್ಲಿ ಭ್ರಷ್ಟಾಚಾರ ಕಡಿವಾಣ ಹಾಕದಿದ್ದರೆ ನಮ್ಮ ಕರವೇ ವತಿಯಿಂದ ಉಗ್ರ ಹೋರಾಟವನ್ನು ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷರು ಹೆಚ್‌ಎನ್ ಮಂಜೇಶ್, ಜಿಲ್ಲಾ ಪ್ರಧಟನ ಕಾರ್ಯದರ್ಶಿ ರೂಪೇಶ್.ಎಂ, ಸಂಘಟನಾ ಕಾರ್ಯದರ್ಶಿ ಕಾರ್ಯದರ್ಶಿ ತಬರೆಸ್ ಪಾಷ, ಬಸವಣ್ಣ ಮುಳ್ಳೂರು, ಸಂಚಾಲಕರು ಇಫ್ರಾನ್, ನಯಾಜ್ ಪಾಷ, ತೌಸೀಫ್ ಬೇಗ್, ಯಳಂದೂರು ಮಹದೇವಸ್ವಾಮಿ, ಇಸ್ಮಾಯಿಲ್ ಹಾಗೂ ಇತರರು ಇದ್ದರು.

ನೂತನ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಪ್ರಮಾಣ ವಚನ ಸಂಭ್ರಮಾಚರಣೆ

ಸೂರ್ಯಪ್ರಗತಿನ್ಯೂಸ್.ಕಾಂ



ರಾಮನಗರ: ಬೆಂಗಳೂರಿನ ಲೋಕಭವನದಲ್ಲಿ ಕರ್ನಾಟಕ ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಡಿ.ಕೆ. ಶಿವಕುಮಾರ್ ಅವರು ಪ್ರಮಾಣವಚನ ಸ್ವೀಕರಿಸುತ್ತಿದ್ದಂತೆಯೇ ರಾಮನಗರದ ಐಜೂರು ಸರ್ಕಲ್‌ನಲ್ಲಿ ನಗರಸಭಾ ಮಾಜಿ ಉಪಾಧ್ಯಕ್ಷೆ ಮಂಗಳಾ ಶಂಭುಗೌಡ ನೇತೃತ್ವದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು.

ಕಾಂಗ್ರೆಸ್ ಮುಖಂಡ ಶಂಭುಗೌಡ ಮಾತನಾಡಿ ಇಂದು ನಮಗೆ ಸಂಭ್ರಮ ಸಡಗರದ ದಿನ ನಮ್ಮ ನಾಯಕರು ನಮ್ಮ ಜಿಲ್ಲೆಯ ನಿಜವಾದ ಮಣ್ಣಿನ ಮಗ ರಾಜ್ಯದ ಅಧಿಕಾರದ ಚುಕ್ಕಾಣಿ ಹಿಡಿದಿದ್ದಾರೆ. ಬೆಂಗಳೂರಿನ ಲೋಕಭವನದಲ್ಲಿ ರಾಜ್ಯಪಾಲರ ಸಮ್ಮುಖದಲ್ಲಿ ರಾಜ್ಯದ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಡಿ.ಕೆ.ಶಿವಕುಮಾರ್ ಅವರನ್ನು ಜಿಲ್ಲೆ ಮತ್ತು ರಾಜ್ಯದ ಜನರು ಮರೆಯಲಾರರು.

ಈ ದಿನದ ಪ್ರಮಾಣವಚನ ಸ್ವೀಕಾರ ಸಮಾರಂಭಕ್ಕೆ ಜನರು ಹೆಚ್ಚಿನ ಸಂಖ್ಯೆಯಲ್ಲಿ ಬರಬಾರದು. ಸಂಭ್ರಮೋತ್ಸವವನ್ನು ನಿಮ್ಮ ಸ್ಥಳಗಳಲ್ಲಿ ಆಚರಿಸಬೇಕು ಹಾಗೂ ಮೊಬೈಲ್, ಟಿವಿಗಳಲ್ಲಿ ನೇರ ಪ್ರಸಾರ ಇದೆ. ಮುಂದಿನ ದಿನಗಳಲ್ಲಿ ನಿಮ್ಮ ಕ್ಷೇತ್ರಗಳಿಗೆ ಸ್ವತಃ ನಾನೇ ಭೇಟಿ ಮಾಡಿ ನಿಮ್ಮೆಲ್ಲರಿಗೂ ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದು ನೀಡಿದ ಸಂದೇಶವನ್ನು ನಾವೆಲ್ಲರೂ ಪಾಲಿಸಿದ್ದೇವೆ ಎಂದರು.

ರಾಮನಗರದ ಐಜೂರು ವೃತ್ತದಲ್ಲಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಡಿಕೆಶಿ ಅಭಿಮಾನಿಗಳು ಪಟಾಕಿ ಸಿಡಿಸಿ ಸಿಹ ಹಂಚುವ ಮೂಲಕ ಸಂಭ್ರಮ ಪಟ್ಟಿದ್ದೇವೆ. ಈ ಹಿಂದೆ ಜಿಲ್ಲೆಯ ಕೆಂಗಲ್ ಸೇರಿದಂತೆ ಇನ್ನಿತರೆ ಶಕ್ತಿ ಸ್ಥಾನಗಳಿಗೆ ಭೇಟಿ ನೀಡಿ ಅವರಿಗೆ ಮುಖ್ಯಮಂತ್ರಿ ಸ್ಥಾನ ಸಿಗಲಿ ಎಂದು ಕಾರ್ಯಕರ್ತರು ಅಭಿಮಾನಿಗಳು ಪ್ರಾರ್ಥನೆ ಸಲ್ಲಿಸಲಾಗಿತ್ತು ಇಂದು ಆ ದೇವರ ಆಶೀರ್ವಾದದ ಫಲ ನಮ್ಮ ನಾಯಕರಿಗೆ ಸಿಕ್ಕಿದೆ. ನಮ್ಮಗಳ ಪ್ರಾರ್ಥನೆಯ ಫಲ ಫಲಿಸಿದೆ ಎಂದು ಹೇಳಿದರು.

ಐಜೂರು ವೃತ್ತದಲ್ಲಿ ಸುಮಾರು 40 ಅಡಿ ಡಿ.ಕೆ.ಶಿವಕುಮಾರ್ ಅವರ ಕಟೌಟ್‌ನ್ನು ಅವರು ಮುಖ್ಯಮಂತ್ರಿ ಆಗುವ ಒಂದು ವಾರಗಳ ಮೊದಲೇ ನಿಲ್ಲಿಸಿದ್ದೇವೆ ಎಂದರು.

ನಗರಸಭೆ ಮಾಜಿ ಅಧ್ಯಕ್ಷೆ ಬಿ.ಸಿ. ಪಾರ್ವತಮ್ಮ ಮಾತನಾಡಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ರಾಜ್ಯಾದಾದ್ಯಂತ ಜನರಿಗೆ ಕಲ್ಯಾಣ ಕಾರ್ಯಕ್ರಮಗಳನ್ನು ತಾವು ಉಪ ಮುಖ್ಯಮಂತ್ರಿಗಳಾಗಿದ್ದಾಗ ನೀಡಿರುವುದರ ಜೊತೆಗೆ ಕಾಂಗ್ರೆಸ್ ಪಕ್ಷವನ್ನು ಸಂಘಟಿಸುತ್ತಾ ಮುಖ್ಯಮಂತ್ರಿಯಾಗಬೇಕೆಂಬ ಛಲದಿಂದ ಹೋರಾಟ ಮಾಡಿಕೊಂಡು ಬಂದವರು ಈ ದಿನ ಅವರ ಆಸೆ ಪೂರೈಸಿದೆ ನಮ್ಮಗಳ ಆಸೆಯೂ ನೆರವೇರಿದೆ ಮುಂದೆ ಜಿಲ್ಲೆ ಮತ್ತಷ್ಟು ಅಭಿವೃದ್ಧಿ ಅವರ ಆಡಳಿತದಲ್ಲಿ ಕಾಣಲಿದೆ ಎಂದರು.

ನಗರಸಭಾ ಉಪಾಧ್ಯಕ್ಷೆ ಗಿರಿಜಮ್ಮ ಗುರುವೇಗೌಡ, ಮಾಜಿ ಅಧ್ಯಕ್ಷೆ ವಿಜಯಕುಮಾರಿ, ಮುಖಂಡರಾದ ಮಂಜುಳಾ ಮರಿದೇವರು, ಗೀತಾ, ಮಹದೇವಮ್ಮ, ಲೀಲಾವತಿ, ಶಿವಲಿಂಗಪ್ಪ, ಷಣ್ಮುಗ, ಸಮದ್, ವೆಂಕಟೇಶ್, ರಂಗಸ್ವಾಮಿ ಗೊಲ್ಲರದೊಡ್ಡಿ, ಮಹಾಲಿಂಗ ಸೇರಿದಂತೆ ಹಲವರು ಇದ್ದರು.

6-7ರಂದು ವಾಣಿಜ್ಯ-ಕೈಗಾರಿಕಾ ಸಂಸ್ಥೆಗಳ ರಾಜ್ಯ ಮಟ್ಟದ ಸಮ್ಮೇಳನ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಕರ್ನಾಟಕ ವಾಣಿಜ್ಯ ಮತ್ತುಕೈಗಾರಿಕಾ ಮಹಾಸಂಸ್ಥೆ ಹಾಗೂ ತುಮಕೂರು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಆಶ್ರಯದಲ್ಲಿ ಈ ತಿಂಗಳ 6 ಮತ್ತು 7ರಂದು ರಾಜ್ಯ ಮಟ್ಟದ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಗಳ ಸಮ್ಮೇಳನ ಹಾಗೂ ತುಮಕೂರು ಸಂಸ್ಥೆಯ ಬೆಳ್ಳಿಹಬ್ಬ ಆಚರಣಾ ಸಮಾರಂಭವನ್ನು ತುಮಕೂರಿನಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾ ಸಂಸ್ಥೆ ಅಧ್ಯಕ್ಷೆಉಮಾರೆಡ್ಡಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ನಗರದ ಹೊರವಲಯದ ಹೆಗ್ಗೆರೆಯ ಹೆಚ್.ಎಂ.ಗಂಗಾಧರಯ್ಯ ಮೆಮೋರಿಯಲ್ ಹಾಲ್‌ನಲ್ಲಿ ಸಮ್ಮೇಳನ ಹಮ್ಮಿಕೊಂಡಿದ್ದು 6ರಂದು ಬೆಳಿಗ್ಗೆ 10.30ಕ್ಕೆ ಕೇಂದ್ರ ಜಲಶಕ್ತಿ ಮತ್ತು ರೈಲ್ವೆಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಸಮ್ಮೇಳನ ಉದ್ಘಾಟಿಸುವರು, ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಹಾಗೂ ಹಲವು ಸಚಿವರು, ಜಿಲ್ಲೆಯ ಶಾಸಕರು ಭಾಗವಹಿಸುವರು ಎಂದು ತಿಳಿಸಿದರು.

1916ರಲ್ಲಿ ವಿಶ್ವೇಶ್ವರಯ್ಯ ನವರು ಸ್ಥಾಪಿಸಿದ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆಯು ಕಳೆದ 110 ವರ್ಷಗಳಿಂದ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದೆ. ರಾಜ್ಯದ ವಾಣಿಜ್ಯ ಮತ್ತು ಕೈಗಾರಿಕಾಕ್ಷೇತ್ರದ ಬೆಳವಣಿಗೆಗೆ ಒತ್ತಾಸೆಯಾಗಿರುವ ಎಫ್.ಕೆ.ಸಿ.ಸಿ.ಐ ಸರ್ಕಾರ ಮತ್ತು ಕೈಗಾರಿಕೆಗಳ ನಡುವೆ ಸೇತುವೆಯಂತೆ ಕಾರ್ಯ ನಿರ್ವಹಿಸುತ್ತಿದ್ದು, ಕೈಗಾರಿಕಾ ಪರವಾದ ನಿಲುವುಗಳನ್ನು ತೆಗೆದುಕೊಳ್ಳಲು ಕೇಂದ್ರ ಮತ್ತುರಾಜ್ಯ ಸರ್ಕಾರಗಳಿಗೆ ನಿರಂತರ ನೆರವು ನೀಡುತ್ತಾ ಬಂದಿದೆ. ಸರ್ಕಾರ ವಾಣಿಜ್ಯ ಮತ್ತು ಕೈಗಾರಿಕಾ ಪರವಾದ ನೀತಿಗಳನ್ನು ಅನುಷ್ಠಾನಗೊಳಿಸಲು ಸಂಸ್ಥೆ ನಿರಂತರವಾಗಿ ಕೈ ಜೋಡಿಸುತ್ತಾ ಬಂದಿದೆ. ಕರ್ನಾಟಕ ಕೈಗಾರಿಕಾ ಅಭಿವೃದ್ಧಿ, ಹೊಸ ಆವಿಷ್ಕಾರಗಳು, ಉದ್ಯಮಶೀಲತೆಯಲ್ಲಿ ದೇಶದಲ್ಲಿಯೇ ಮುಂಚೂಣಿ ರಾಜ್ಯವಾಗಿದೆ ಎಂದು ಉಮಾರೆಡ್ಡಿ ಹೇಳಿದರು.



ಬೆಂಗಳೂರು ದೇಶದ ಐಟಿ ರಾಜಧಾನಿಯೆಂದೇ ಹೆಸರು ಪಡೆದಿದೆ, ಆದರೆಕೈಗಾರಿಕಾ ಬೆಳವಣಿಗೆಗಳನ್ನು ಕೇವಲ ಬೆಂಗಳೂರಿಗೆ ಸೀಮಿತಗೊಳಿಸದೆ, ತುಮಕೂರು, ಮೈಸೂರು, ಬೆಳಗಾವಿ, ಹುಬ್ಬಳ್ಳಿ, ಧಾರವಾಡ, ಕಲಬುರಗಿ, ಮಂಗಳೂರಿನಂತಹ ಎರಡನೇ ಹಂತದ ನಗರಗಳಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಚಟುವಟಿಕೆಗಳನ್ನು ಪ್ರೋತ್ಸಾಹಿಸಲು ಸರ್ಕಾರಒತ್ತು ನೀಡಬೇಕು.ಕೈಗಾರಿಕಾ ಕ್ಷೇತ್ರಗಳು ದೊಡ್ಡ ಪ್ರಮಾಣದಲ್ಲಿ ಅಭಿವೃದ್ಧಿಯಾದಾಗರಾಜ್ಯದ ನಿರುದ್ಯೋಗ ಸಮಸ್ಯೆಗೆ ಪರಿಹಾರವನ್ನುಕಂಡು ಕೊಳ್ಳಲು ಸಾಧ್ಯವಾಗುತ್ತದೆ. ಕರ್ನಾಟಕ ವಿದೇಶಿ ಹೂಡಿಕೆಗೆಅತ್ಯಂತ ಪ್ರಶಸ್ತವಾದ ರಾಜ್ಯವಾಗಿದ್ದು, ದೇಶದಲ್ಲಿಯೇಕೈಗಾರಿಕೋದ್ಯಮ ಸ್ನೇಹಿ ರಾಜ್ಯ ಎಂಬ ಖ್ಯಾತಿಯನ್ನು ಗಳಿಸಿದೆ ಎಂದರು.

ಜಿಲ್ಲೆಗಳಲ್ಲಿ ಪ್ರಸ್ತುತ ಎದುರಿಸುತ್ತಿರುವ ವಾಣಿಜ್ಯ, ಕೈಗಾರಿಕಾ ಸಮಸ್ಯೆಗಳ ಬಗ್ಗೆ ಚರ್ಚಿಸಿ ಪರಿಹಾರ ಕಂಡುಕೊಳ್ಳಲು ಈ ಸಮ್ಮೇಳನ ವೇದಿಕೆ ಯಾಗಲಿದೆ. ರಾಜ್ಯದಲ್ಲಿ 38 ಲಕ್ಷ ಎಂಎಸ್‌ಎಂಇ ಉದ್ಯಮಗಳಿದ್ದು, ಇವು ಲಕ್ಷಾಂತರ ಜನರಿಗೆ ಉದ್ಯೋಗ ನೀಡುವಜತೆಗೆ ಸಾವಿರಾರು ಕೋಟಿ ವಹಿವಾಟು ನಡೆಸುತ್ತಿವೆ. ಬೆಂಗಳೂರಿನಲ್ಲಿ ಮಾತ್ರವಲ್ಲದೆ, ಬೇರೆ ಜಿಲ್ಲೆಗಳಲ್ಲೂ ಇ-ಖಾತಾ ಜನರೇಟ್ ಆಗುತ್ತಿಲ್ಲ. ಖಾತೆಯಲ್ಲಿ ತಪ್ಪಾಗಿರುವುದಕ್ಕೆ ಸರಿಪಡಿಸಲು ಸಾಕಷ್ಟು ಸಮಯ ಹಿಡಿಯುತ್ತಿದೆ. ಖಾತಾ ಪಡೆಯಲು ವಿಳಂಬವಾಗಿ ಅನೇಕ ಕೈಗಾರಿಕೆಗಳು ನೋಂದಣಿ ಆಗುತ್ತಿಲ್ಲ. ಅನೇಕರು ಉದ್ಯಮಕ್ಕಾಗಿ ಸಾಲ ಪಡೆದು ಪ್ರಕ್ರಿಯೆ ವಿಳಂಬದಿಂದಾಗಿಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಕಾವೇರಿ ಪೋರ್ಟಲ್ ಕಾರ್ಯ ನಿರ್ವಹಿಸುತ್ತಿಲ್ಲ. ಪಂಚಾಯತ್ ತೆರಿಗೆಯಲ್ಲೂ ಕಾನೂನು ಉಲ್ಲಂಘನೆ ಆಗುತ್ತಿದೆ. ಹಾಗೂ ಕೈಗಾರಿಕೆಗಳ ಮೂಲ ಭೂತ ಸೌಕರ್ಯದ ಅಭಿವೃದಿಗೆ ಹೆಚ್ಚು ಒತ್ತು ನೀಡಬೇಕು. ಈ ಎಲ್ಲಾ ವಿಷಯಗಳ ಬಗ್ಗೆ ನಾವು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ಪರಿಹಾರಕಂಡು ಕೊಳ್ಳಲು ಹಾಗೂ ರಾಜ್ಯದ ಆರ್ಥಿಕ ಅಭಿವೃದ್ಧಿ ಮತ್ತು ಜಿಲ್ಲೆಗಳ ಅಭಿವೃದ್ಧಿಯ ಬಗ್ಗೆ ಈ ಸಮ್ಮೇಳನವು ದಿಕ್ಸೂಚಿಯಾಗಲಿದೆ ಎಂದು ಹೇಳಿದರು.

ಸಣ್ ಸುದ್ದಿ



ಕರ್ನಾಟಕ ನಾಟಕ ಅಕಾಡೆಮಿ ಬೆಂಗಳೂರು, ಅನನ್ಯ ಇನ್ಸಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್ ಸಹಯೋಗದೊಂದಿಗೆ ಆಯೋಜಿಸಿದ್ದ ವಿಭಾಗ ಮಟ್ಟದ ಕಾಲೇಜು ನಾಟಕೋತ್ಸವ ಕಾರ್ಯಕ್ರಮ ನಡೆಯಿತು ಈ ಕಾರ್ಯಕ್ರಮದಲ್ಲಿ ಸೂರ್ಯಪ್ರಗತಿ ದಿನಪತ್ರಿಕೆಯ ಸಂಪಾದಕರಾದ ರವಿಕುಮಾರ್ ಭಾಗವಹಿಸಿದ್ದರು.



ತುಮಕೂರಿನಲ್ಲಿ ವಿವೇಕಾನಂದ ಕ್ರೀಡಾ ಸಂಸ್ಥೆ ವತಿಯಿಂದ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಹಾಗೂ ಅಭಿನಂದನಾ ಸಮಾರಂಭದಲ್ಲಿ ನಿವೃತ್ತ ಸರ್ಕಲ್ ಇನ್ಸ್‌ಪೆಕ್ಟರ್ ರಾಮಕೃಷ್ಣಯ್ಯ ಸಿ.ಹೆಚ್. ಹಾಗೂ ನಿವೃತ್ತ ಮುಖ್ಯಪೇದೆ ಬಿ. ಮಲ್ಲಯ್ಯರವರನ್ನ ಸನ್ಮಾನಿಸಿ ಆತ್ಮೀಯವಾಗಿ ಬೀಳ್ಕೊಡಲಾಯಿತು. ಸಂಸ್ಥೆಯ ಸುರೇಶ್‌ಕುಮಾರ್, ಕುಮಾರಸ್ವಾಮಿ, ಪುರುಷೋತ್ತಮ್, ನರಸಿಂಹರಾಜು, ಚೇತನಾ, ಪ್ರದೀಪ್‌ಕುಮಾರ್, ಹರೀಶ್, ಪ್ರೀತಮ್, ಹೆಚ್.ಡಿ.ಕುಮಾರ್ ಮತ್ತಿತರರು ಚಿತ್ರದಲ್ಲಿದ್ದಾರೆ.



ತುಮಕೂರಿನ ಮಾಜಿ ಶಾಸಕ ಹಾಗೂ ಹಿರಿಯ ಕಾಂಗ್ರೆಸ್ ಮುಖಂಡ ಎಸ್. ಷಫಿಅಹಮದ್ ಅವರು ನೂತನ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ರವನ್ನು ಭೇಟಿ ಮಾಡಿ ಅಭಿನಂದಿಸಿದರು. ಸುಫಿಯಾ ಲಾ ಕಾಲೇಜಿನ ಸಿಇಓ ಮೊಹಮ್ಮದ್ ಜೈದ್ ಚಿತ್ರದಲ್ಲಿದ್ದಾರೆ.

ಕಾರುಣ್ಯನಿಕೇತನಂ ಶಾಲೆಯಲ್ಲಿ ಬ್ಯಾಕ್‌ಬೆಂಚ್ ಸಂಪ್ರದಾಯಕ್ಕೆ ವಿದಾಯ; ಯು-ಆಕಾರದ ಆಸನ ವ್ಯವಸ್ಥೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಜಿಲ್ಲೆಯ ಶಿರಾ ತಾಲೂಕಿನ ಗಾಣದಹುಣಸೆ ಗ್ರಾಮದಲ್ಲಿರುವ ಶ್ರೀ ಸತ್ಯಸಾಯಿ ಕಾರುಣ್ಯ ನಿಕೇತನಂ ಶಾಲೆಯಲ್ಲಿ ಬ್ಯಾಕ್‌ಬೆಂಚ್ ವ್ಯವಸ್ಥೆಗೆ ವಿದಾಯ ಹೇಳಲಾಗಿದೆ.



ಚಿಕ್ಕಬಳ್ಳಾಪುರ ಜಿಲ್ಲೆಯ ಮುದ್ದೇನಹಳ್ಳಿಯ ಶ್ರೀ ಸತ್ಯ ಸಾಯಿ ಲೋಕಸೇವಾ ಗುರುಕುಲಮ್ ಸಂಸ್ಥೆಯ ಅಧೀನದಲ್ಲಿರುವ ಉಚಿತ ವಸತಿ ಸಹಿತ ಶಿಕ್ಷಣ ನೀಡುತ್ತಿರುವ ಈ ಶಾಲೆಯಲ್ಲಿ, ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಎಂಟನೇ ತರಗತಿಯಲ್ಲಿ ವಿನೂತನ ಪ್ರಯೋಗ ಆರಂಭಿಸಲಾಗಿದೆ. ವಿದ್ಯಾರ್ಥಿಗಳನ್ನು ಯು (ก) ಆಕಾರದಲ್ಲಿ ಕೂರಿಸಿ ಪಾಠ ಬೋಧಿಸುವ ವ್ಯವಸ್ಥೆಯನ್ನು ಅಳವಡಿಸಲಾಗಿದೆ.

ಮುಂದಿನ ಬೆಂಚ್, ಹಿಂದಿನ ಬೆಂಚ್ ಎಂಬ ತಾರತಮ್ಯ ನಿವಾರಿಸಿ ಎಲ್ಲ ವಿದ್ಯಾರ್ಥಿಗಳಿಗೂ ಸಮಾನ ಅವಕಾಶ ಕಲ್ಪಿಸುವ ಉದ್ದೇಶದಿಂದ ಈ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ ಎಂದು ಶಾಲೆಯ ಪ್ರಧಾನ ಪಾಲಕ ದಿಲೀಪ್ ಕುಮಾರ್ ತಿಳಿಸಿದ್ದಾರೆ.

ಕೇರಳ ಮತ್ತು ತಮಿಳುನಾಡಿನಲ್ಲಿ ಈ ಮಾದರಿ ಯಶಸ್ವಿಯಾಗಿದ್ದು, ರಾಜ್ಯದ ದಕ್ಷಿಣ ಕನ್ನಡ ಜಿಲ್ಲೆಯ ಶಾಲೆಯೊಂದರಲ್ಲಿಯೂ ಇದೇ ರೀತಿಯ ಪ್ರಯೋಗ ನಡೆದಿರುವುದು ಗಮನಾರ್ಹ.

ಎರಡು ವರ್ಷಗಳ ಹಿಂದೆ ಬಿಡುಗಡೆಯಾದ ಮಲಯಾಳಂ ಚಿತ್ರ ?ಸ್ಥಾನಾರ್ಥಿ ಶ್ರೀಕುಟ್ಟನ್? ನಲ್ಲಿ ಯು-ಆಕಾರದ ಆಸನ ವ್ಯವಸ್ಥೆಯನ್ನು ತೋರಿಸಲಾಗಿತ್ತು. ಇದರಿಂದ ಪ್ರೇರಣೆಗೊಂಡ ಕೇರಳದ ಹಲವು ಶಾಲೆಗಳು ಈ ಮಾದರಿಯನ್ನು ಅಳವಡಿಸಿಕೊಂಡವು. ಅಲ್ಲಿ ಬ್ಯಾಕ್‌ಬೆಂಚರ್ ಸಂಸ್ಕೃತಿಗೆ ತಡೆ ಹಾಕುವ ಉದ್ದೇಶ ಹೊಂದಲಾಗಿತ್ತು. ಬಳಿಕ ತಮಿಳುನಾಡು ಸರ್ಕಾರವೂ ಕೆಲವು ಶಾಲೆಗಳಲ್ಲಿ ಪೈಲಟ್ ಯೋಜನೆಯಾಗಿ ಯು-ಆಕಾರದ ಆಸನ ವ್ಯವಸ್ಥೆಗೆ ಅನುಮತಿ ನೀಡಿತ್ತು.

ಈ ವ್ಯವಸ್ಥೆಯಿಂದ ಎಲ್ಲ ವಿದ್ಯಾರ್ಥಿಗಳೂ ಶಿಕ್ಷಕರನ್ನು ಸಮಾನವಾಗಿ ನೋಡಬಹುದಾಗಿದ್ದು, ಶಿಕ್ಷಕರಿಗೂ ಪ್ರತಿಯೊಬ್ಬ ವಿದ್ಯಾರ್ಥಿಯತ್ತ ಗಮನ ಹರಿಸಲು ಅನುಕೂಲವಾಗುತ್ತದೆ ಎಂದು ಶಾಲೆಯ ವಾರ್ಡನ್ ಅನಿಲ್ ಕುಮಾರ್ ಹೇಳಿದ್ದಾರೆ.

ಒಂದೇ ಸ್ಥಳದಲ್ಲಿ ನಿರಂತರವಾಗಿ ಕುಳಿತುಕೊಳ್ಳುವುದರಿಂದ ಕುತ್ತಿಗೆ ನೋವು ಬರುವ ಸಾಧ್ಯತೆ ಇರುವುದರಿಂದ, ಎಲ್ಲ ವಿದ್ಯಾರ್ಥಿಗಳಿಗೂ ರೊಟೇಶನ್ ಮಾದರಿಯನ್ನು ಅಳವಡಿಸಲಾಗುತ್ತದೆ" ಎಂದು ದಿಲೀಪ್ ಕುಮಾರ್ ತಿಳಿಸಿದ್ದಾರೆ.

ಈ ರೀತಿಯ ಆಸನ ವ್ಯವಸ್ಥೆಯಿಂದ ವಿದ್ಯಾರ್ಥಿಗಳ ಏಕಾಗ್ರತೆ ಹಾಗೂ ಪಾಠದತ್ತ ಗಮನ ಹೆಚ್ಚುತ್ತದೆ ಎಂಬುದು ವೈಜ್ಞಾನಿಕ ಅಧ್ಯಯನಗಳಿಂದ ದೃಢಪಟ್ಟಿದೆ. ರಾಜ್ಯದ ಎಲ್ಲ ಸರ್ಕಾರಿ ಶಾಲೆಗಳಲ್ಲಿಯೂ ಈ ವ್ಯವಸ್ಥೆಯನ್ನು ಜಾರಿಗೊಳಿಸಬೇಕು ಎಂದು ಮಕ್ಕಳ ಹಕ್ಕುಗಳ ಕಾರ್ಯಕರ್ತರು ಇತ್ತೀಚೆಗೆ ಸರ್ಕಾರವನ್ನು ಒತ್ತಾಯಿಸಿರುವುದನ್ನು ಇಲ್ಲಿ ಸ್ಮರಿಸಬಹುದು.

ನೂತನ ಕೆಪಿಸಿಸಿ ಅಧ್ಯಕ್ಷರಾದ ಹರಿ ಪ್ರಸಾದ್‌ಗೆ ಈಡಿಗರ ಸಂಘದ ಅಭಿನಂದನೆ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾಗಿ ನೇಮಕವಾದ ಈಡಿಗ ಸಮಾಜದ ಹಿರಿಯ ನಾಯಕ ಬಿ.ಕೆ. ಹರಿಪ್ರಸಾದ್ ಅವರನ್ನು ಜಿಲ್ಲಾ ಆರ್ಯ ಈಡಿಗ ಸಂಘದ ಮುಖಂಡರು ಅಭಿನಂದಿಸಿದ್ದಾರೆ. ಇವರನ್ನು ಕೆಪಿಸಿಸಿ ಅಧ್ಯಕ್ಷರನ್ನಾಗಿ ನೇಮಕ ಮಾಡಿದ ಕಾಂಗ್ರೆಸ್ ಹೈಕಮಾಂಡ್ ಹಾಗೂ ಸಹಕರಿಸಿದ ಪಕ್ಷದ ನಾಯಕರಿಗೆ ಧನ್ಯವಾದ ತಿಳಿಸಿದ್ದಾರೆ.



ಜಿಲ್ಲಾ ಆರ್ಯಈ ಡಿಗರ ಸಂಘದ ಅಧ್ಯಕ್ಷ ಎಂ. ನಾಗರಾಜಪ್ಪ ಅವರ ಅಧ್ಯಕ್ಷತೆಯಲ್ಲಿ ಗುರುವಾರನಗರದ ಸಂಘದ ಕಚೇರಿಯಲ್ಲಿ ಪದಾಧಿಕಾರಿಗಳ ಸಭೆ ನಡೆದು, ಈಡಿಗ ಸಮಾಜದ ಬಿ.ಕೆ. ಹರಿಪ್ರಸಾದ್ ಅವರಿಗೆ ಕೆಪಿಸಿಸಿ ಅಧ್ಯಕ್ಷ ಸ್ಥಾನ ನೀಡಿರುವುದಕ್ಕೆ ಸಂತಸ ವ್ಯಕ್ತಪಡಿಸಿ, ಅವರಿಗೆ ಶುಭಕೋರಿದರು. ಸಂಘದ ಪ್ರಧಾನ ಕಾರ್ಯದರ್ಶಿ ಮಲ್ಲಸಂದ್ರ ಶಿವಣ್ಣ ಮಾತನಾಡಿ, ಕಾಂಗ್ರೆಸ್ ಪಕ್ಷದ ನಿಷ್ಠಾವಂತ ನಾಯಕರಾದ ಬಿ.ಕೆ. ಹರಿಪ್ರಸಾದ್ ಅವರಿಗೆ ಪಕ್ಷ ಸೂಕ್ತ ಸ್ಥಾನ ನೀಡಿದೆ, ಆ ಜವಾಬ್ದಾರಿಯನ್ನು ಅವರು ಸಮರ್ಥವಾಗಿ ನಿಭಾಯಿಸುವರು ಎಂಬ ವಿಶ್ವಾಸ ವ್ಯಕ್ತಪಡಿಸಿದರು. ಎಸ್. ಬಂಗಾರಪ್ಪನವರು ಮುಖ್ಯಮಂತ್ರಿಯಾಗಿದ್ದಾಗ ಈಗಿನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಸಚಿವ ಸ್ಥಾನ ನೀಡಿದ್ದರು, ಆ ಸಂದರ್ಭವನ್ನು ಸ್ಮರಿಸಿಕೊಂಡು ಡಿ.ಕೆ.ಶಿವಕುಮಾರ್ ಅವರು ಬಂಗಾರಪ್ಪನವರ ಪುತ್ರ ಮಧು ಬಂಗಾರಪ್ಪ ಹಾಗೂ ನಮ್ಮ ಈಡಿಗ ಸಮಾಜದ ಬೇಳೂರು ಗೋಪಾಲಕೃಷ್ಣ ಅವರಿಗೆ ಸಚಿವ ಸ್ಥಾನ ನೀಡಬೇಕುಎಂದು ಮನವಿ ಮಾಡಿದರು. ಸಂಘದ ಗೌರವಾಧ್ಯಕ್ಷ ಕೆ.ವಿ. ಅಜಯ್‌ಕುಮಾರ್, ಉಪಾಧ್ಯಕ್ಷರಾದ ಆರ್.ನಾರಾಯಣಸ್ವಾಮಿ, ಎಂ.ಎನ್. ನರಸಿಂಹಮೂರ್ತಿ, ಖಜಾಂಚಿ ಹೆಚ್.ಎಂ.ಕುಮಾರ್, ಜಂಟಿ ಕಾರ್ಯದರ್ಶಿಗಳಾದ ಸಿ.ನಾರಾಯಣ್, ಓ.ಎಲ್. ಪುರುಷೋತ್ತಮ್, ನಿರ್ದೇಶಕರಾದ ರವೀಂದ್ರಕುಮಾರ್, ಎಸ್. ಆಂಜನೇಯುಲು, ಟಿ.ಎನ್. ದಾಕ್ಷಾಯಿಣಿ, ಗೌರಮ್ಮ ಶಾಂತಕುಮಾರ್, ಎನ್. ಮಂಜುನಾಥ್, ಎ.ಎನ್. ಮಂಜುನಾಥ್, ಟಿ.ಎಸ್. ನಾರಾಯಣಸ್ವಾಮಿ ಮತ್ತಿತರರು ಬಿ.ಕೆ. ಹರಿಪ್ರಸಾದ್ ಅವರನ್ನು ಅಭಿನಂದಿಸಿದರು.

ಸಚಿವ ಸಂಪುಟ ರಚನೆಯಲ್ಲಿ ಮುಸ್ಲಿಂ ಸಮುದಾಯಕ್ಕೆ ಅನ್ಯಾಯ

ಸೂರ್ಯಪ್ರಗತಿನ್ಯೂಸ್.ಕಾಂ



ಬೆಂಗಳೂರು: ರಾಜ್ಯದ ಕಾಂಗ್ರೆಸ್ ಸರಕಾರದ ನೂತನ ಸಚಿವ ಸಂಪುಟ ರಚನೆಯಲ್ಲಿ ಮುಸ್ಲಿಂ ಸಮುದಾಯಕ್ಕೆ ಮಾಡಿರುವ ಅನ್ಯಾಯವನ್ನು ವೆಲ್ಫೇರ್ ಪಾರ್ಟಿಆಫ್ ಇಂಡಿಯಾ ಜಿಲ್ಲಾಧ್ಯಕ್ಷರು ತಾಜುದ್ದೀನ್ ಷರೀಫ್ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಚುನಾವಣೆಯ ಸಂದರ್ಭದಲ್ಲಿ ಅಲ್ಪಸಂಖ್ಯಾತರ ಪರವಾಗಿ ದೊಡ್ಡ ದೊಡ್ಡ ಭರವಸೆಗಳನ್ನು ನೀಡಿದ್ದ ಕಾಂಗ್ರೆಸ್, ಅಧಿಕಾರಕ್ಕೆ ಬಂದ ನಂತರ ಮುಸ್ಲಿಂ ಸಮುದಾಯವನ್ನು ಕಡೆಗಣಿಸಿರುವುದು ಸ್ಪಷ್ಟವಾಗಿದೆ. ರಾಜ್ಯದ ಜನ ಸಂಖ್ಯೆಯಲ್ಲಿ ಗಣನೀಯ ಪಾಲು ಹೊಂದಿರುವ ಹಾಗೂ ಕಾಂಗ್ರೆಸ್ ಪಕ್ಷದ ಗೆಲುವಿನಲ್ಲಿ ನಿರ್ಣಾಯಕ ಪಾತ್ರ ವಹಿಸಿರುವ ಮುಸ್ಲಿಂ ಸಮುದಾಯಕ್ಕೆ ಪ್ರಥಮ ಹಂತದ ಸಚಿವ ಸಂಪುಟದಲ್ಲಿ ಕೇವಲ ಒಬ್ಬ ಮುಸ್ಲಿಂ ಶಾಸಕರಿಗೆ ಮಾತ್ರ ಸಚಿವ ಸ್ಥಾನ ನೀಡಿರುವುದು ಸಮುದಾಯಕ್ಕೆ ಮಾಡಿದ ಅವಮಾನವಾಗಿದೆ.

ಸಮುದಾಯದ ಜನ ಸಂಖ್ಯೆ ಮತ್ತು ರಾಜಕೀಯ ಪ್ರಾತಿನಿಧ್ಯವನ್ನು ಪರಿಗಣಿಸಿದರೆ ಕನಿಷ್ಠ ಎರಡು ಅಥವಾ ಮೂರು ಸಚಿವ ಸ್ಥಾನಗಳನ್ನು ನೀಡಬೇಕಾಗಿತ್ತು. ಮುಸ್ಲಿಂ ಸಮುದಾಯದ ಮತಗಳನ್ನು ಪಡೆಯುವ ಸಂದರ್ಭದಲ್ಲಿ ಮಾತ್ರ ಜಾತ್ಯತೀತತೆ ಮತ್ತು ಸಾಮಾಜಿಕ ನ್ಯಾಯದ ಮಾತುಗಳನ್ನು ಹೇಳುವ ಕಾಂಗ್ರೆಸ್, ಅಧಿಕಾರ ಹಂಚಿಕೆಯ ಸಂದರ್ಭದಲ್ಲಿ ಮುಸ್ಲಿಮರನ್ನು ಕಡೆಗಣಿಸಿರುವುದು ಅದರ ದ್ವಂದ್ವ ನೀತಿಯನ್ನು ಬಯಲಿಗೆಳೆಯುತ್ತದೆ. ಇದು ಕೇವಲ ಪ್ರಾತಿನಿಧ್ಯದ ಪ್ರಶ್ನೆಯಲ್ಲ, ಸಂವಿಧಾನಾತ್ಮಕ ಸಮಾನತೆಯ ಪ್ರಶ್ನೆಯಾಗಿದೆ. ಆದ್ದರಿಂದ, ಮುಂದಿನ ಸಚಿವ ಸಂಪುಟ ವಿಸ್ತರಣೆಯಲ್ಲಿ ಕನಿಷ್ಠ ನಾಲ್ಕು ಮುಸ್ಲಿಂ ಶಾಸಕರಿಗೆ ಸಚಿವ ಸ್ಥಾನ ನೀಡುವ ಮೂಲಕ ಮುಸ್ಲಿಂ ಸಮುದಾಯಕ್ಕೆ ಆಗಿರುವ ಅನ್ಯಾಯವನ್ನು ಸರಿಪಡಿಸಬೇಕು. ಇಲ್ಲವಾದಲ್ಲಿ ರಾಜ್ಯದಾದ್ಯಂತ ಪ್ರಜಾಸತ್ತಾತ್ಮಕ ರೀತಿಯಲ್ಲಿ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸುತ್ತೇವೆ ಎಂದು ತಾಜುದ್ದೀನ ಷರೀಫ್ ತಿಳಿಸಿದ್ದಾರೆ.

ವಿದ್ಯಾರ್ಥಿಗಳು ಮಹಾಭಾರತ, ರಾಮಾಯಣ ಮಹಾಕಾವ್ಯಗಳನ್ನ ಅರ್ಥೈಸಿಕೊಂಡು ಮುನ್ನಡೆಯಿರಿ; ಲಕ್ಷ್ಮಣ್‌ದಾಸ್

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು; ಮನುಷ್ಯ ಜೀವನದ ಪ್ರತಿಯೊಂದು ದೈನಂದಿನ ಘಟನೆಗಳು ಯಾವುದೇ ಕಾರಣವಿಲ್ಲದೆ ನಡೆಯುವಂತಹದ್ದಲ್ಲ ತನ್ನ ಜೀವನದ ಪ್ರತಿಯೊಂದು ಹಂತವನ್ನು ಮಹಾಭಾರತ ಮತ್ತು ರಾಮಾಯಣದಂತಹ ಮಹಾಕಾವ್ಯಗಳಲ್ಲಿ ಕಾಣಬಹುದಾಗಿದ್ದು ಈ ನಿಟ್ಟಿನಲ್ಲಿ ಇಂದಿನ ಕಾಲಘಟ್ಟದ ವಿದ್ಯಾರ್ಥಿಗಳು ಮೊಬೈಲ್ ದಾಸತ್ವಕ್ಕೆ ಒಳಗಾಗದೆ ರಾಮಾಯಣ, ಮಹಾಭಾರತದ ಮಹಾಕಾವ್ಯಗಳಲ್ಲಿನ ಸಾರವನ್ನು ಅರಿತು ಮುನ್ನಡೆದರೆ ಯಶಸ್ಸಿನ ಗುರಿ ತಲುಪಬಹುದು ಎಂದು ಕೇಂದ್ರ ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಹಾಗೂ ಹಿರಿಯ ರಂಗಭೂಮಿ ಕಲಾವಿದ, ಹರಿಕಥಾ ವಿದ್ವಾನ್ ಡಾ. ಲಕ್ಷ್ಮಣ್ ದಾಸ್ ಅವರು ಕರೆ ನೀಡಿದರು.





ಟೌನ್ ಹಾಲ್ ಬಳಿ ಬಿ.ಎಚ್. ರಸ್ತೆಯಲ್ಲಿರುವ ಅನನ್ಯ ಇನ್ಸಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್ ಕಾಲೇಜು ಸಭಾಂಗಣದಲ್ಲಿ ಕರ್ನಾಟಕ ನಾಟಕ ಅಕಾಡೆಮಿ ಬೆಂಗಳೂರು, ಅನನ್ಯ ಇನ್ಸಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್ ಸಹಯೋಗದೊಂದಿಗೆ ಆಯೋಜಿಸಿದ್ದ ವಿಭಾಗ ಮಟ್ಟದ ಕಾಲೇಜು ನಾಟಕೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ತಾಂತ್ರಿಕವಾಗಿ ಬೆಳೆಯುತ್ತಿರುವ ಈ ಕಾಲಘಟ್ಟದಲ್ಲಿ ಇಂದಿನ ಯುವ ಪೀಳಿಗೆಯು ನಾಡು, ನುಡಿ,ಕಲೆ, ನಾಟಕ ರಂಗಭೂಮಿ, ಸೇರಿದಂತೆ ಇತರೆ ಸಂಸ್ಕೃತಿಗಳ ಕಲಾ ಪ್ರಕಾರಗಳನ್ನು ಉಳಿಸಿ ಬೆಳೆಸುವ ಕೆಲಸ ಮಾಡಬೇಕಿದೆ ಕಾಲೇಜು ವಿದ್ಯಾರ್ಥಿಗಳು ಶಿಕ್ಷಣದ ನೆಪದಲ್ಲಿ ಮೊಬೈಲ್ ದಾಸರಾಗಿ ಕೆಟ್ಟ ದಾರಿ ಹಿಡಿಯುತ್ತಿದ್ದಾರೆ ನಮ್ಮ ಜಿಲ್ಲೆಯಲ್ಲಿ ಗುಬ್ಬಿ ವೀರಣ್ಣ, ಡಾ ರಾಜಕುಮಾರ್, ಕಾಮಿಡಿ ಖ್ಯಾತಿ ನರಸಿಂಹರಾಜು, ಮಂಜುಳಾ ಸೇರಿದಂತೆ ಅನೇಕ ಕಲಾವಿದರು ಯಾವುದೇ ಶಿಕ್ಷಣ ಪಡೆಯದಿದ್ದರೂ ಕಲಾ ಕ್ಷೇತ್ರದಲ್ಲಿ ಮಹೋನ್ನತವಾದ ಸಾಧನೆಯನ್ನ ಮಾಡಿದ್ದಾರೆ ಇದನ್ನೇ ಪ್ರೇರಣೆಯಾಗಿ ತೆಗೆದುಕೊಳ್ಳುವ ವಿದ್ಯಾರ್ಥಿಗಳು ಶಿಕ್ಷಣದ ಜೊತೆ ಜೊತೆಗೆ ಕಲೆ ಸಂಗೀತ ನಾಟಕದ ಅಭಿರುಚಿಯನ್ನು ಬೆಳೆಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಕರ್ನಾಟಕ ನಾಟಕ ಅಕಾಡೆಮಿ ರಿಜಿಸ್ಟ್ರಾರ್ ಬಿ ನೀಲಮ್ಮ ಅವರು ಮಾತನಾಡಿ ರಾಜ್ಯಾದ್ಯಂತ ನಾಟಕ ಅಕಾಡೆಮಿಯು ವಿದ್ಯಾರ್ಥಿ ರಂಗಭೂಮಿಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ರಾಜ್ಯದ ಎಲ್ಲಾ ಜಿಲ್ಲೆಯಲ್ಲಿ ರಂಗ ತರಬೇತಿ ಕಾರ್ಯಾಗಾರ ನಡೆಸುತ್ತಾ ಕಾಲೇಜು ನಾಟಕೋತ್ಸವಗಳನ್ನು ಏರ್ಪಡಿಸುತ್ತಾ ಬಂದಿದೆ ಶೈಕ್ಷಣಿಕ ಆಯಾಮದಿಂದಲೇ ಉದ್ಯೋಗ ದೊರೆಯುತ್ತದೆ ಎಂಬ ಭಾವನೆಯನ್ನು ಬಿಟ್ಟು ರಂಗಭೂಮಿ ಸಂಗೀತ ಕಲೆಯಲ್ಲಿ ತೊಡಗಿಸಿ ಕೊಂಡಾಗ ಯಶಸ್ಸಿನ ಜೀವನವನ್ನು ಇಲ್ಲಿಯೂ ರೂಡಿಸಿಕೊಳ್ಳಬಹುದಾಗಿದ್ದು ಜೊತೆಗೆ ಮಾನಸಿಕವಾಗಿ ಸಮಸ್ಯೆಗಳನ್ನು ಹಿಮ್ಮೆಟ್ಟಿಸುವ ಧೈರ್ಯವನ್ನು ಬೆಳೆಸಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ರಾಜ್ಯ ನಾಟಕ ಅಕಾಡೆಮಿ ಸದಸ್ಯಹಾಗೂ ಹಿರಿಯ ರಂಗಕರ್ಮಿ ಮತ್ತು ಪತ್ರಕರ್ತ ಹಾಗೂ ಝೆನ್ ಟೀಮ್ ರಂಗ ನಿರ್ದೇಶಕ ಉಗಮ ಶ್ರೀನಿವಾಸ್ ಅವರು ಮಾತನಾಡಿ ಇಂದಿನ ಯುವ ಪೀಳಿಗೆ ದೇಶದ ಆಸ್ತಿಯಾಗಿದೆ ತಂತ್ರಜ್ಞಾನ ಮತ್ತು ಡ್ರಗ್ಸ್ ಪಿಡುಗುಗಳು ಯುವ ಜನತೆಯನ್ನ ಹಾಳು ಮಾಡುತ್ತಿದ್ದು ಮೂಲ ರಾಮಾಯಣದಿಂದ ವಿವಿಧ ಆಯಾಮದಲ್ಲಿ ರೂಪುಗೊಂಡಿರುವ ರಾಮಾಯಣದ ಸಾರಾಂಶವವು ಯುವ ಜನರಿಗೆ ದಿವ್ಯ ಔಷಧಿಯಾಗಿದ್ದು ಯುವಕರು ಇದನ್ನ ಅರ್ಥೈಸಿಕೊಂಡು ಮುನ್ನಡೆಯಬೇಕಿದೆ ಎಂದರು.

ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯ ಸಂಪಾದಕರಾದ ರವಿಕುಮಾರ್ ಸಿ.ಎಚ್ ಮಾತನಾಡಿ ಭಾವನಾತ್ಮಕವಾಗಿ ಉಳಿದಿರುವ ರಂಗಭೂಮಿ ಕಲೆಯನ್ನು ವಿದ್ಯಾರ್ಥಿಗಳು ಮೈಗೂಡಿಸಿಕೊಂಡಾಗ ಮಾನಸಿಕವಾಗಿ ಓದಿನ ಕಡೆ ಹೆಚ್ಚು ಗಮನಹರಿಸಲು ಸಾಧ್ಯವಾಗುತ್ತದೆ, ರಾಜಕುಮಾರ್ ಗುಬ್ಬಿ ವೀರಣ್ಣ ಸೇರಿದಂತೆ ಇತರರು ಯಾವುದೇ ಪದವಿ ಪಡೆಯದೇ ರಂಗಭೂಮಿ ಕ್ಷೇತ್ರದಲ್ಲಿ ಸಾಧನೆ ಮಾಡಿದ್ದಾರೆ, ಯುವ ಸಮೂಹವನ್ನು ಕಾಡುತ್ತಿರುವ ಇಂದಿನ ಸಮಸ್ಯೆಗಳಿಗೆ ಸಾಮಾಜಿಕ ಜಾಲತಾಣವು ಎಲ್ಲದಕ್ಕೂ ಉತ್ತರವಾಗದು ಹಾಗಾಗಿ ವಿದ್ಯಾರ್ಥಿಗಳು ತಮ್ಮಲ್ಲಿರುವ ಪ್ರತಿಭೆಯನ್ನು ಹೊರಹಾಕಲು ನಾಟಕಭಿನಯ, ಸಂಗೀತ, ಕಲೆ ಸೇರಿದಂತೆ ಇತರೆ ಕ್ಷೇತ್ರಗಳನ್ನು ಆಕರ್ಷಿಸಬೇಕಾಗಿದೆ ಎಂದು ತಿಳಿಸಿದರು.

ಕರ್ನಾಟಕ ನಾಟಕ ಅಕಾಡೆಮಿ ಸದಸ್ಯರು ಮತ್ತು ನಾಟಕೋತ್ಸವ ಸಂಚಾಲಕರಾದ ರವೀಂದ್ರನಾಥ್ ಮಾತನಾಡಿ ನಾಟಕ ಅಕಾಡೆಮಿಯು ಎಲ್ಲಾ ಬಗ್ಗೆಯ ಕಲೆಗಳನ್ನು ಪ್ರೋತ್ಸಾಹಿಸುತ್ತದೆ ವಿದ್ಯಾರ್ಥಿಗಳು ಅಧ್ಯಯನ ಹಂತದಲ್ಲಿ ಕಲೆಯನ್ನು ಕರಗತ ಮಾಡಿಕೊಂಡರೆ ಯಶಸ್ಸಿನ ಜೀವನ ನಡೆಸಬಹುದಾಗಿದೆ ಬದಕಲು ವೃತ್ತಿಯ ಜೊತೆಗೆ ಪ್ರವೃತ್ತಿಯನ್ನು ಬೆಳೆಸಿಕೊಳ್ಳಬೇಕು ಪ್ರತಿಯೊಬ್ಬರಲ್ಲೂ ಕಲಾವಿದನಿದ್ದು ಅದನ್ನು ಹೊರತರುವ ಕೆಲಸವನ್ನು ಯುವ ಪೀಳಿಗೆ ಮಾಡಬೇಕಿದೆ ಎಂದರು.

ಇದೇ ಸಂದರ್ಭದಲ್ಲಿ ಅಭ್ಯುದಯ ಕಲಾತಂಡ ಪ್ರಸ್ತುತಪಡಿಸಿದ ದಿನೇಶ್ ನಾಯಕ್ ಅವರ ನಿರ್ದೇಶನದ ಮಹಾಭಾರತದ ಕಾದಂಬರಿ ಆಧಾರಿತ ರಾಧೆಯ ನಾಟಕ, ಕುವೆಂಪು ಅವರು ರಚಿಸಿದ ಅನನ್ಯ ಕಲಾತಂಡ ಅವರು ಅಭಿನಯಿಸಿದ ವೈ ಎಂ ಹೇಮಂತ್ ಅವರ ನಿರ್ದೇಶನದಲ್ಲಿ ವಾಲಿವಧೆ ಎಂಬ ನಾಟಕವನ್ನು ಪ್ರದರ್ಶಿಸಲಾಯಿತು.

ಈ ಸಂದರ್ಭದಲ್ಲಿ ಅನನ್ಯ ಇನ್ಸಿಟ್ಯೂಟ್ ಆಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್ ಕಾಲೇಜಿನ ಟ್ರಸ್ಟಿಗಳಾದ ಡಾ. ಹರೀಶ್, ಕರ್ನಾಟಕ ನಾಟಕ ಅಕಾಡೆಮಿ ಸದಸ್ಯ ಸಂಚಾಲಕರಾದ ರವೀಂದ್ರನಾಥ್, ರಂಗ ಸಂಘಟಕರಾದ ಕಾಂತರಾಜು ಕೌತಮಾರನಹಳ್ಳಿ ಸೇರಿದಂತೆ ವಿವಿಧ ಕಲಾ ಸಂಘಟನೆಗಳ ಮುಖ್ಯಸ್ಥರು ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKANAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKANAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. CONTACT : 9901010109 GMAIL: suryapragathi2021@gmail.com.